ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 6 ಗುರುವಾರ 2025


ಮೈಸೂರು ಮಿತ್ರ 46

ಸಂಪುಟ: 46 | ಸಂಚಿಕೆ: 198 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

₹4



ಮೈಸೂರು ಮಿತ್ರ ಗುರುವಾರ 6 ನವೆಂಬರ್ 2025

ರಾಜ್ಯದಲ್ಲಿ ಸಿಎಂ ಬದಲಾವಣೆಯಾದರೆ ಡಾ.ಪರಮೇಶ್ವರ್‌ಗೆ ಆದ್ಯತೆ ನೀಡಬೇಕು

ಡಾ.ಜಿ.ಪರಮೇಶ್ವರ್ ಅಭಿಮಾನಿ ಬಳಗದ ಅಧ್ಯಕ್ಷ ಬಿಳಿಕೆರೆ ರಾಜು ಆಗ್ರಹ



ಸುದ್ದಿಗೋಷ್ಠಿಯಲ್ಲಿ ಬಿಳಿಕೆರೆ ರಾಜು ಮಾತನಾಡಿದರು.

ಮೈಸೂರು,ನ.5(ಜಿಎ)–ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಾದರೆ ಡಾ.ಜಿ.ಪರಮೇಶ್ವರ್ ಅವರಿಗೆ ಮೊದಲ ಆದ್ಯತೆ ನೀಡಬೇಕು ಎಂದು ಡಾ.ಜಿ. ಪರಮೇಶ್ವರ್ ಅಭಿಮಾನಿ ಬಳಗದ ಅಧ್ಯಕ್ಷ ಬಿಳಿಕೆರೆ ರಾಜು ಆಗ್ರಹಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಲವಾರು ದಿನಗಳಿಂದ ರಾಜ್ಯ ರಾಜಕಾರಣದಲ್ಲಿ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಸಾಕಷ್ಟು ಹೇಳಿಕೆ, ಚರ್ಚೆಗಳು ನಡೆಯುತ್ತಿವೆ. ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಬದಲಾವಣೆಗೆ ಮುಂದಾದರೆ ಪರಮೇಶ್ವರ್ ಅವರಿಗೆ ಅವಕಾಶ ನೀಡಬೇಕು. ಅವರು ಈವರೆಗೂ ಪಕ್ಷಕ್ಕಾಗಿ ಸಾಕಷ್ಟು ಶ್ರಮಿಸಿದ್ದಾರೆ. ಅವಕಾಶ ಪ್ರತಿಬಾರಿ ತಪ್ಪಿದಾಗಲೂ ಅವರು ಪಕ್ಷದ ವಿರುದ್ಧ ನಡೆದುಕೊಂಡಿಲ್ಲ. ಬದಲಾಗಿ ಪಕ್ಷದ ಶಿಸ್ತಿನ ಸಿಪಾಯಿಯಂತೆ ಕೆಲಸ ಮಾಡಿದ್ದಾರೆ ಎಂದರು.

ಪ್ರತಿಬಾರಿ ಚುನಾವಣೆ ವೇಳೆ ದಲಿತರಿಗೆ ಸಿಎಂ ಸ್ಥಾನ ನೀಡುವುದಾಗಿ ತಿಳಿಸಿದರೂ ನಂತರ ಕಡೆಗಣನೆ ಮಾಡುತ್ತಾರೆ. ಈ ಸಮುದಾಯದಲ್ಲಿ ಮತದಾರರಿಲ್ಲವೇ? ಎಂದು ಪ್ರಶ್ನಿಸಿದ ಅವರು, ಡಾ.ಜಿ.ಪರಮೇಶ್ವರ್ ಕೆಪಿಸಿಸಿ ಅಧ್ಯಕ್ಷರಾಗಿ, ಗೃಹಮಂತ್ರಿ ಸೇರಿದಂತೆ ಖಾತೆಗಳನ್ನು ವಹಿಸಿದಾಗ ಪಕ್ಷ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಿದ್ದಾರೆ ಎಂದು ತಿಳಿಸಿದರು.

ದಲಿತ ಮುಖ್ಯಮಂತ್ರಿ ಚರ್ಚೆ ಆರಂಭವಾದಾಗ ಪರಮೇಶ್ವರ್ ಬಿಟ್ಟು ಬೇರೆ ನಾಯಕ ಹೆಸರು ಪ್ರಸ್ತಾಪ ಮಾಡುತ್ತಿರುವುದು ಸರಿಯಲ್ಲ. ಮತ್ತೊಂದೆಡೆ ಸಚಿವ ಅನಿಲ್ ಲಾಡ್, ಜಮೀರ್ ಅಹಮ್ಮದ್ ಕಾಂಗ್ರೆಸ್‌ಗೆ ಕೆಲವರು ಅನಿವಾರ್ಯ ಎಂದು ಹೇಳಿಕೆ ನೀಡಿದ್ದಾರೆ. ಆದರೆ, ನಿಜವಾಗಿಯೂ ಪಕ್ಷಕ್ಕೆ ಯಾರು ಅನಿವಾರ್ಯವಲ್ಲ. ಪಕ್ಷ ಎಲ್ಲರಿಗೂ ಅನಿವಾರ್ಯವಾಗಿದೆ. ಬೇರೆ ಪಕ್ಷದಿಂದ ಬಂದು ಇಲ್ಲಿ ಅಧಿಕಾರ ಹಿಡಿದುಕೊಂಡಿದ್ದಾರೆ. ಅದನ್ನು ಮೊದಲು ಅರಿತುಕೊಳ್ಳಬೇಕಿದೆ ಎಂದರು.

ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದಿರುವ ಡಾ.ಜಿ. ಪರಮೇಶ್ವರ್ ಅವರ ಶ್ರಮವನ್ನು ಗುರುತಿಸಿ ಪಕ್ಷ ಅವರಿಗೆ ಸಿಎಂ ಸ್ಥಾನ ನೀಡಿದರೆ, ದಲಿತ ಸಮುದಾಯಕ್ಕೆ ಸಂತಸವಾಗಲಿದೆ. ಹಾಗೇ ಸಮುದಾಯಕ್ಕೂ ಸಾಕಷ್ಟು ಅನುಕೂಲವಾಗಲಿದೆ ಎಂದು ಒತ್ತಾಯಿಸಿದರು. ನಾನು ಕಾಂಗ್ರೆಸ್ ಪಕ್ಷದ ಅಭಿಮಾನಿ, ಪಕ್ಷದ ಪರವಾಗಿ ಸಾಕಷ್ಟು ವರ್ಷ ಸೇವೆ ಸಲ್ಲಿಸಿದ್ದೇನೆ. ಈಗ ಪಕ್ಷಕ್ಕೆ ಸೇರ್ಪಡೆಯಾಗಲು ಮುಂದಾಗಿದ್ದೇನೆ. ಆದರೆ, ಕೆಲವರು ಅದನ್ನು ತಡೆಯುತ್ತಿದ್ದಾರೆ. ಆದರೆ, ನಾನು ಪಕ್ಷದ ಅಭಿಮಾನಿಯಾಗಿ ಕೆಲಸ ಮಾಡುತ್ತೇನೆ ಎಂದರು. ಗೋಷ್ಠಿಯಲ್ಲಿ ಕೃಷ್ಣ, ಶಿವರಾಜು, ನಾಗರಾಜ್, ಲೋಕೇಶ್ ಉಪಸ್ಥಿತರಿದ್ದರು.

ರಾಜ್ಯ ಮುಕ್ತ ವಿವಿಯಲ್ಲಿ ಕುವೆಂಪು ಸ್ಮರಣೆಯೊಂದಿಗೆ ರಾಜ್ಯೋತ್ಸವ; ನಾಡಗೀತೆ ಶತಮಾನ ಸಂಭ್ರಮಾಚರಣೆ





ಕರ್ನಾಟಕ ರಾಜ್ಯ ಮುಕ್ತ ವಿವಿಯಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ನಾಡಗೀತೆ ಶತಮಾನ ಸಂಭ್ರಮಾಚರಣೆ ಅದ್ದೂರಿಯಾಗಿ ನಡೆಯಿತು. ಬಲಚಿತ್ರದಲ್ಲಿ ಯುವ ಕಲಾವಿದರ ಮಹಿಷಾಸುರ ಮರ್ದಿನಿ ನೃತ್ಯರೂಪಕ ಕಾಣಬಹುದು

ಮೈಸೂರು, ನ.5(ಎಂಕೆ)–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ರಸಋಷಿಯ ರಾಷ್ಟ್ರಕವಿ ಕುವೆಂಪು ಸ್ಮರಣೆಯೊಂದಿಗೆ ಕನ್ನಡ ರಾಜ್ಯೋತ್ಸವ ಹಾಗೂ ನಾಡಗೀತೆ ಶತಮಾನ ಸಂಭ್ರಮಾಚರಣೆ ಅದ್ದೂರಿಯಾಗಿ ನಡೆಯಿತು.

ಮುಕ್ತ ವಿವಿಯ ಕುವೆಂಪು ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ವತಿಯಿಂದ ಆಯೋಜಿಸಿದ್ದ ಸಮಾರಂಭ ಅಲಂಕೃತ ಬೆಳ್ಳಿ ರಥದಲ್ಲಿ ಭುವನೇಶ್ವರಿ ತಾಯಿ ಮೆರವಣಿಗೆಯೊಂದಿಗೆ ಚಾಲನೆ ಪಡೆಯಿತು. ವಿವಿಯ ಮುಖ್ಯದ್ವಾರದಿಂದ ಘಟಿಕೋತ್ಸವ ಭವನದವರೆಗೆ ಜಾನಪದ ಕಲಾ ತಂಡಗಳ ನೃತ್ಯ ಪ್ರದರ್ಶನದೊಂದಿಗೆ ಸಾಗಿದ ಮೆರವಣಿಗೆ ಕನ್ನಡ ರಾಜ್ಯೋತ್ಸವ ಸಂಭ್ರಮದ ಮೆರಗು ಹೆಚ್ಚಿಸಿತು.

ಬಳಿಕ ಯುವ ಕಲಾವಿದರ ಮಹಿಷಾಸುರ ಮರ್ದಿನಿ ನೃತ್ಯರೂಪಕ ಮತ್ತು ಮೈಸೂರಿನ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಂದ ನಾಡಗೀತೆಯ ಮಹತ್ವದ ವಿಡಿಯೋ ಚಿತ್ರಣದ ಪ್ರದರ್ಶನದೊಂದಿಗೆ ವೇದಿಕೆ ಕಾರ್ಯಕ್ರಮ ವಿದ್ಯುಕ್ತ ಚಾಲನೆ ನೀಡಲಾಯಿತು.

ನಂತರ ದೀಪ ಬೆಳಗಿಸಿ, ಬಣ್ಣದಿಂದ ಕುವೆಂಪು ಅವರ ಭಾವಚಿತ್ರ ಮೂಡಿಸಿದ ಚಿತ್ರನಟಿ ಹಾಗೂ ವಿಧಾನಪರಿಷತ್ ಸದಸ್ಯೆ ಉಮಾಶ್ರೀ ಮಾತನಾಡಿ, ತಂತ್ರಜ್ಞಾನ ಬೆಳೆದಂತೆ ಭಾಷಾ ಜ್ಞಾನ ಕಡಿಮೆಯಾಗುತ್ತಿದೆ. ಇತ್ತೀಚಿನ ವರ್ಷಗಳಲ್ಲಿ ಕಂಪ್ಯೂಟರ್ ಮತ್ತು ಮೊಬೈಲ್‌ನ ಅತಿಯಾದ ಅವಲಂಬನೆಯಿಂದಾಗಿ ಓದುವ ಹವ್ಯಾಸವೇ ಕಡಿಮೆಯಾಗುತ್ತಿದೆ. ಮೆದುಳಿನ ಬಳಕೆಯೇ ಕಡಿಮೆಯಾಗಿದೆ. ಆದ್ದರಿಂದ ಓದುವವರೇ ಹೆಚ್ಚಿದ್ದಂತಹ ಹಳೆ ಬೇರು ಮತ್ತೆ ಚಿಗುರುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯದ ನಾಡು–ನುಡಿಗೆ ಸಂಬಂಧಪಟ್ಟಂತೆ ಸಾಕಷ್ಟು ಹೋರಾಟಗಳು ನಡೆದಿವೆ. ಅದರಲ್ಲೂ ಮೈಸೂರು ಎಂದರೆ ರಾಜವಂಶಸ್ಥರು ಶಿಕ್ಷಣ ಮತ್ತು ಸಂಗೀತಕ್ಕೆ ನೀಡಿದ ಕೊಡುಗೆ ನೆನಪಾಗುತ್ತದೆ. ಮೈಸೂರು ಒಡೆಯರು ನೀಡಿದ ಪ್ರೋತ್ಸಾಹದೊಂದಿಗೆ ಸ್ಥಾಪಿತವಾದ ಮೈಸೂರು ವಿಶ್ವವಿದ್ಯಾನಿಲಯವೂ 1916ರಿಂದಲೂ ಮಹತ್ವದ ಕೊಡುಗೆ ನೀಡುತ್ತಾ ಬಂದಿದೆ. ಅದೇ ರೀತಿಯಲ್ಲಿ ಉನ್ನತ ವಿದ್ಯಾಭ್ಯಾಸ ಎಲ್ಲರಿಗೂ, ಎಲ್ಲೆಡೆಯೂ ಸಿಗುವಂತಾಗಬೇಕು ಎಂಬ ಉದ್ದೇಶದೊಂದಿಗೆ ಮುಕ್ತ ವಿವಿಯೂ ಕಾರ್ಯನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು.

ಮೈಸೂರಿನಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಮೈಸೂರು ಒಡೆಯರಿಗೆ ಕೃತಜ್ಞರಾಗಿರಬೇಕು. ಜೊತೆಗೆ ರಾಷ್ಟ್ರಕವಿ ಕುವೆಂಪು, ಬಿಎಂಶ್ರೀ, ಗಿರೀಶ್ ಕಾರ್ನಾಡ್, ಚಂದ್ರಶೇಖರ ಕಂಬಾರರು ಸೇರಿದಂತೆ ಇನ್ನಿತರೆ ಮಹನೀಯರು ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆಯಿಂದಲೇ ಅವರು, ಎಷ್ಟು ಕ್ರೀಯಾಶೀಲರಾಗಿದ್ದರು, ಕನ್ನಡ ಭಾಷೆಯನ್ನು ಎಷ್ಟು ಪ್ರೀತಿಸುತ್ತಿದ್ದರು ಎಂಬುದು ತಿಳಿಯುತ್ತದೆ ಎಂದರು.

ಮುಕ್ತ ವಿವಿ ನಮ್ಮ ಹೆಮ್ಮೆ: ಎಸ್‌ಎಸ್‌ಎಲ್‌ಸಿ ಮಾಡಿದ್ದ ಉಮಾಶ್ರೀ, ರಾಜ್ಯಶಾಸ್ತ್ರ ವಿಷಯದಲ್ಲಿ ಎಂಎ ಮಾಡಲು ಅವಕಾಶ ನೀಡಿದ್ದು ಮುಕ್ತ ವಿಶ್ವವಿದ್ಯಾನಿಲಯ. ಕಲಿಕೆಗೆ ಮತ್ತು ವಿದ್ಯೆಗೆ ವಯಸ್ಸಿಲ್ಲ ಎಂಬುದನ್ನು ಮುಕ್ತ ವಿವಿ ಸಾಬೀತುಪಡಿಸುತ್ತಿದೆ. ಇಂತಹ ವಿವಿಗಳಲ್ಲಿ ಓದುವುದೆಂದರೆ ಬಹಳ ಹೆಮ್ಮೆ ಅನ್ನಿಸುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯ ಮುಕ್ತ ವಿವಿ ಡೀನ್(ಶೈಕ್ಷಣಿಕ) ಪ್ರೊ.ಎಂ. ರಾಮನಾಥಂ ನಾಯ್ಡು ಮಾತನಾಡಿ, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ ಕನ್ನಡ ಕಸ್ತೂರಿಯ ಪರಿಮಳದಿಂದ ರಾಷ್ಟ್ರಕವಿ ಕುವೆಂಪು ಅವರಿಂದ ಕಂಬಾರರವರೆಗೆ 8 ಜ್ಞಾನಪೀಠ ಪ್ರಶಸ್ತಿಗಳು ಕನ್ನಡಕ್ಕೆ ಸಂದಿವೆ. ಸಕ್ಕರೆನಾಡು, ರೇಷ್ಮೆನಾಡು, ಬಯಲುನಾಡು, ಕದಂಬನಾಡು, ಗಂಗಾವತಿ ನಾಡು, ಹೊಯ್ಸಳ ನಾಡು ಮುಂತಾದವುಗಳೆಲ್ಲವೂ ಸೇರಿ ಕನ್ನಡನಾಡಾಗಿದೆ ಎಂದರು. ಕುಲಸಚಿವ ಪ್ರೊ.ಎಸ್.ಕೆ.ನವೀನ್‌ಕುಮಾರ್ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಜಾನಪದ ವಿದ್ವಾಂಸ ಪ್ರೊ.ಪಿ.ಕೆ. ರಾಜಶೇಖರ್, ಕೆಎಸ್‌ಓಯು ಕುಲಸಚಿವ ಡಾ.ಸಿ.ಎಸ್. ಆನಂದ್‌ಕುಮಾರ್, ಹಣಕಾಸು ಅಧಿಕಾರಿ ಪ್ರೊ.ಎಸ್. ನಿರಂಜನ್‌ರಾಜ್, ಡೀನ್(ಅಧ್ಯಯನ ಕೇಂದ್ರ) ಡಾ.ಎನ್.ಆರ್.ಚಂದ್ರೇಗೌಡ, ಡಾ.ಅವರೆಕಾಡು ವಿಜಯಕುಮಾರ್, ಕೆ.ಎಸ್.ಮಮತ, ಜಿ.ಎಸ್. ಮಂಜುನಾಥ್ ಮತ್ತಿತರರು ಉಪಸ್ಥಿತರಿದ್ದರು.

ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಮರಾಠಿಗರ ಪುಂಡಾಟ

ನ.13ರಂದು ಮೈಸೂರು ಡಿಸಿ ಕಚೇರಿ ಮುಂದೆ ಪ್ರತಿಭಟನೆ

ಮೈಸೂರು,ನ.5(ಜಿಎ)–ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಪುಂಡಾಟ ನಡೆಸಿದ ಮರಾಠಿ ಕನ್ನಡ ವಿರೋಧೀ ಸಂಘಟನೆಗಳನ್ನು ನಿಷೇಧಿಸಬೇಕು, ರಾಷ್ಟ್ರ ದ್ರೋಹಿ ಕಾಯ್ದೆ ಮಾದರಿ ನಾಡ ದ್ರೋಹಿ ಕಾಯ್ದೆ ಜಾರಿಗೆ ತರಬೇಕೆಂದು ಒತ್ತಾಯಿಸಿ ಕದಂಬ ಸೈನ್ಯ ಕನ್ನಡ ಸಂಘಟನೆ ವತಿಯಿಂದ ನ.13ರಂದು ಜಿಲ್ಲಾಧಿಕಾರಿ ಕಚೇರಿ ಬಳಿ ಮಧ್ಯಾಹ್ನ 3ಕ್ಕೆ ಮೌನ ಪ್ರತಿಭಟನೆ ನಡೆಸಿ, ಡಿಸಿ ಮೂಲಕ ಸಿಎಂಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಅಧ್ಯಕ್ಷ ಬೇಕರಿ ರಮೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡ, ಕನ್ನಡಿಗರನ್ನು ಅತ್ಯಂತ ತುಚ್ಛವಾಗಿ ಅಪಮಾನಿಸಿ ವಿಡಿಯೋ ಬಿತ್ತರಿಸಿ ಪರಭಾಷಾ ದ್ವೇಷಿಗಳು, ದೌರ್ಜನ್ಯ ನಡೆಸುವವರೆಂದು ಬಿಂಬಿಸಲಾಗುತ್ತಿದೆ. ಆದರೂ ಇವರ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿಲ್ಲವೆಂದು ಬೇಸರಿಸಿದರು.

ಕನ್ನಡ ರಾಜ್ಯೋತ್ಸವ ಆಚರಣೆ ವೇಳೆ ಬೆಳಗಾವಿಯಲ್ಲಿ ಮರಾಠಿ ಶಿವಸೇನೆ ಹಾಗೂ ಕನ್ನಡ ವಿರೋಧಿ ಸಂಘಟನೆಗಳ ಕಾರ್ಯಕರ್ತರು ಕನ್ನಡಿಗರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಆದರೂ ಇವರನ್ನು ಕಠಿಣವಾಗಿ ಶಿಕ್ಷಿಸಿಲ್ಲ. ರಾಜ್ಯ ಉದ್ದಿಮೆಗಳಲ್ಲಿ ಪರಭಾಷಿಗರೇ ಪಾರುಪತ್ಯವಾಗಿದೆ. ಕನ್ನಡಿಗರನ್ನು ಮೂಲೆಗುಂಪು ಮಾಡಲಾಗುತ್ತಿದೆ. ಹೀಗಾಗಿ ಸರ್ಕಾರ ಇತ್ತ ಗಂಭೀರ ಗಮನ ಹರಿಸಬೇಕೆಂದು ಅಂದಿನ ಪ್ರತಿಭಟನೆ ವೇಳೆ ಆಗ್ರಹಿಸಲಾಗುವುದು ಎಂದರು. ಗೋಷ್ಠಿಯಲ್ಲಿ ಬಿ.ಶಿವಕುಮಾರ್, ನಾಗೇಶ್, ಉಮೇಶ್, ಪುಟ್ಟಸ್ವಾಮಿ, ಸ್ವಾಮಿ ಉಪಸ್ಥಿತರಿದ್ದರು.

ಇಂದು, ನಾಳೆ ಹಲವೆಡೆ ನೀರು ವ್ಯತ್ಯಯ

ಮೈಸೂರು,ನ.5–ಮೈಸೂರು ನಗರಕ್ಕೆ ನೀರು ಸರಬರಾಜು ಮಾಡುವ ಹೊಂಗಳ್ಳಿ ಯಂತ್ರಾಗಾರದಲ್ಲಿ ಸೆಸ್ಕ್ ವತಿಯಿಂದ ತುರ್ತು ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದರಿಂದ ನ.6 ಮತ್ತು 7ರಂದು ಸಿಎಸ್‌ಆರ್ ಮತ್ತು ಹೆಚ್‌ಎಲ್‌ಆರ್ ಪ್ರಾಂತ್ಯಗಳಿಗೆ, ವಾರ್ಡ್ ನಂ.1ರಿಂದ 7, ವಾರ್ಡ್ ನಂ.20, 23, 38, ವಾರ್ಡ್ ನಂ.42ರಿಂದ 45, ವಾರ್ಡ್ ನಂ.47, ಹೆಬ್ಬಾಳ, ಕುಂಬಾರಕೊಪ್ಪಲು, ಮಂಚೇಗೌಡನಕೊಪ್ಪಲು, ಕೆ.ಜಿ.ಕೊಪ್ಪಲ್, ಮೇಟಗಳ್ಳಿ, ಲೋಕನಾಯಕನಗರ, ಬೃಂದಾವನ ಬಡಾವಣೆ, ಒಂಟಿಕೊಪ್ಪಲು, ಪಡುವಾರಹಳ್ಳಿ, ವಿನಾಯಕನಗರ, ಮಂಡಿ ಮೊಹಲ್ಲಾ, ಲಷ್ಕರ್ ಮೊಹಲ್ಲಾ, ಶಾರದಾದೇವಿನಗರ, ಸರಸ್ವತಿಪುರಂ, ಬೋಗಾದಿ, ವಿಜಯನಗರ 1, 3ನೇ ಹಂತ, ಗೋಕುಲಂ 1, 2, 3ನೇ ಹಂತ ಹಾಗೂ ಹೊರವಲಯಗಳಾದ ಆರ್‌ಎಂಪಿ, ಬಿಇಎಂಎಲ್, ಯಾದವಗಿರಿ, ಬನ್ನಿಮಂಟಪ ಎ, ಬಿ, ಸಿ ಲೇಔಟ್, ಈರನಗೆರೆ, ಸಿದ್ದಿಖಿನಗರ, ಶಿವರಾತ್ರೀಶ್ವರನಗರ, ತಿಲಕ್‌ನಗರ, ಬಡೆಮಕಾನ್, ಹಲೀಂನಗರ, ದೇವರಾಜ ಮೊಹಲ್ಲಾ, ಭಾಗಶಃ ಎನ್.ಆರ್.ಮೊಹಲ್ಲಾ ಭಾಗಶಃ ಪ್ರದೇಶಗಳು, ನಜರ್‌ಬಾದ್ ಮೊಹಲ್ಲಾ, ವಿದ್ಯಾರಣ್ಯಪುರಂ, ಕೃಷ್ಣಮೂರ್ತಿಪುರಂ, ಜನತಾನಗರ, ಕೆಹೆಚ್‌ಬಿ ಕಾಲೋನಿ, ಹೂಟಗಳ್ಳಿ, ವಿಜಯನಗರ 2ನೇ ಹಂತ ಹಾಗೂ ಇತ್ಯಾದಿ ಪ್ರದೇಶಗಳಲ್ಲಿ ನೀರು ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಅಮೆರಿಕದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ಅಮೆರಿಕದಲ್ಲಿ ಅಟ್ಲಾಂಟ ನೃಪತುಂಗ ಕನ್ನಡ ಕೂಟದಿಂದ ನಡೆದ ರಾಜ್ಯೋತ್ಸವ ಸಮಾರಂಭದಲ್ಲಿ ಸಾಹಿತಿ ಜಯಪ್ರಕಾಶ್‌ರಾವ್ ಭಾಗವಹಿಸಿದ್ದರು. ಉದ್ಯೋಗ ನಿಮಿತ್ತ ಬಂದು ಇಲ್ಲಿ ಕೂಡ ಮಾತೃಭಾಷೆ ಬಗ್ಗೆ ಅಭಿಮಾನ ಇರಿಸಿಕೊಂಡು ಬಾಳುವ ಅಭಿಮಾನ ನಿಜವಾದ ಕನ್ನಡ ಪ್ರೀತಿ ಎಂದು ಅವರು ಕೊಂಡಾಡಿದ್ದಾರೆ. ಬಳಿಕ ಅಲ್ಲಿನ ಮಕ್ಕಳು, ಕಲಾವಿದ ಬಳಗದಿಂದ ವಿವಿಧ ಸಾಂಸ್ಕೃತಿಕ ಪ್ರದರ್ಶನ ನೀಡಲಾಯಿತು.

ರಾಜ್ಯದ ಮುಂದಿನ ಎರಡೂವರೆ ವರ್ಷಕ್ಕೆ ಖರ್ಗೆ ಸಿಎಂ ಮಾಡಿ

ರಾಹುಲ್, ಸೋನಿಯಾ ಗಾಂಧಿಗೆ ಪ್ರಬುದ್ಧ ಭಾರತ ಭೀಮ್ ಸೇನೆ ಪತ್ರ

ಮೈಸೂರು,ನ.5(ಜಿಎ)–ರಾಜ್ಯ ಕಾಂಗ್ರೆಸ್ ಸರ್ಕಾರದ ಮುಂದಿನ ಎರಡೂವರೆ ವರ್ಷಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಿಎಂ ಮಾಡಬೇಕೆಂದು ಆಗ್ರಹಿಸಿ ಪಕ್ಷದ ವರಿಷ್ಠರಾದ ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರಿಗೆ ಪ್ರಬುದ್ಧ ಭಾರತ ಭೀಮ್ ಸೇನೆ ಪತ್ರ ಬರೆದಿದೆ ಎಂದು ರಾಜ್ಯಾಧ್ಯಕ್ಷ ಸಿದ್ದರಾಜು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದಲೂ ಅಲ್ಪಸಂಖ್ಯಾತರು ಹಾಗೂ ದಲಿತರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಲೇ ಬಂದಿದ್ದಾರೆ. ಆದರೆ ಬಸವಲಿಂಗಪ್ಪನವರ ಕಾಲದಿಂದ ಹಿಡಿದು ಮಲ್ಲಿಕಾರ್ಜುನ ಖರ್ಗೆ ಹಾಗೂ ಜಿ.ಪರಮೇಶ್ವರ್ ಅವರಿಗೆ ಒಂದಲ್ಲ ಒಂದು ರೀತಿ ಅನ್ಯಾಯವಾಗುತ್ತಲೇ ಬಂದಿದೆ. 1999ರಿಂದ 2004ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಂಪೂರ್ಣ ಜವಾಬ್ದಾರಿ ಹೊತ್ತವರು ಮಲ್ಲಿಕಾರ್ಜುನ ಖರ್ಗೆ. ಹೀಗಿದ್ದರೂ ಸಿಎಂ ಸ್ಥಾನ ನೀಡುವಾಗ ಇವರನ್ನು ಕಡೆಗಣಿಸುತ್ತಿರುವುದು ಬೇಸರದ ಸಂಗತಿ. ಪಕ್ಷಕ್ಕಾಗಿ ಹಗಲಿರುಳೂ ದುಡಿಯುತ್ತಿದ್ದಾರೆ. ಆದರೆ ಪಕ್ಷವು ಇತರರಿಗೇ ಮಣೆ ಹಾಕುತ್ತ ಬಂದಿದೆ. ಈ ಬಾರಿ ಆದರೂ ಖರ್ಗೆ ಅವರಿಗೆ ಸಿಎಂ ಸ್ಥಾನ ನೀಡದಿದ್ದಲ್ಲಿ ಸಮುದಾಯದವರು ಮುಂಬರುವ ಚುನಾವಣೆ ವೇಳೆ ಪಾಠ ಕಳಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಚೆಲುವರಾಜು, ರಂಗಸ್ವಾಮಿ, ನಿಂಗರಾಜು, ಸಿ.ಶಿವರಾಮು, ಮರಿಸ್ವಾಮಿ, ಪ್ರಸನ್ನಕುಮಾರ್, ಅನ್ವರ್‌ಪಾಷ, ಮಂಜಯ್ಯ ಇದ್ದರು.

ಮೈಸೂರು ವಿವಿ ಅಧಿಕಾರಿಗಳ ವಿರುದ್ಧ 'ಲಂಚ' ಆರೋಪ ಮಾಡಿದ್ದ ವಿದ್ಯಾರ್ಥಿನಿ ವಿಚಾರ ಸುಖಾಂತ್ಯ!



ಮೈಸೂರು, ನ.5– ಅಂಕಪಟ್ಟಿ ನೀಡಲು ಲಂಚ ಕೇಳುತ್ತಿದ್ದಾರೆ ಎಂದು ಆರೋಪಿಸಿ, ಮೈಸೂರು ವಿವಿ ಅಧಿಕಾರಿಗಳ ವಿರುದ್ಧ ಮಂಗಳವಾರ ಏಕಾಂಗಿ ಹೋರಾಟ ನಡೆಸಿದ್ದ ಎಂಎ ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿನಿ ಡಿ.ಸಿ.ಪ್ರಭ ಅವರು ಇಂದು ಉಲ್ಟಾ ಹೊಡೆದಿದ್ದು, ತಾವು ವಿಭಾಗದ ಹೆಚ್‌ಓಡಿ ಮೇಲೇ ಯಾವುದೇ ಭ್ರಷ್ಟಾಚಾರದ ಆರೋಪ ಮಾಡಿಲ್ಲ ಎಂದು ಮೈಸೂರು ವಿವಿ ಕುಲಸಚಿವರಾದ ಸವಿತಾ ಅವರಿಗೆ ಲಿಖಿತವಾಗಿ ತಿಳಿಸಿದ್ದಾರೆ. ಅಲ್ಲದೆ, ತಾವು ಪಾವತಿಸಬೇಕಾಗಿದ್ದ 3255 ರೂ. ಶುಲ್ಕ ಪಾವತಿಸಿ ತಮ್ಮ ಅಂಕಪಟ್ಟಿ ಪಡೆದಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಕುಲಸಚಿವರು, ಡಿ.ಸಿ.ಪ್ರಭಾ 2021–22ನೇ ಸಾಲಿನ ಎಂಎ ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿನಿಯಾಗಿದ್ದು, ಇಂದು ತಮ್ಮ ಬಳಿ ಬಂದು ಕಾಲೇಜಿನ ಶುಲ್ಕ ಪಾವತಿ ಬಗ್ಗೆ ಚಲನ್ ಹಾಜರುಪಡಿಸಿದರು. ನಾನು ಯಾವುದೇ ಲಂಚ ಆರೋಪ ಮಾಡುತ್ತಿಲ್ಲವೆಂದು ಅವರು ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ. ಡಿ.ಸಿ. ಪ್ರಭಾ 2021–22ನೇ ಕೋವಿಡ್ ಸಂದರ್ಭದಲ್ಲಿ ಕಾಲೇಜಿನ ಶುಲ್ಕ ಪಾವತಿಸಿರುತ್ತಾರೆ. ಇದನ್ನು ಪರಿಶೀಲಿಸಿ ಖಾತರಿ ಪಡಿಸಿಕೊಂಡು ಬಾಕಿ ಶುಲ್ಕ ಪಾವತಿಸಿಕೊಂಡು ವಿದ್ಯಾರ್ಥಿಯ ಅಂಕಪಟ್ಟಿಯನ್ನು ಹಿಂದಿರುಗಿಸಲಾಯಿತು ಹಾಗೂ ಇಂತಹ ಸಮಸ್ಯೆಗಳಿದ್ದಾಗ ಮೇಲಾಧಿಕಾರಿಗಳನ್ನು ಭೇಟಿ ಮಾಡಿ ಅಗತ್ಯ ಸಹಾಯ ಪಡೆಯಬೇಕೆಂದು ತಾವು ಕಿವಿಮಾತು ಹೇಳಿ, ಆತ್ಮಸ್ಥೈರ್ಯ ತುಂಬಿ ಕಳುಹಿಸಿರುವುದಾಗಿ ತಿಳಿಸಿದ್ದಾರೆ.

ಜೆಎಸ್‌ಎಸ್ ಗ್ರಂಥಮಾಲೆ ಪ್ರಕಟಣೆಗಳಿಗೆ 50% ರಿಯಾಯಿತಿ

ಮೈಸೂರು, ನ.5– ಜೆಎಸ್‌ಎಸ್ ಗ್ರಂಥಮಾಲೆಯ ಎಲ್ಲಾ ಪ್ರಕಟಣೆಗಳಿಗೆ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನವೆಂಬರ್ ತಿಂಗಳಿನಲ್ಲಿ ಶೇ.50ರಷ್ಟು ರಿಯಾಯಿತಿ ನೀಡಲಾಗುತ್ತದೆ. ಆಸಕ್ತರು ಜೆಎಸ್‌ಎಸ್ ಮಹಾವಿದ್ಯಾಪೀಠದ ಆವರಣದಲ್ಲಿರುವ ಜೆಎಸ್‌ಎಸ್ ಬುಕ್ ಹೌಸ್, ಶ್ರೀ ಸುತ್ತೂರ ಮಠದ ಮೈಸೂರು ಶಾಖೆ ಹಾಗೂ ಶ್ರೀ ಸುತ್ತೂರು ಕ್ಷೇತ್ರದ ಶ್ರೀ ಕರ್ತೃಗದ್ದುಗೆ ಮತ್ತು ಸುತ್ತೂರು ಶ್ರೀಮಠದ ಆವರಣದಲ್ಲಿರುವ ಪುಸ್ತಕ ಮಳಿಗೆಗಳಲ್ಲಿ ಪ್ರಯೋಜನ ಪಡೆಯಬಹುದು. ಮಾಹಿತಿಗೆ ಮೊ: 9900953152, 9731254484.

ಅಪರಿಚಿತ ಶವ ಪತ್ತೆ

ಮೈಸೂರು: ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದಲ್ಲಿ ಅಸ್ವಸ್ಥರಾಗಿ ಬಿದ್ದಿದ್ದಂತಹ ಅಪರಿಚಿತ ಸುಮಾರು 38 ವರ್ಷ ವಯಸ್ಸಿನ ವ್ಯಕ್ತಿಯನ್ನು ಅ.27ರಂದು ಕೆ.ಆರ್. ಆಸ್ಪತ್ರೆಗೆ ಸೇರಿಸಲಾಗಿದ್ದು, ಅವರು ಚಿಕಿತ್ಸೆ ಫಲಿಸದೇ ಅ.30ರಂದು ನಿಧನರಾಗಿದ್ದಾರೆ. ಇವರ ವಾರಸುದಾರರಿದ್ದಲ್ಲಿ ಲಷ್ಕರ್ ಪೊಲೀಸ್ ಠಾಣೆ 0821–2418107, 2418307 ಸಂಪರ್ಕಿಸುವಂತೆ ಕೋರಲಾಗಿದೆ.

ಇಂದು ಇಂಡೋ–ಆಸೀಸ್ 4ನೇ ಟಿ20 ಪಂದ್ಯ



ಗೋಲ್ಡ್ ಕೋಸ್ಟ್, ನ.5(ವಿವಿಹೆಚ್)– ಭಾರತ ಮತ್ತು ಆಸ್ಟ್ರೇಲಿಯಾ ನಡುವಣ 4ನೇ ಟಿ20 ಪಂದ್ಯ ನಾಳೆ (ನ.6) ನಡೆಯಲಿದೆ. ಗೋಲ್ಡ್ ಕೋಸ್ಟ್‌ನ ಬಿಲ್ ಪಿಪ್ಪನ್ ಓವಲ್ ಕ್ರಿಕೆಟ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಲಿದೆ.

ಐದು ಪಂದ್ಯಗಳ ಸರಣಿಯ ಮೊದಲ ಪಂದ್ಯ ಮಳೆಯಿಂದ ರದ್ದಾಗಿತ್ತು. ನಂತರ ನಡೆದ 2 ಪಂದ್ಯಗಳಲ್ಲಿ ಉಭಯ ತಂಡಗಳು 1–1 ಅಂತರದಿಂದ ಸಮಬಲ ಸಾಧಿಸಿವೆ. ಇದೀಗ ನಾಲ್ಕನೇ ಪಂದ್ಯದಲ್ಲಿ ಗೆಲ್ಲುವ ತಂಡ ಸರಣಿ ಸೋಲನ್ನು ತಪ್ಪಿಸಿಕೊಳ್ಳಬಹುದು. ಅಲ್ಲದೆ ಕೊನೆಯ ಪಂದ್ಯದಲ್ಲಿ ಜಯಗಳಿಸಿ ಸರಣಿಯನ್ನು ಜಯಿಸಬಹುದು. ಹೀಗಾಗಿ ನಾಳಿನ ಪಂದ್ಯವು ಉಭಯ ತಂಡಗಳ ಪಾಲಿಗೆ ಸರಣಿ ನಿರ್ಣಾಯಕ ಪಂದ್ಯವಾಗಿರಲಿದ್ದು, ಜಿದ್ದಾಜಿದ್ದಿನ ಪಂದ್ಯಕ್ಕೆ ಬಿಲ್ ಪಿಪ್ಪನ್ ಓವಲ್ ಕ್ರಿಕೆಟ್ ಮೈದಾನ ಸಾಕ್ಷಿಯಾಗಲಿದೆ.

ಈ ನಿರ್ಣಾಯಕ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಕಳೆದ ಮ್ಯಾಚ್‌ನಲ್ಲಿ ಕಣಕ್ಕಿಳಿದಿದ್ದ ಬಳಗವನ್ನೇ ಮತ್ತೆ ಕಣಕ್ಕಿಳಿಸುವ ಸಾಧ್ಯತೆ ಹೆಚ್ಚಿದೆ. ಏಕೆಂದರೆ ಹೋಬಾರ್ಟ್‌ನಲ್ಲಿ ನಡೆದ ಪಂದ್ಯದಲ್ಲಿ ಟೀಮ್ ಇಂಡಿಯಾ 5 ವಿಕೆಟ್‌ಗಳ ಜಯ ಸಾಧಿಸಿತ್ತು.

ಇದರಿಂದಾಗಿ 4ನೇ ಟಿ20 ಪಂದ್ಯದಿಂದ ಸಂಜು ಸ್ಯಾಮ್ಸನ್ ಹಾಗೂ ಹರ್ಷಿತ್ ರಾಣಾ ಹೊರಗುಳಿಯಬೇಕಾಗಿ ಬರಬಹುದು.

ಈ ಇಬ್ಬರನ್ನು 3ನೇ ಟಿ20 ಪಂದ್ಯದಿಂದ ಹೊರಗಿಡಲಾಗಿತ್ತು. ಇವರ ಬದಲಿಗೆ ಜಿತೇಶ್ ಶರ್ಮಾ ಹಾಗೂ ಅರ್ಷದೀಪ್ ಸಿಂಗ್ ಅವರನ್ನು ಕಣಕ್ಕಿಳಿಸಲಾಗಿತ್ತು. ಇವರನ್ನೇ 4ನೇ ಟಿ20 ಪಂದ್ಯದಲ್ಲೂ ಮುಂದುವರೆಸುವ ಸಾಧ್ಯತೆ ಹೆಚ್ಚಿದೆ.

ನಾಯಕ ಸೂರ್ಯಕುಮಾರ್ ಯಾದವ್ ಫಾರ್ಮ್ ಕಾಡುತ್ತಿದ್ದು, ನಾಳಿನ ಪಂದ್ಯದಲ್ಲಿ ಪುಟಿದೇಳುವ ನಿರೀಕ್ಷೆಯಿದೆ.

ಈ ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ 1.45 ಗಂಟೆಗೆ ಆರಂಭವಾಗಲಿದ್ದು, ಸ್ಟಾರ್ ಸ್ಪೋರ್ಟ್ಸ್ ಚಾನೆಲ್ ಮೂಲಕ ಹಾಗೂ ಲೈವ್ ಸ್ಟ್ರೀಮಿಂಗ್ ಅನ್ನು ಜಿಯೋಸ್ಟಾರ್‌ನಲ್ಲಿ ವೀಕ್ಷಿಸಬಹುದಾಗಿದೆ

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

6.11.2025 ಗುರುವಾರ, ಮಳೆ ನಕ್ಷತ್ರ: ವಿಶಾಖ 6.11.2025 ರಿಂದ 19.11.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಭರಣಿ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

- **ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿ :** ಜೆಎಸ್‌ಎಸ್ ಅಂತರ ಸಂಸ್ಥೆ ಕ್ರಿಕೆಟ್ ಪಂದ್ಯಾವಳಿ, ಮುಖ್ಯ ಅತಿಥಿಗಳು : ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಅಧ್ಯಕ್ಷತೆ : ಡಾ. ಪಿ. ನಂಜುಂಡಸ್ವಾಮಿ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ.ಸಿ. ನಟರಾಜು, ಉಪ ಪ್ರಿನ್ಸಿಪಾಲ್ ಡಾ. ಪಿ. ಮಲ್ಲು, ಸ್ಥಳ: ಜೆಎಸ್‌ಎಸ್ ಮೈದಾನ, ಬೆಳಗ್ಗೆ 9ಕ್ಕೆ.
- **ಸದ್ವಿದ್ಯಾ ಶಿಕ್ಷಣ ಸಂಸ್ಥೆಗಳು :** ನಗರ ಮಟ್ಟದ ಅಂತರ ಪ್ರೌಢಶಾಲಾ ಆಶುಭಾಷಣ ಸ್ಪರ್ಧೆ, ಅಧ್ಯಕ್ಷತೆ : ಸಂಸ್ಥೆ ಗೌರವ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು, ಉದ್ಘಾಟನೆ : ಗಾಯಕರಾದ ಡಾ. ಶ್ರೀಮತಿ ದೀಪಿಕಾ ಪಾಂಡುರಂಗಿ, ಮುಖ್ಯ ಅತಿಥಿಗಳು : ಸಂಸ್ಥೆ ಕಾರ್ಯದರ್ಶಿ ಎಂ.ಡಿ.ಗೋಪಿನಾಥ್, ಸ್ಥಳ: ಶಾಲೆ ಆವರಣ, ಬೆಳಗ್ಗೆ 9.30ಕ್ಕೆ.
- **ಸಂತ ಫಿಲೋಮಿನಾ ಕಾಲೇಜು :** ಕನ್ನಡ ರಾಜ್ಯೋತ್ಸವ ಆಚರಣೆ, ಉಪಸ್ಥಿತರು : ಡಾ. ಸಂತೋಷ್ ಚೊಕ್ಕಾಡಿ, ಡಾ. ಲೂರ್ದ್ ಪ್ರಸಾದ್ ಜೋಸೆಫ್, ಆಡಳಿತಾಧಿಕಾರಿ ಜ್ಞಾನಪ್ರಗಾಸಂ, ಪ್ರಿನ್ಸಿಪಾಲ್ ಡಾ. ರವಿ ಜೆ.ಡಿ. ಸಲ್ಡಾನ್ಹಾ, ಪ್ರೊ. ಎ.ಟಿ. ಸದೆಬೋಸ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 9.30ಕ್ಕೆ.
- **ಗೀತಾ ಶಿಶು ಶಿಕ್ಷಣ ಸಂಘ :** ಶಿಕ್ಷಣ ತಜ್ಞರಾದ ಜಿಎಸ್‌ಎಸ್‌ಎಸ್‌ನ ಸಂಸ್ಥಾಪಕ ಗೌರವ ಕಾರ್ಯದರ್ಶಿ ದಿವಂಗತ ಪ್ರೊ.ಬಿ.ಎಸ್.ಪಂಡಿತ್ ಅವರ ನೆನಪಿನಲ್ಲಿ ಪದ್ಮಶ್ರೀ ಮತ್ತು ಕರ್ನಾಟಕ ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ ಪುರಸ್ಕೃತ ಪಂಡಿತ್ ಎಂ.ವೆಂಕಟೇಶ್ ಕುಮಾರ್ ಮತ್ತು ತಂಡದವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ, ಸ್ಥಳ:ಜಿಎಸ್‌ಎಸ್‌ಎಸ್ ಮಹಿಳಾ ತಾಂತ್ರಿಕ ಮಹಾ ವಿದ್ಯಾಲಯ, ಬೆಳಗ್ಗೆ 10.30ಕ್ಕೆ.
- **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಗರ್ಭ ಸಂಸ್ಕಾರ, ಒಣ ಕಣ್ಣಿನ ಆರೋಗ್ಯ ಶಿಬಿರ ಮತ್ತು ತಪಾಸಣೆ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.
- **ಸುಯೋಗ್ ಆಸ್ಪತ್ರೆ :** ಉಚಿತ ಹೃದ್ರೋಗ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.
- **ಟಿಟಿಎಲ್ ಟ್ರಸ್ಟ್ :** ಆಂತರಿಕ ಹೊಳಪು–ಮಹಿಳೆಯರ ಆರೋಗ್ಯದ ಸಂಭ್ರಮ ಕುರಿತು ಡಾ. ಶ್ರುತಿ ಶೇಖರ್ ಅವರಿಂದ ವಿಶೇಷ ಉಪನ್ಯಾಸ, ಅಧ್ಯಕ್ಷತೆ : ಟಿಟಿಎಲ್ ಟ್ರಸ್ಟ್ ಪ್ರಿನ್ಸಿಪಾಲ್ ಡಾ. ಬಿ.ವಿ. ಪ್ರಶಾಂತ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.
- **ಯುವರಾಜ ಕಾಲೇಜು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ :** ಕನ್ನಡ ರಾಜ್ಯೋತ್ಸವ ಹಾಗೂ ಬಾನು ಮುಷ್ತಾಕ್ ಅವರ 'ಎದೆಯ ಹಣತೆ' ಕೃತಿ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಆರ್. ಮಹದೇವ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ. ಎಸ್. ಮಹದೇವಮೂರ್ತಿ, ಕೃತಿ ಬಿಡುಗಡೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮುಖ್ಯ ಭಾಷಣ : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಪ್ರೊ. ಎನ್.ಕೆ. ಲೋಲಾಕ್ಷಿ, ಮುಖ್ಯ ಅತಿಥಿಗಳು : ಸಿಂಡಿಕೇಟ್ ಸದಸ್ಯರಾದ ಕ್ಯಾತನಹಳ್ಳಿ ನಾಗರಾಜು, ಡಾ. ಜೆ. ಶಿಲ್ಪಾ, ಸ್ಥಳ: ಅಮೃತ ಮಹೋತ್ಸವ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.
- **ಕರ್ನಾಟಕ ಗಾನಕಲಾ ಪರಿಷತ್, ಗಾನಭಾರತೀ :** 54ನೇ ಹಿರಿಯ ಸಂಗೀತ ವಿದ್ವಾಂಸರ ಹಾಗೂ 36ನೇ ಯುವ ಸಂಗೀತ ವಿದ್ವಾಂಸರ ರಾಜ್ಯ ಸಂಗೀತ ಸಮ್ಮೇಳನ, ಹಿರಿಯ ಸಂಗೀತ ವಿದ್ವಾಂಸರ ಸಂಗೀತ ಸಮ್ಮೇಳನದ ಅಧ್ಯಕ್ಷರಾಗಿ ಡಾ.ಸಿ.ಎ. ಶ್ರೀಧರ, ಯುವ ಸಂಗೀತ ವಿದ್ವಾಂಸರ ಸಮ್ಮೇಳನದ ಅಧ್ಯಕ್ಷರಾಗಿ ವಿದ್ವಾನ್ ಮತ್ತೂರು ಆರ್. ಶ್ರೀನಿಧಿ, ಬೆಳಗ್ಗೆ 10 ರಿಂದ ರಾತ್ರಿ 10ರವರೆಗೆ ವಿವಿಧ ಸಂಗೀತ ಕಾರ್ಯಕ್ರಮಗಳು, ವಿದ್ವತ್ ಗೋಷ್ಠಿಗಳು, ಸ್ಥಳ: ಗಾನಭಾರತೀ ರಮಾಗೋವಿಂದ ಕಲಾ ವೇದಿಕೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.
- **ಮಹಾರಾಜ ಕಾಲೇಜು :** ಕನ್ನಡ ರಾಜ್ಯೋತ್ಸವ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ. ಹೆಚ್.ಸಿ. ದೇವರಾಜೇಗೌಡ, ಉದ್ಘಾಟನೆ : ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಪ್ರೊ. ಎಚ್.ಎಂ. ಕಲಾಶ್ರೀ, ಮುಖ್ಯ ಅತಿಥಿಗಳು : ಪ್ರೊ.ಎ.ಎಂ. ಶಿವಸ್ವಾಮಿ, ಸ್ಥಳ: ಜೂನಿಯರ್ ಬಿ.ಎ. ಹಾಲ್, ಬೆಳಗ್ಗೆ 11ಕ್ಕೆ.
- **ಮೈಸೂರು ರಿದಮ್ಸ್ ಕರೋಕೆ ಕ್ಲಬ್ :** ಕನ್ನಡದ ಕಂಪು ಚಿತ್ರಗೀತೆಗಳ ಇಂಪು ಶೀರ್ಷಿಕೆಯಡಿ ಜನಪ್ರಿಯ ಚಿತ್ರ ಗೀತೆಗಳ ಲೈವ್ ಮ್ಯೂಸಿಕ್ ರಸಸಂಜೆ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ ಸಭಾಂಗಣ, ಸಂಜೆ 4.30ಕ್ಕೆ.
- **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.
- **ಸಾಧನಾ ಮಂದಿರ :** ಪೂಜ್ಯ ಸ್ವಾಮಿ ಹಂಸಾನಂದ ಅವರಿಂದ ಸರಸ್ವತಿ ಪೂಜಾ, ಸಂಜೆ 6 ರಿಂದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಾಹಿತ್ಯ ಭವನ, ವಿಜಯನಗರ 1ನೇ ಹಂತ; ಸಂಜೆ 7.15 ರಿಂದ ಶ್ರೀ ಸಪ್ತಮಾತೃಕಾ ದೇವಸ್ಥಾನಂ, ವಿಜಯನಗರ 3ನೇ ಹಂತ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಹೆಣ್ಣು ಮನಸು ಮಾಡಿದರೆ, ಸಾಧಕ ಮಹಿಳೆಯರ ಪರಿಚಯ ಮಾಲಿಕೆ, ಪ್ರಸ್ತುತಿ : ಪ್ರೊ. ಸಿ. ನಾಗಣ್ಣ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಜಿ. ಪುಷ್ಪಲತಾ ಹಾಗೂ ಕೆ. ಶ್ರೇಯಾ, ವ್ಯಾಖ್ಯಾನ–ಡಾ. ಎನ್.ಎಸ್. ತಾರಾನಾಥ್, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು, 8.30 ಕನ್ನಡ ಚಿತ್ರಗೀತೆಗಳು, 9.00 ಕನ್ನಡದ ಕಸ್ತೂರಿ–ನಾ ಕಸ್ತೂರಿ ನೆನಪುಗಳ ಮಾಲಿಕೆ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ: ಜಿ.ಶಾಂತಕುಮಾರ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ಉರ್ದು ಕಾರ್ಯಕ್ರಮ, 4.30 ಸಂಧ್ಯಾರಾಗ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತು ಸಂವಾದ ಭಾಗವಹಿಸುತ್ತಾರೆ ಮಂಡ್ಯ ತಾಲ್ಲೂಕು ಹಳೇಬೂದನೂರು ಗ್ರಾಮದ ಕೃಷಿಕ ದಂಪತಿ ವಿಕಾಸ್ ಹಾಗೂ ಟಿ. ಯು. ಅಕ್ಷಿತಾ, ಪ್ರಸ್ತುತಿ–ಎನ್.ಕೇಶವ ಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ– ಮೈಸೂರಿನ ಶ್ರೀಗಣೇಶ ಸಂಗೀತ ನೃತ್ಯಾಲಯ ಚಾರಿಟಬಲ್ ಟ್ರಸ್ಟ್‌ನ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ಕನಕ–ಪುರಂದರ ನಮನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ರಾಷ್ಟ್ರೀಯ ಲಘು ಸಂಗೀತ ಕಾರ್ಯಕ್ರಮ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 6 ಗುರುವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 198 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಾಳೆ ಮಾಜಿ ಸಚಿವ ಕೆ.ಎನ್.ರಾಜಣ್ಣ ನಿವಾಸದಲ್ಲಿ ಭೋಜನ ಕೂಟ

ನವಂಬರ್ ಕ್ರಾಂತಿಗೆ ಮುನ್ನುಡಿ...!



ರಾಜಣ್ಣ ಊಟಕ್ಕೆ ಕರೆದಿದ್ದಾರೆ. ನಾನು, ಸಿದ್ದರಾಮಯ್ಯ ಸೇರಿದಂತೆ ಕೆಲವು ಸಚಿವರು, ಶಾಸಕರು ಹೋಗುತ್ತಿದ್ದೇವೆ. ಇದರಲ್ಲಿ ತಪ್ಪೇನಿದೆ.
–ಡಾ.ಜಿ.ಪರಮೇಶ್ವರ್, ಗೃಹ ಸಚಿವ

ಬೆಂಗಳೂರು,ನ.5(ಕೆಎಂಶಿ)–ಅಧಿಕಾರ ಹಸ್ತಾಂತರ ಕೂಗಿನ ಬೆನ್ನಲ್ಲೇ ಮುಖ್ಯಮಂತ್ರಿ ಆಪ್ತ ಹಾಗೂ ಮಾಜಿ ಸಚಿವ ಕೆ.ಎನ್.ರಾಜಣ್ಣ ತಮ್ಮ ತುಮಕೂರಿನ ಕ್ಯಾತ್ಸಂದ್ರ ನಿವಾಸದಲ್ಲೇ ಅಹಿಂದ ಸಭೆ ನಡೆಸುವ ಮೂಲಕ ನವಂಬರ್ ಕ್ರಾಂತಿಗೆ ಮುನ್ನುಡಿ ಬರೆಯುತ್ತಿದ್ದಾರೆ.

ನವಂಬರ್ 7ರಂದು ತುಮಕೂರು ವಿಶ್ವ ವಿದ್ಯಾಲಯದ ಜ್ಞಾನಸಿರಿ ಕ್ಯಾಂಪಸ್ ಹಾಗೂ ಅಲ್ಲಿನ ಸರ್ಕಾರಿ ವೈದ್ಯಕೀಯ ಆಸ್ಪತ್ರೆಯ ಆವರಣದಲ್ಲಿ 300 ಹಾಸಿಗೆಗಳ ನೂತನ ಕಟ್ಟಡದ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಂಪುಟ ಸಹೋದ್ಯೋಗಿಗಳು ಭಾಗಿಯಾಗಲಿದ್ದಾರೆ. ಸರ್ಕಾರಿ ಕಾರ್ಯಕ್ರಮಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಆಹ್ವಾನ ನೀಡಿದ್ದಾರೆ. ಆದರೆ, ಶಿವಕುಮಾರ್ ಈ ಕಾರ್ಯಕ್ರಮದಲ್ಲಿ ಭಾಗಿಯಾಗದೆ, ಇಂದಿನಿಂದ ಮೂರು ದಿನ ದೆಹಲಿ ಹಾಗೂ ಬಿಹಾರ ಪ್ರವಾಸ ಕೈಗೊಂಡಿದ್ದಾರೆ.

ಕೆ.ಎನ್.ರಾಜಣ್ಣ ಈ ಅವಕಾಶವನ್ನೇ ಬಳಸಿಕೊಂಡು, ಮುಖ್ಯಮಂತ್ರಿ ಅವರಿಗೆ ಬಲ ತುಂಬುವ ಮತ್ತು ಸದ್ಯಕ್ಕೆ ನಾಯಕತ್ವ ಬದಲಾವಣೆ ಬೇಡ ಎಂಬ ನಿರ್ಣಯ ಕೈಗೊಳ್ಳುವ ಉದ್ದೇಶದಿಂದ ಅಹಿಂದ ಸಭೆ ಕರೆದಿದ್ದಾರೆ. ▶ 6ನೇ ಪುಟಕ್ಕೆ

ಪವರ್ ಶೇರಿಂಗ್ ಚರ್ಚೆ ವೇಳೆ ದೆಹಲಿಗೆ ತೆರಳಿದ ಡಿಕೆಶಿ



ಬೆಂಗಳೂರು, ನ.5– ಬಿಹಾರ ಚುನಾವಣೆ ಬೆನ್ನಲ್ಲೇ ರಾಜ್ಯ ಕಾಂಗ್ರೆಸ್‌ನಲ್ಲಿ ಮಹತ್ವದ ಬದಲಾವಣೆ ಆಗುತ್ತದೆಯೇ ಎಂಬ ಕುತೂಹಲ ಹೆಚ್ಚಾಗಿದೆ. ಪವರ್ ಶೇರಿಂಗ್ ಕೋಲಾಹಲದ ಮಧ್ಯೆ ಇಂದು (ಬುಧವಾರ) ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ಪ್ರಯಾಣಿಸಿದ್ದಾರೆ. ಅವರು ದೆಹಲಿಯಲ್ಲಿ ಕೆಲಸ ಮುಗಿಸಿ, ನಾಳೆ ಬಿಹಾರಕ್ಕೆ ತೆರಳಲಿದ್ದಾರೆ. ಅದಕ್ಕೂ ಮುನ್ನ ಎಐಸಿಸಿ ನಾಯಕರನ್ನು ಭೇಟಿ ಮಾಡುವ ಸಾಧ್ಯತೆ ಇದೆ. ಬಿಹಾರದಲ್ಲಿ ರಣದೀಪ್ ಸುರ್ಜೇವಾಲರನ್ನೂ ಭೇಟಿಯಾಗಲಿದ್ದಾರೆ. ಪವರ್ ಶೇರಿಂಗ್ ಗೊಂದಲಕ್ಕೆ ತೆರೆ ಎಳೆಯಲು ದೆಹಲಿಗೆ ತೆರಳುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನವೆಂಬರ್ 15ರಂದು ಹೈಕಮಾಂಡ್ ನಾಯಕರ ಭೇಟಿ ಮಾಡಲಿದ್ದಾರೆ. ಸಂಪುಟ ಪುನರ್ ರಚನೆ ಬಗ್ಗೆ ಚರ್ಚೆ ನಡೆದರೂ ಪವರ್ ಶೇರಿಂಗ್ ಬಗ್ಗೆ ಕ್ಲಾರಿಟಿ ಸಿಗುವ ಭೇಟಿ ಇದಾಗಿರಲಿದೆ. ಸಿಎಂ ಜೊತೆ ಡಿಸಿಎಂಗೂ ಹೈಕಮಾಂಡ್ ಆಹ್ವಾನ ನೀಡುತ್ತದೆಯೇ ಎಂಬ ಕುತೂಹಲವೂ ಮನೆ ಮಾಡಿದೆ.

ನವೆಂಬರ್ 15ರ ನಂತರ ದೆಹಲಿಯಲ್ಲಿ ನಡೆಯುವ ಕರ್ನಾಟಕ ರಾಜಕೀಯಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಪ್ರಮುಖವಾಗಿ ಚರ್ಚೆ ನಡೆಯಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಎಸ್‌ಎಸ್‌ಎಲ್‌ಸಿ, ಪಿಯು ಪರೀಕ್ಷಾ ವೇಳಾಪಟ್ಟಿ ಪ್ರಕಟ



ಬೆಂಗಳೂರು: ದ್ವಿತೀಯ ಪಿಯು ಪರೀಕ್ಷೆ ಫೆಬ್ರವರಿ 28ರಿಂದ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾರ್ಚ್ 18ರಿಂದ ಆರಂಭವಾಗಲಿದ್ದು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಂತಿಮ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ದ್ವಿತೀಯ ಪಿಯು ಪರೀಕ್ಷೆ ಮಾರ್ಚ್ 17ಕ್ಕೆ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಏ.2ಕ್ಕೆ ಮುಕ್ತಾಯವಾಗಲಿದೆ.

ದ್ವಿತೀಯ ಪಿಯು ಪರೀಕ್ಷಾ ವೇಳಾಪಟ್ಟಿ

ಫೆ.28: ಕನ್ನಡ, ಅರೇಬಿಕ್
ಮಾ.2: ಭೂಗೋಳಶಾಸ್ತ್ರ, ಸಂಖ್ಯಾಶಾಸ್ತ್ರ, ಮನಃಶಾಸ್ತ್ರ
ಮಾ.3: ಇಂಗ್ಲಿಷ್
ಮಾ.4: ತೆಲುಗು, ತಮಿಳು, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್, ಮಲಯಾಳಂ
ಮಾ.5: ಇತಿಹಾಸ
ಮಾ.6: ಭೌತ ವಿಜ್ಞಾನ
ಮಾ.7: ಐಚ್ಛಿಕ ಕನ್ನಡ, ಭೂಗರ್ಭ ಶಾಸ್ತ್ರ, ವ್ಯವಹಾರ ಅಧ್ಯಯನ
ಮಾ.9: ರಸಾಯನ ವಿಜ್ಞಾನ, ಶಿಕ್ಷಣಶಾಸ್ತ್ರ, ಮೂಲಗಣಿತ
ಮಾ.10: ಅರ್ಥಶಾಸ್ತ್ರ
ಮಾ.11: ತರ್ಕಶಾಸ್ತ್ರ, ವಿದ್ಯುನ್ಮಾನ ಶಾಸ್ತ್ರ, ಗೃಹ ವಿಜ್ಞಾನ
ಮಾ.12: ಹಿಂದಿ
ಮಾ.13: ರಾಜ್ಯಶಾಸ್ತ್ರ
ಮಾ.14: ಲೆಕ್ಕಶಾಸ್ತ್ರ, ಗಣಿತ
ಮಾ.16: ಸಮಾಜಶಾಸ್ತ್ರ, ಜೀವವಿಜ್ಞಾನ, ಗಣಕ ವಿಜ್ಞಾನ
ಮಾ.17: ಹಿಂದೂಸ್ತಾನಿ ಸಂಗೀತ, ಮಾಹಿತಿ ತಂತ್ರಜ್ಞಾನ, ರೀಟೇಲ್, ಆಟೋಮೊಬೈಲ್, ಹೆಲ್ತ್‌ಕೇರ್, ಬ್ಯೂಟಿ ಅಂಡ್ ವೆಲ್‌ನೆಸ್

ಎಸ್‌ಎಸ್‌ಎಲ್‌ಸಿ ಪರೀಕ್ಷಾ ವೇಳಾಪಟ್ಟಿ

ಮಾರ್ಚ್ 18: ಪ್ರಥಮ ಭಾಷೆಗಳಾದ ಕನ್ನಡ, ತೆಲುಗು, ಹಿಂದಿ, ಮರಾಠಿ, ತಮಿಳು, ಉರ್ದು, ಇಂಗ್ಲಿಷ್ (ಎನ್‌ಸಿಇಆರ್‌ಟಿ), ಸಂಸ್ಕೃತ
ಮಾ.23: ವಿಜ್ಞಾನ, ರಾಜ್ಯಶಾಸ್ತ್ರ, ಹಿಂದೂಸ್ತಾನಿ, ಕರ್ನಾಟಕ ಸಂಗೀತ
ಮಾ.25: ದ್ವಿತೀಯ ಭಾಷೆಗಳಾದ ಇಂಗ್ಲಿಷ್, ಕನ್ನಡ
ಮಾ.28: ಗಣಿತ, ಸಮಾಜ ಶಾಸ್ತ್ರ
ಮಾ.30: ತೃತೀಯ ಭಾಷೆಗಳಾದ ಹಿಂದಿ, ಕನ್ನಡ, ಇಂಗ್ಲಿಷ್, ಅರೇಬಿಕ್, ಪರ್ಷಿಯನ್, ಉರ್ದು, ಸಂಸ್ಕೃತ, ಕೊಂಕಣಿ, ತುಳು, ಎನ್‌ಎಸ್‌ಕ್ಯೂಎಫ್ ವಿಷಯಗಳು
ಏ.1: ಅರ್ಥಶಾಸ್ತ್ರ, ಎಂಜಿನಿಯರಿಂಗ್ ವಿಷಯಗಳು
ಏ.2: ಸಮಾಜ ವಿಜ್ಞಾನ

ಕಬ್ಬು ಬೆಳೆಗಾರರಿಂದ ಇಂದು ಸಂಜೆ 5 ಗಂಟೆ ಗಡುವು

ಬೆಳಗಾವಿ: ಕಬ್ಬು ಬೆಲೆ ನಿಗದಿಗಾಗಿ ಬೆಳಗಾವಿಯ ಗುರ್ಲಾಪೂರದಲ್ಲಿ ನಡೆಯುತ್ತಿರುವ ಪ್ರತಿಭಟನಾನಿರತ ರೈತ ಮುಖಂಡರೊಂದಿಗಿನ ಸಚಿವ ಎಚ್ ಕೆ ಪಾಟೀಲ್ ಮಾತುಕತೆ ಮುರಿದುಬಿದ್ದಿದೆ. ಸರ್ಕಾರ ಹಾಗೂ ರೈತರ ಜೊತೆಗೆ ಸರಿಸುಮಾರು ಒಂದೂವರೆ ಗಂಟೆಗಳ ಸಂಧಾನ ಮಾತುಕತೆ ವಿಫಲವಾಗಿದೆ. ಗುರುವಾರ ಸಂಜೆ 5 ಗಂಟೆಯವರೆಗೆ ಅಂತಿಮ ಹಂತದ ಗಡುವು ನೀಡಿದ್ದು, ಒಂದು ವೇಳೆ ನಮ್ಮ ಬೇಡಿಕೆ ಈಡೇರದಿದ್ದರೆ ಶುಕ್ರವಾರ 7ನೇ ತಾರೀಖಿನಂದು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ಮಾಡುತ್ತೇವೆ. ಪಂಜಾಬ್ ಮಾದರಿಯಲ್ಲ, ಗುರ್ಲಾಪೂರ ಮಾದರಿಯೊಂದಿಗೆ ಪ್ರತಿಭಟನೆ ಮಾಡಲಾಗುವುದು ಎಂದು ರೈತ ಮುಖಂಡ ಶಶಿಕಾಂತ ಗುರೂಜಿ ತಿಳಿಸಿದ್ದಾರೆ.

ನಂದಿನಿ ತುಪ್ಪದ ದರ 90 ರೂ. ಏರಿಕೆ; ಇಂದಿನಿಂದಲೇ ಪರಿಷ್ಕೃತ ದರ ಜಾರಿ



ಬೆಂಗಳೂರು: ಜಿಎಸ್‌ಟಿ ಇಳಿಕೆ ಖುಷಿಯಲ್ಲಿದ್ದ ಕರ್ನಾಟಕದ ಜನರಿಗೆ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ದರ ಏರಿಕೆ ಬಿಸಿ ಮುಟ್ಟಿಸಿದೆ. ದಸರಾ ಹಬ್ಬದ ಸಂಭ್ರಮದಲ್ಲಿ ತುಪ್ಪದ ದರ ಇಳಿಕೆಯಿಂದ ಜನರು ಸಂತಸದಲ್ಲಿದ್ದರು. ಆದರೆ, ದಸರಾ, ದೀಪಾವಳಿ ಮುಗಿಯುತ್ತಲೇ, ನಂದಿನಿ ತುಪ್ಪದ ದರ ಪ್ರತಿ ಲೀಟರ್‌ಗೆ 90 ರೂ.ಗಳಷ್ಟು ಏರಿಕೆ ಮಾಡಿದೆ. ಇತ್ತೀಚೆಗಷ್ಟೇ ಜಿಎಸ್‌ಟಿ ದರ ಇಳಿಕೆಯಾದ ನಂತರ ಕೆಎಂಎಫ್ ತನ್ನ ಹಾಲು ಉತ್ಪನ್ನಗಳ ದರ ಇಳಿಕೆ ಮಾಡಿತ್ತು. ಈ ವೇಳೆ ನಂದಿನಿ ತುಪ್ಪದ ಬೆಲೆಯು 40 ರೂಪಾಯಿ ಇಳಿಕೆಯಾಗಿ ಗ್ರಾಹಕರಿಗೆ ಸಿಹಿ ಸುದ್ದಿ ನೀಡಿತ್ತು. ಆದರೆ, ಈಗ ಈ ಖುಷಿ ಹೆಚ್ಚು ದಿನ ಉಳಿಯದಂತಾಗಿದೆ. ನೂತನ ದರವು ಇಂದಿನಿಂದಲೇ ಜಾರಿಗೆ ಬರಲಿದೆ ಎಂದು ಕೆಎಂಎಫ್ ತಿಳಿಸಿದೆ.

ಹೊಸ ದರ: ಈ ಹಿಂದೆ 1 ಲೀಟರ್ ನಂದಿನಿ ತುಪ್ಪ 610 ರೂ. ಇತ್ತು. ಇದೀಗ 90 ರೂ. ಹೆಚ್ಚಳದೊಂದಿಗೆ, ಗ್ರಾಹಕರು 1 ಲೀಟರ್ ತುಪ್ಪಕ್ಕಾಗಿ 700 ರೂ. ಪಾವತಿ ಮಾಡಬೇಕಾಗಿದೆ. ಜಾಗತಿಕ ಮಾರುಕಟ್ಟೆಯಲ್ಲಿ ದರ ಏರಿಕೆ ಹಿನ್ನೆಲೆಯಲ್ಲಿ ಈ ಬೆಲೆ ಹೆಚ್ಚಳ ಅನಿವಾರ್ಯವಾಗಿದೆ ಎಂದು ಕೆಎಂಎಫ್ ಸಮರ್ಥಿಸಿಕೊಂಡಿದೆ.

ಹಾಲಿನ ದರ ಏರಿಕೆ ಸುಳಿವು




ರಾಜ್ಯದಲ್ಲಿ ಮತ್ತೆ ನಂದಿನಿ ಹಾಲಿನ ದರ ಏರಿಕೆಯಾಗುವ ಸಾಧ್ಯತೆ ಇದ್ದು, ಈ ಬಗ್ಗೆ ಸ್ವತಃ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಮಾಹಿತಿ ನೀಡಿದ್ದಾರೆ. ಹಾಲಿನ ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಿಲ್ಲ. ನಾವು ಮಂಡಳಿಗೆ ಮನವಿ ಸಲ್ಲಿಸಿದ್ದೇವೆ ಎಂದು ಹೇಳಿದ್ದಾರೆ. ನಮ್ಮ ರಾಜ್ಯದಲ್ಲಿ ಮಾತ್ರ ಹಾಲಿಗೆ ಕಡಿಮೆ ಬೆಲೆ ಇದೆ. ಬೇರೆ ರಾಜ್ಯಗಳಲ್ಲಿ ಹಾಲಿನ ದರ ಇನ್ನೂ ಹೆಚ್ಚಿದೆ. ಹಾಲಿನ ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಿಲ್ಲ. ನಾವು ಮಂಡಳಿಗೆ ಮನವಿ ಸಲ್ಲಿಸಿದ್ದೇವೆ ಇಷ್ಟು ಎಂದು ದರದ ಬಗ್ಗೆ ಹೇಳಿಲ್ಲ. ಅರ್ಧ ಲೀಟರ್ ಮಾರಿದರೆ ನಷ್ಟವಾಗುತ್ತದೆ. ಒಂದು ಲೀಟರ್ ಹಾಲು ಮಾರಿದರೆ ಲಾಭ ಆಗುತ್ತದೆ ಎಂದರು. ನಮ್ಮಲ್ಲಿ 95 ಲಕ್ಷದಿಂದ ▶ 6ನೇ ಪುಟಕ್ಕೆ



ಡಿ.ಕೆ.ಸುರೇಶ್

ಸೆರೆಸಿಕ್ಕ ಮತ್ತೊಂದು ಹುಲಿ ಮರಿ

- ನಂ.ಗೂಡು ತಾಲೂಕು ಹಂಚಿಪುರದ ಹೊಸಬೀಡು ಕಾವಲ್ ಬಳಿ ಹೆಣ್ಣು ಹುಲಿ ಮರಿ ಸೆರೆ; ಮತ್ತೊಂದು ಪರಾರಿ
- ತಾಯಿ ಸೆರೆಸಿಕ್ಕ ಬಳಿಕ ಬೇಟೆ ಕೌಶಲ್ಯವಿಲ್ಲದೆ ಕಾಂಗಾಲಾಗಿರುವ ಮರಿಗಳು



ಬುಧವಾರ ಬೆಳಗ್ಗೆಯಿಂದ 4 ಸಾಕಾನೆಗಳೊಂದಿಗೆ ಅರಣ್ಯ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದರಾದರೂ ಹುಲಿ ಪತ್ತೆಯಾಗಿರಲಿಲ್ಲ. ಸಂಜೆ 4 ಗಂಟೆ ಸುಮಾರಿನಲ್ಲಿ ಹೊಸಬೀಡು ಗ್ರಾಮದ ಬಳಿ ಬಾಳೆತೋಟದಲ್ಲಿ 2 ಹುಲಿಗಳು ಸಂಚರಿಸುತ್ತಿವೆ ಎಂಬ ಗ್ರಾಮಸ್ಥರ ಮಾಹಿತಿ ಮೇರೆಗೆ 2 ಸಾಕಾನೆಗಳೊಂದಿಗೆ ಅರಣ್ಯ ಇಲಾಖೆ ಪಶುವೈದ್ಯ ಡಾ.ವಾಸಿಂ ಮಿರ್ಜ, ಶಾರ್ಪ್‌ಶೂಟರ್ ಸಹ ಆಗಿರುವ ಡಿಆರ್‌ಎಫ್‌ಓ ನೇತೃತ್ವದಲ್ಲಿ ಆ ಭಾಗದಲ್ಲಿ ಥರ್ಮಲ್ ಡ್ರೋನ್ ಮೂಲಕ ಪರಿಶೀಲಿಸಿದಾಗ 2 ಹುಲಿ ಮರಿಗಳು ಇರುವುದು ಪತ್ತೆಯಾಗಿದೆ.

ನಂಜನಗೂಡು, ನ.5–ಮೈಸೂರು ಜಿಲ್ಲೆಯ ನಂಜನಗೂಡು, ಹೆಚ್.ಡಿ.ಕೋಟೆ ಮತ್ತು ಸರಗೂರು ತಾಲೂಕುಗಳ ಕಾಡಂಚಿನಲ್ಲಿ ಹುಲಿಗಳ ಹಾವಳಿ ಮಿತಿ ಮೀರಿದ್ದು, ಈಗಾಗಲೇ ಇಬ್ಬರನ್ನು ಬಲಿ ಪಡೆದಿದ್ದು, ಓರ್ವನನ್ನು ತೀವ್ರವಾಗಿ ಗಾಯಗೊಳಿಸಿವೆ. ಹಾಗಾಗಿ ಈ ಭಾಗದಲ್ಲಿರುವ ಸುಮಾರು 8 ಹುಲಿಗಳ ಸೆರೆಗಾಗಿ ಅರಣ್ಯ ಇಲಾಖೆ ಸಿಬ್ಬಂದಿ ತಂಡೋಪತಂಡವಾಗಿ ಎಡೆಬಿಡದೆ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಬುಧವಾರ ಸಂಜೆ ನಂಜನಗೂಡು ತಾಲೂಕು ಹಂಚಿಪುರ ಸಮೀಪದ ಹೊಸಬೀಡು ಕಾವಲ್ ಬಳಿ ಒಂದೂವರೆ ವರ್ಷದ ಹೆಣ್ಣು ಹುಲಿ ಮರಿಯನ್ನು ಕಾರ್ಯಾಚರಣೆ ತಂಡ ಸೆರೆ ಹಿಡಿದಿದೆ. ಈಗಾಗಲೇ ಸೆರೆ ಸಿಕ್ಕಿರುವ ಎಂಟು ವರ್ಷದ ಹೆಣ್ಣು ಹುಲಿಯ ಮರಿ ಇದಾಗಿದೆ ಎಂದು ಖಚಿತಪಡಿಸಿರುವ ಅರಣ್ಯ ಇಲಾಖೆ ಮೂಲಗಳು ಈ ಮರಿಯನ್ನು ತಾಯಿ ಹುಲಿಯೊಂದಿಗೆ ಸೇರಿಸಲಾಗುವುದು ಎಂದು ಹೇಳಿವೆ.

ಅ.16ರಂದು ಬಡಗಲಪುರದಲ್ಲಿ ಮಹದೇವೇಗೌಡ ಎಂಬ ರೈತನ ▶ 6ನೇ ಪುಟಕ್ಕೆ

ವಶಪಡಿಸಿಕೊಂಡ ಜಮೀನಿನ ಪರಿಹಾರಕ್ಕೆ ಅಲೆದು.. ಅಲೆದು.. ಕೊನೆಗೆ

ಮಂಡ್ಯ ಡಿಸಿ ಕಚೇರಿ ಎದುರು ಬೆಂಕಿ ಹಚ್ಚಿಕೊಂಡು

ಆತ್ಮಹತ್ಯೆಗೆ ಯತ್ನಿಸಿದ್ದ ರೈತ ಸಾವು

ಮಂಡ್ಯ, ನ.5– ಜಮೀನು ವಿವಾದ ಬಗೆಹರಿಸುವಂತೆ ಅಲೆದು... ಅಲೆದು... ಕೊನೆಗೆ ಬೇಸತ್ತು ಜಿಲ್ಲಾಧಿಕಾರಿ ಕಚೇರಿ ಎದುರು ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದ, ಬಡ ರೈತ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸಾವಿಗೀಡಾಗಿದ್ದಾರೆ.

ಕೆ.ಆರ್.ಪೇಟೆ ತಾಲೂಕು ಮೂಡನಹಳ್ಳಿಯ ಮಂಜೇಗೌಡ(55) ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಮುಂಜಾನೆ ಮೃತಪಟ್ಟಿದ್ದಾರೆ. ಮೂಡನಹಳ್ಳಿ ಗ್ರಾಮದಲ್ಲಿ ಅವರಿಗೆ ಸೇರಿದ ಎರಡು ಎಕರೆ ಜಮೀನನ್ನು, ಕೆಲ ವರ್ಷದ ಹಿಂದೆಯೇ ಅದನ್ನು ವಶಪಡಿಸಿಕೊಂಡು 49 ನಿವೇಶನ ಮಾಡಿ ಬಡವರಿಗೆ ಹಂಚಿಕೆ ಮಾಡಿದ್ದು, ಇದಕ್ಕೆ ಪ್ರತಿಯಾಗಿ ತಮಗೆ ಯಾವುದೇ ಪರಿಹಾರ ನೀಡಿಲ್ಲ. ಜತೆಗೆ ಪರ್ಯಾಯ ಜಮೀನು ಕೂಡ ನೀಡಿಲ್ಲ. ಈ ಬಗ್ಗೆ ಹಲವು ಬಾರಿ ಜಿಲ್ಲಾಧಿಕಾರಿ ಹಾಗೂ ತಾಲೂಕು ಕಚೇರಿಗೆ ಅಲೆದರೂ, ಮನವಿ ಕೊಟ್ಟರೂ ಪ್ರಯೋಜನವಾಗಿಲ್ಲ ಎಂದು ಮಂಗಳವಾರ ಡಿಸಿ ಕಚೇರಿ ಎದುರು ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದರು. ಇದನ್ನು ಗಮನಿಸಿದ ಸಾರ್ವಜನಿಕರು ನೀರು ಹಾಕಿ ಬೆಂಕಿ ನಂದಿಸಿದ್ದರು. ಪೊಲೀಸರು ರೈತ ಮಂಜೇಗೌಡರನ್ನು ಮಿಮ್ಸ್ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ನಂತರ ವೈದ್ಯರ ಸಲಹೆ ಮೇರೆಗೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಮುಂಜಾನೆ ಮೃತಪಟ್ಟಿದ್ದಾರೆ. ಈ ಸಂಬಂಧ ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಮೃತ ರೈತ ಮಂಜೇಗೌಡರ ತಾತ ಬಹಳ ವರ್ಷಗಳ ಹಿಂದೆ ಅರಣ್ಯ ಇಲಾಖೆಗೆ ಸೇರಿದ 1.33 ಗುಂಟೆ ಜಾಗದಲ್ಲಿ ಉಳುಮೆ ಮಾಡಿಕೊಂಡು ಜೀವನ ನಡೆಸುತ್ತಿದ್ದರು. 1977ರಲ್ಲಿ ಸರ್ಕಾರ 1165 ರೂ. ಪರಿಹಾರವನ್ನು ನೀಡಿ ಮಂಜೇಗೌಡರ ತಾತ ಬೇಸಾಯ ಮಾಡುತ್ತಿದ್ದ ಜಮೀನನ್ನು ವಶಪಡಿಸಿಕೊಂಡಿತ್ತು. ಈ ವಿಚಾರ ಮಂಜೇಗೌಡರಿಗೂ ತಿಳಿದಿತ್ತು. ಕಳೆದ 10 ವರ್ಷಗಳ ಹಿಂದೆ ಸರ್ಕಾರ ಬಡವರಿಗೆ ನಿವೇಶನ ಹಂಚುವ ಸಲುವಾಗಿ ಪ್ರದೇಶಾಭಿವೃದ್ಧಿ ಮಾಡುವಾಗ ಮಂಜೇಗೌಡರ ತಾತನಿಂದ ವಶಪಡಿಸಿಕೊಳ್ಳಲಾದ ಜಮೀನು ಸೇರಿದಂತೆ ಉಳಿದ ಜಾಗದಲ್ಲಿ ಸುಮಾರು 49 ನಿವೇಶನಗಳನ್ನು ನಿರ್ಮಿಸಿ ಅದನ್ನು ಬಡವರಿಗೆ ಹಂಚಲಾಗಿತ್ತು. ಇದನ್ನು ಗಮನಿಸಿದ ಮಂಜೇಗೌಡ ಇದು ತನ್ನ ಜಮೀನು ತನಗೆ ಪರಿಹಾರ ಕೊಡಬೇಕು ಮತ್ತು ಪರ್ಯಾಯವಾಗಿ ಬೇರೆ ಕಡೆ ಜಮೀನು ನೀಡಬೇಕೆಂದು



ಮಂಜೇಗೌಡ

ಮಂಡ್ಯ ಜಿಲ್ಲಾಧಿಕಾರಿಗಳು ಮತ್ತು ತಹಸೀಲ್ದಾರ್‌ಗೆ ಮನವಿ ಸಲ್ಲಿಸುತ್ತಾ ಬಂದಿದ್ದರು. ಜಮೀನು ಅರಣ್ಯ ಇಲಾಖೆಗೆ ಸೇರಿದ್ದರಿಂದ ಮತ್ತು ಇವರ ತಾತನಿಗೆ ಪರಿಹಾರ ಕೂಡ ವಿತರಿಸಿದ್ದರಿಂದ ಈತನ ಮನವಿಗಳಿಗೆ ಯಾವುದೇ ಮಹತ್ವ ನೀಡಿರಲಿಲ್ಲ. ಈ ಮಧ್ಯೆ ಮಂಜೇಗೌಡರಿಗೆ ಸ್ವಂತದ್ದಾಗಿ ನಾಲ್ಕು ಎಕರೆ ಒಂದು ಗುಂಟೆ ಜಮೀನು ಹೊಂದಿದ್ದು ಬೇಸಾಯ ಮಾಡಲು ಕರ್ನಾಟಕ ಗ್ರಾಮೀಣ ಬ್ಯಾಂಕಿನಲ್ಲಿ 3.5 ಲಕ್ಷ ಸಾಲ ಮಾಡಿದ್ದ. ಸಾಲ ತೀರಿಸದೇ ಇದ್ದರಿಂದ ಅದು 7.79 ಲಕ್ಷಕ್ಕೆ ಏರಿಕೆಯಾಗಿತ್ತು. ಹೇಗಾದರೂ ಮಾಡಿ ಸರ್ಕಾರದಿಂದ ಪರಿಹಾರ ಪಡೆದು ಸಾಲ ತೀರಿಸಿಕೊಳ್ಳಬೇಕು ▶ 6ನೇ ಪುಟಕ್ಕೆ

ವಿವಾದಿತ ಭೂಮಿ ಜಂಟಿ ಸರ್ವೇ ಬಳಿಕ ಅರಣ್ಯ ಇಲಾಖೆಗೆ ಸೇರದಿದ್ದರೆ ಸಂತ್ರಸ್ತರ ವಶಕ್ಕೆ

ಸಚಿವ ಚಲುರಾಯಸ್ವಾಮಿ ಭರವಸೆ



ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮೃತ ರೈತ ಮಂಜೇಗೌಡರ ಕುಟುಂಬದವರಿಗೆ ಸಚಿವ ಚಲುವರಾಯಸ್ವಾಮಿ ಸಾಂತ್ವನ ಹೇಳಿದರು.

ಬೆಂಗಳೂರು,ನ.5(ಕೆಎಂಶಿ)–ಮೃತ ರೈತ ಮಂಜೇಗೌಡ ಸ್ವಾಧೀನದಲ್ಲಿದ್ದ ಜಮೀನಿನ ಜಂಟಿ ಸರ್ವೆ ನಡೆಸಿ ಆ ಭೂಮಿ, ಅರಣ್ಯ ಇಲಾಖೆ ಒಡೆತನದಲ್ಲಿ ಇಲ್ಲದಿದ್ದರೆ ಸದರಿ ಜಾಗವನ್ನು ಕುಟುಂಬಸ್ಥರಿಗೆ ನೀಡುವುದಾಗಿ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಇಂದಿಲ್ಲಿ ಭರವಸೆ ನೀಡಿದ್ದಾರೆ. ▶ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಸುನೀತಾ ಪಕ್ಕದ ಮನೆಯ ಆಂಟಿ ಜೊತೆ ಮಾತನಾಡುತ್ತಾ

ಸುನೀತಾ : ಆಂಟಿ ನನಗೆ 20 ವರ್ಷವಾದರೂ ಮಕ್ಕಳಾಗಲಿಲ್ಲ.

ಪಕ್ಕದ ಮನೆ ಆಂಟಿ : ಮತ್ತೆ ನೀನೇನು ಮಾಡಿದೆ?

ಸುನೀತಾ : ನಾನೇನು ಮಾಡಲಿಲ್ಲ. ನನಗೆ 21 ವರ್ಷ ತುಂಬಿದ ತಕ್ಷಣ ನಮ್ಮ ಅಪ್ಪ-ಅಮ್ಮ ಮದುವೆ ಮಾಡಿದರು. ಈಗ ಮಗು ಆಯ್ತು.

ಮೈಸೂರು ಮಿತ್ರ

ಗುರುವಾರ, 6 ನವೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ......

ನೀನು ನಮ್ಮವನು ಅಂತ ಮಾತಲ್ಲಿ ಯಾರು ಬೇಕಾದರು ಹೇಳ್ತಾರೆ. ಆದರೆ, ಕಷ್ಟ ಬಂದಾಗಲೇ ಗೊತ್ತಾಗೋದು ನಿಜವಾಗಿಯೂ ನಮ್ಮ ಜೊತೆಗಿರುವವರು ಯಾರು ಅಂತ...

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮರಿ ಮಾಡುವ ಮೊದಲೇ ಮೊಟ್ಟೆಗಳನ್ನು ಎಣಿಸಬೇಡ.

ನಿಮ್ಮ ಪತ್ರಗಳು

■ ಕನ್ನಡ ಬೆಳಗುವ ಲೇಖಕ, ಪ್ರಕಾಶಕರು ಕತ್ತಲಲ್ಲಿ!

ಮಾನ್ಯರೆ,

ನವೆಂಬರ್ ತಿಂಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಕನ್ನಡಿಗರಾದ ನಾವು ಅದ್ದೂರಿಯಾಗಿ ಆಚರಿಸುತ್ತಿದ್ದೇವೆ. ಆದರೆ ಕನ್ನಡ ತುಳಿಯುವ ಕೆಲಸ ನಿರಂತರವಾಗಿ ನಡೆಯುತ್ತಲೇ ಇದೆ. ಕನ್ನಡವನ್ನು ಕಟ್ಟಿ ಬೆಳೆಸುವಲ್ಲಿ ಅಕ್ಷರಗಳ ಅರಿವು ಇರದ ಜಾನಪದರು ಸೇರಿದಂತೆ ಸಾಹಿತಿಗಳು, ಲೇಖಕರು ಹಾಗೂ ಪ್ರಕಾಶಕರು ಪ್ರಮುಖರು. ಸಂಘ ಸಂಸ್ಥೆಗಳು ಇವರನ್ನು ಗುರುತಿಸಿ ಹಸಿವು ನೀಗಿಸದ ಫಲಕಗಳನ್ನು ಕೈಗಿಟ್ಟು ತಲೆಯ ಮೇಲೊಂದು ಟೋಪಿ ಹಾಕಿ ಪತ್ರಿಕೆಗಳಲ್ಲಿ ಪ್ರಕಟಿಸಿದರೆ ಸಾಕೆ?. ಸಾಹಿತ್ಯ ಕ್ಷೇತ್ರದಲ್ಲಿ ತೊಡಗಿಸಿಕೊಂಡವರು ಐಷಾರಾಮಿಯಾಗಿ ಜೀವನ ನಡೆಸುತ್ತಿರುವವರು ಯಾರಿದ್ದಾರೆ? ವರ್ಷಾನು ಕಾಲ ಶ್ರಮ ಹಾಕಿ ಲೇಖಕ ಬರೆದಿದ್ದನ್ನು ಪ್ರಕಾಶಕ ಬಂಡವಾಳ ಹಾಕಿ ಪ್ರಕಟಿಸುತ್ತಾನೆ. ಗ್ರಂಥಾಲಯ ಇಲಾಖೆಯು ಸಕಾಲದಲ್ಲಿ ಕೊಳ್ಳುವುದಿಲ್ಲ. ಸಾರ್ವಜನಿಕರಿಂದ ಲೈಬ್ರರಿ ಸೆಸ್ ಎಂದು ವಸೂಲಿ ಮಾಡುವ ಹಣವನ್ನು ನಿಯಮಬದ್ಧವಾಗಿ ಆಯಾ ವರ್ಷದಲ್ಲೇ ಖರ್ಚು ಮಾಡಿದರೆ ಲೇಖಕ ಮತ್ತು ಪ್ರಕಾಶಕ ಇಬ್ಬರಿಗೂ ಸಹಾಯವಾಗುವುದು. ಜೊತೆಗೆ ಮುಂದಿನ ಪುಸ್ತಕಗಳ ಮುದ್ರಣಕ್ಕೂ ಪ್ರೇರಣೆ ಆಗುವುದು. ನನ್ನ ಮಿತ್ರ ಸೃಷ್ಟಿ ನಾಗೇಶ್‌ರವರ ಪ್ರಕಾಶನದಲ್ಲಿ ಮುದ್ರಣವಾಗಿರುವ ರೂ 1.80 ಕೋಟಿಯಷ್ಟು ಮೊತ್ತದ ಪುಸ್ತಕಗಳು ಕೊಳ್ಳದೆ ಉಗ್ರಾಣದಲ್ಲಿ ಉಳಿದಿವೆ. ಕಷ್ಟದಲ್ಲಿರುವ ಅವರು ಪ್ರಕಾಶನವನ್ನು ಬಿಡುವುದಾಗಿ ಬೇಸರ ವ್ಯಕ್ತ ಪಡಿಸಿದರು. ಎಲ್ಲರ ಪರಿಸ್ಥಿತಿಯೂ ಇದೇ ಆಗಿದೆ. ಹೀಗಾದರೆ ಕನ್ನಡದ ಬೆಳವಣಿಗೆ ಹೇಗೆ ಸಾಧ್ಯ?

ಸಾಹಿತ್ಯ ಕ್ಷೇತ್ರವು ಬಾರಿ ಮೊತ್ತವನ್ನು ಕೇಳುವುದಿಲ್ಲ. ಬೇಕಿರುವ ಅಲ್ಪ ಮೊತ್ತವನ್ನು ಅತ್ತು ಕರೆದು ಬೇಡುವ ಕಾಲ ಇದಾಗಿದೆ. ಇದರ ಪ್ರಯತ್ನವಾಗಿ ಡಾ.ಎಸ್.ಪಿ. ಯೋಗಣ್ಣನವರ ಅಧ್ಯಕ್ಷತೆಯಲ್ಲಿ ರಾಜ್ಯ ಲೇಖಕರು ಮತ್ತು ಪ್ರಕಾಶಕರ ಒಕ್ಕೂಟವು ಮೈಸೂರಿನಲ್ಲಿ ಪ್ರಾರಂಭವಾಗಿದೆ. ಒಕ್ಕೂಟದಲ್ಲಿ ಡಾ.ಸಿಪಿಕೆ, ಕೆ.ಎಸ್.ಭಗವಾನ್, ಕಾಳೇಗೌಡ ನಾಗವಾರ, ಡಿ.ಎನ್.ಲೋಕಪ್ಪ, ಓಂಕಾರಪ್ಪ, ಲೀಲಾಪ್ರಕಾಶ್, ಉಮೇಶ್, ಶಶಿಕುಮಾರ್, ತಮ್ಮಣ್ಣೇಗೌಡ ಮುಂತಾದವರು ಇದ್ದಾರೆ. ಎಲ್ಲರ ಪ್ರಯತ್ನದಿಂದ ಮುಂದಾದರೂ ಸಾಹಿತ್ಯ ಕ್ಷೇತ್ರಕ್ಕೆ ಒಳಿತಾಗಬಹುದೆಂಬ ನಿರೀಕ್ಷೆಯಲ್ಲಿ ಲೇಖಕರು ಮತ್ತು ಪ್ರಕಾಶಕರು ಇದ್ದಾರೆ, ನೋಡೋಣ!.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

■ ಗ್ರೇಟರ್ ಮೈಸೂರು ಹೇಗಿರಬೇಕು?

ಮಾನ್ಯರೆ,

ನಮ್ಮ ಮೈಸೂರು ಮಹಾರಾಜರ ಆಳ್ವಿಕೆಯಲ್ಲಿಯೇ ದೇಶದಲ್ಲಿ ಮೊದಲ ಯೋಜನಾಬದ್ಧ ನಗರವಾಗಿತ್ತು.

ಇಲ್ಲಿನ ವಿಶಾಲವಾದ ರಸ್ತೆಗಳು, ಕುಡಿಯುವ ನೀರಿನ ವ್ಯವಸ್ಥೆ, ಪಾರ್ಕುಗಳು, ಚರಂಡಿಯ ವ್ಯವಸ್ಥೆ, ರಸ್ತೆಯ ಎರಡು ಕಡೆ ಗಿಡ ಮರಗಳಿಂದ ಕೂಡಿದ ಸುಂದರ ನಗರವಾಗಿತ್ತು. ರಾಜಪ್ರಭುತ್ವ ಕೊನೆಗೊಂಡು ನಮ್ಮ ಸರಕಾರದ ಆಡಳಿತ ಪ್ರಾರಂಭವಾದ ಮೇಲೆ ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ ಹಾಗೂ ಬ್ರಹ್ಮಾಂಡ ಭ್ರಷ್ಟಾಚಾರದಿಂದ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿಯಾಗಿಲ್ಲ.

ಗ್ರೇಟರ್ ಮೈಸೂರು ಮಾಡುವಾಗ ಮುಂದಿನ 20–25 ವರ್ಷಗಳ ಮುಂದಾಲೋಚನೆಯಿಂದ ವೈಜ್ಞಾನಿಕ ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸಬೇಕು. ಬೆಂಗಳೂರಿನ ರೀತಿ ಟ್ರಾಫಿಕ್ ಸಮಸ್ಯೆ, ಕುಡಿಯುವ ನೀರಿನ ಸಮಸ್ಯೆ, ಫುಟ್‌ಪಾತ್, ಒಳಚರಂಡಿ ಸಮಸ್ಯೆಗಳು ಆಗದಂತೆ ನೋಡಿಕೊಳ್ಳಬೇಕು. ಮೈಸೂರಿನ ಪರಂಪರೆ, ಸಂಸ್ಕೃತಿ, ಘನತೆಗೆ ಧಕ್ಕೆ ಆಗದಂತೆ ಎಚ್ಚರ ವಹಿಸಬೇಕು. ಹೊಸ ಬಡಾವಣೆಗಳ ನಿರ್ಮಾಣಕ್ಕೆ ಸೂಕ್ತ ಕಾನೂನನ್ನು ಮಾಡಬೇಕು. ಹೊಸ ಬಡಾವಣೆ ನಿರ್ಮಾಣ ಮಾಡುವಾಗ ಅಲ್ಲಿ ಮೂಲಭೂತ ಸೌಕರ್ಯಗಳ ಜೊತೆಗೆ ಸುಂದರವಾದ ಪಾರ್ಕ್ ಮತ್ತು ಗ್ರಂಥಾಲಯಗಳು ಇರುವಂತೆ ನೋಡಿಕೊಳ್ಳಬೇಕು. ಮೈಸೂರಿಗೆ ಮತ್ತೊಂದು ಹೊರ ವರ್ತುಲ ರಸ್ತೆಯ ಅವಶ್ಯಕತೆ ಇದೆ. ಅದನ್ನು ಕಾಲಮಿತಿಯೊಳಗೆ ಮಾಡಿದರೆ ಉತ್ತಮ.

–ಕೃಷ್ಣ ಹೆಗಡೆ, ರಾಜರಾಜೇಶ್ವರಿ ನಗರ, ಮೈಸೂರು.

■ ಚರ್ಚೆಗೆ ಗ್ರಾಸವಾದ ಡಿ.ಕೆ. ಶಿವಕುಮಾರ್ ಪದಗ್ರಹಣಕ್ಕೆ ಮಹೂರ್ತ ಫಿಕ್ಸ್ ವರದಿ

ಮಾನ್ಯರೆ,

ರಾಜ್ಯದ ಯಾವ ಪತ್ರಿಕೆಗಳಲ್ಲೂ ಪ್ರಕಟವಾಗದ ಬಹಳ ದೊಡ್ಡ ಸುದ್ದಿಯೊಂದು ಅ. 31ರ 'ಮೈಸೂರು ಮಿತ್ರ' ದಿನಪತ್ರಿಕೆಯಲ್ಲಿ ಪ್ರಕಟವಾಗಿತ್ತು. ಅದೇ ಡಿ.ಕೆ. ಶಿವಕುಮಾರ್ ಪದಗ್ರಹಣಕ್ಕೆ ಮಹೂರ್ತ ಫಿಕ್ಸ್ ಎಂಬುದಾಗಿತ್ತು. ಈ ವರದಿ ಎಷ್ಟು ಬಿಸಿ–ಬಿಸಿ ಚರ್ಚೆಗೆ ಕಾರಣವಾಯಿತೆಂದರೇ ಅಧಿಕಾರ ಹಸ್ತಾಂತರದ ವ್ಯಾಖ್ಯಾನಗಳಿಗೆ ಇಂಬು ನೀಡಿತ್ತು. ವಿಧಾನಸೌಧದ ಮೊಗಸಾಲೆ ಸೇರಿದಂತೆ ರಾಜ್ಯಾದ್ಯಂತ ವ್ಯಾಪಕ ವಿಶ್ಲೇಷಣೆಗೆ ಒಳಪಟ್ಟಿತು.

'ಮೈಸೂರು ಮಿತ್ರ' ಪತ್ರಿಕಾ ವರದಿ ಉಲ್ಲೇಖಿಸಿ ಪತ್ರಕರ್ತರು ಹಾಗೂ ಸುದ್ದಿ ಚಾನೆಲ್‌ಗಳ ವರದಿಗಾರರು ಈ ಬಗ್ಗೆ ಮುಖ್ಯಮಂತ್ರಿಯವರ ಅಭಿಪ್ರಾಯ ಕೇಳಿದಾಗ ಸಿಎಂ ಅವರು ಕೊಪೋದ್ರಿಕ್ತರಾಗಿ ಪತ್ರಕರ್ತರ ಮೇಲೆ ಗರಂ ಆಗಿದ್ದು, ಅಂದಿನ ಎಲ್ಲಾ ನ್ಯೂಸ್ ಚಾನಲ್‌ಗಳಲ್ಲಿ ಪ್ರಮುಖ ವಿಷಯವಾಯಿತು. ತವರು ಜಿಲ್ಲೆಯ ಪ್ರಮುಖ ಪತ್ರಿಕೆಯನ್ನು ಓದಿಲ್ಲವೆಂದೂ ಹೇಳಿದ್ದಾರೆ. ಆದರೇ ಇದನ್ನು ನಂಬಲು ಅಸಾಧ್ಯ. ಆವರ ಆಪ್ತ ಬಳಗ ಇದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದಿರುತ್ತಾರೆ.

ಒಟ್ಟಾರೆ ಮಿತ್ರನ ಅಂದಿನ ವರದಿ ಮುಖ್ಯಮಂತ್ರಿಗಳ ಮೂಡ್ ಅಪ್‌ಸೆಟ್ ಮಾಡಿದ್ದಂತೂ ನಿಜ. ಮತ್ತೊಂದು ಕಾರ್ಯಕ್ರಮವೊಂದರಲ್ಲಿ ಬೆಂಗಳೂರು ರಸ್ತೆ ಗುಂಡಿಗಳನ್ನು ನಿಮ್ಮ ಡೆಡ್ ಲೈನ್ ಮುಗಿದರೂ ಮುಚ್ಚಿಲ್ಲವೆಂಬ ಪತ್ರಕರ್ತರ ಪ್ರಶ್ನೆಗೆ ಹೋಗಿ ಶಿವಕುಮಾರ್‌ರನ್ನೇ ಕೇಳಿ ಎಂದು ಹೇಳಿರುವುದು ಮತ್ತೊಂದು ಸಂಶಯಕ್ಕೆ ಕಾರಣವಾಯಿತು. ಇದು ಅಧಿಕಾರ ತ್ಯಾಗದ ಮುನ್ಸೂಚನೆಯೇ ಎಂಬ ಗುಮಾನಿ ಮೂಡುತ್ತದೆ. ಒಟ್ಟಾರೆ ಶುಕ್ರವಾರದ 'ಮೈಸೂರು ಮಿತ್ರ' ಪತ್ರಿಕೆಯ ವರದಿ ಮುಖ್ಯಮಂತ್ರಿಗಳನ್ನು ವಿಚಲಿತರಾಗುವಂತೆ ಮಾಡಿದ್ದಲ್ಲದೆ ರಾಜಧಾನಿಯ ರಾಜಕೀಯ ಲೋಕದಲ್ಲಿ ಬಿರುಗಾಳಿ ಎಬ್ಬಿಸಿದಂತೂ ಅಪ್ಪಟ ಸತ್ಯ.

– ಹೆಚ್.ಆರ್.ಪ್ರಸಾದ್, ವಿವೇಕಾನಂದ ನಗರ, ಮೈಸೂರು.



ಕಾರ್ಕಳ ಆನಂದ ಭಟ್
ಮೊ: 7676554198
ಫ್ಲಾಟ್ ನಂ. 204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, OPP
H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲೆ

ದಿಕ್ಕುದೆಸೆ

ಭಾಷೆ ಬರೀ ಮಾತಲ್ಲ ; ಅದೇ ಬಾಳು



> 1971ರ ಬಾಂಗ್ಲಾ ವಿಮೋಚನೆಯ ಸಂದರ್ಭದಲ್ಲಿ ಚಳವಳಿಕಾರರ ಪ್ರಮುಖ ಬೇಡಿಕೆ ಮಾತೃಭಾಷೆಯಾಗಿತ್ತು ಎಂಬುದು ವಿಶೇಷವಾಗಿತ್ತು. ಈ ರೀತಿ ಮಾತೃಭಾಷೆಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಲು ಯುನೆಸ್ಕೊ (UNESCO) ಪ್ರತಿ ವರ್ಷ 21, ಫೆಬ್ರವರಿಯನ್ನು ಮಾತೃಭಾಷಾ ದಿನವಾಗಿ ಆಚರಿಸಬೇಕೆಂದು 17.11.1999ರಂದು ಘೋಷಿಸಿತು.

ಮಾನವನ ಶ್ರೇಷ್ಠ ಸಾಧನೆಗಳಲ್ಲಿ ಭಾಷೆ ಒಂದು ಅದ್ಭುತ ಆವಿಷ್ಕಾರವಾಗಿದೆ ಸಂಸ್ಕೃತ ಕವಿ ಪದಲಾಲಿತ್ಯ ನೀಡಿದ ದಂಡಿಯು ಭಾಷೆ ಹಾಗೂ ಶಬ್ದಗಳ ಉತ್ಪತ್ತಿ ಬಗ್ಗೆ;

"ಇದಮಂಧಂ ತಮಃ ಕೃತ್ಸ್ನಂ ಜಾಯೇತ ಭುವನತ್ರಯಂ।

ಯದಿ ಶಬ್ದಾಃಪಯಂ ಜ್ಯೋತಿ ರಾ ಸಂಸಾರಂ ನ ದೀಪ್ಯತೆ ॥

ಅರ್ಥಾತ್: ಶಬ್ದವೆಂಬ ಜ್ಯೋತಿಯು ಈ ಸಂಸಾರವನ್ನು ಬೆಳಗದೇ ಇರುತ್ತಿದ್ದರೆ ಮೂರು ಲೋಕಗಳು ಕಗ್ಗತ್ತಲೆಯಲ್ಲಿ ಉಳಿಯುತ್ತಿದ್ದವು. ವಿಮರ್ಶಾತ್ಮಕವಾಗಿ, ಶಬ್ದ ಅಥವಾ ಭಾಷಾ ಮಾಧ್ಯಮವು ಈ ಬ್ರಹ್ಮಾಂಡ ಮತ್ತು ಅದರ ವಿವಿಧ ಘಟಕಗಳ ಪರಿಚಯ ಹಾಗೂ ಅವುಗಳನ್ನು ಸದುಪಯೋಗಿಸಲು ಪ್ರೇರಣೆ ನೀಡುತ್ತದೆ.

ಬಾಲ್ಯದಲ್ಲಿಯೇ ನಮಗೆ ಶಬ್ದ ಅಥವಾ ಭಾಷೆಯ ಪರಿಚಯವಾಗುತ್ತದೆ. ಮಾತಾ–ಪಿತರು, ಪರಿವಾರದ ಸದಸ್ಯರು, ಬಾಲ್ಯಾವಸ್ಥೆಯಲ್ಲಿಯೇ ಮಗುವಿನೊಂದಿಗೆ ಮಾತನಾಡುತ್ತಾರೆ. ಆರಂಭದಲ್ಲಿ ಮಗುವಿಗೆ ಮಾತುಗಳು ಅರ್ಥವಾಗದಿದ್ದರೂ, ಶಬ್ದ ಗ್ರಹಿಕೆಯಿಂದ ಪ್ರತಿಕ್ರಿಯಿಸುತ್ತದೆ. ಮುಂದೆ ಅವುಗಳನ್ನು ಅರ್ಥೈಸಿಕೊಂಡು ಬಳಸುತ್ತವೆ. ಆದ್ದರಿಂದ ಮಕ್ಕಳಿಗೆ ಮನೆಯೇ ಮೊದಲ ಪಾಠಶಾಲೆಯಾಗಿದೆ.

ಬಾಲ್ಯಾವಸ್ಥೆಯಲ್ಲಿ ಮಗು ಕಲಿಯುವ ಭಾಷೆ ಮಾತೃಭಾಷೆಯಾಗಿದೆ. ಆದ್ದರಿಂದ ಮಾತೃಭಾಷೆಯನ್ನು ತಾಯಿಯ ಭಾಷೆಗೆ ಮಾತ್ರ ಸೀಮಿತಗೊಳಿಸಬಾರದು. ಅದನ್ನು ಮಗುವಿನ ಬುದ್ಧಿಯ ವಿಕಾಸದ ಮೇಲೆ ಪ್ರಭಾವ ಬೀರುವ ಪ್ರಾಥಮಿಕ ಪರಿಸರದ ರೂಪದಲ್ಲಿ ನೋಡಬೇಕು. ದಿ ಜರ್ನಿ ಆಫ್ ವರ್ಡ್ಸ್ (The Journey of Words) ಲೇಖಕ ಅಜಿತ್ ವಡ್ನೇಕರ್ ಪ್ರಕಾರ 'ಮಾತೃಭಾಷೆಯಲ್ಲಿ ಬರುವ ಮಾತೃ ಎಂಬ ಶಬ್ದವು ಮಗುವು ಇರುವ ಪ್ರದೇಶ, ಪರಿಸರ ಮತ್ತು ಸ್ಥಾನದಲ್ಲಿ ಮಾತನಾಡುವ ಭಾಷೆಯಾಗಿದ್ದು, ಇದರ ಮೂಲಕ ಪ್ರಪಂಚದ ಸಂಪರ್ಕಗಳಿಸುವುದಾಗಿದೆ'.

ಮಾತೃಭಾಷೆಯ ಮಹತ್ವ: 1971ರ ಬಾಂಗ್ಲಾ ವಿಮೋಚನೆಯ ಸಂದರ್ಭದಲ್ಲಿ ಚಳವಳಿಕಾರರ ಪ್ರಮುಖ ಬೇಡಿಕೆ ಮಾತೃಭಾಷೆಯಾಗಿತ್ತು ಎಂಬುದು ವಿಶೇಷವಾಗಿತ್ತು. ಈ ರೀತಿ ಮಾತೃಭಾಷೆಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಲು ಯುನೆಸ್ಕೊ (UNESCO) ಪ್ರತಿ ವರ್ಷ 21, ಫೆಬ್ರವರಿಯನ್ನು ಮಾತೃಭಾಷಾ ದಿನವಾಗಿ ಆಚರಿಸಬೇಕೆಂದು 17.11.1999ರಂದು ಘೋಷಿಸಿತು.

ಕಳೆದ ಕೆಲವು ವರ್ಷಗಳಿಂದ ನಮ್ಮ ದೇಶದಲ್ಲಿ ಮಾತೃಭಾಷೆಗಳು ವೇಗವಾಗಿ ಕಣ್ಮರೆಯಾಗುತ್ತಿವೆ. ಈ ಬಗ್ಗೆ ಭಾಷಾಶಾಸ್ತ್ರಜ್ಞರು, ಶಿಕ್ಷಣ ತಜ್ಞರು ಕಳವಳ ವ್ಯಕ್ತಪಡಿಸಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ದೇಶದಲ್ಲಿ ಬಳಕೆಯಲ್ಲಿರುವ ಅನೇಕ ಮಾತೃಭಾಷೆಗಳು ಅವುಗಳನ್ನು ಮಾತನಾಡುವವರ ಸಂಖ್ಯೆ ನಿರಂತರವಾಗಿ ಕ್ಷೀಣಿಸುತ್ತಿವೆ. ವಿಶ್ವವು ಜಾಗತಿಕ ಗ್ರಾಮವಾಗುತ್ತಿರುವಾಗ ಕೆಲವು ಭಾಷೆಗಳು ನಾಶ ವಾಗುವುದರಿಂದ ಯಾವುದೇ ಹಾನಿ ಇಲ್ಲವೆಂದು ಹೇಳಬಹುದು. ಆದರೆ ಆ ರೀತಿ ಯೋಚಿಸುವವರು ಒಂದು ನಿರ್ದಿಷ್ಟ ಭಾಷೆಯ ನಷ್ಟವೂ ಸಂಪೂರ್ಣ ಸಂಸ್ಕೃತಿ ಮತ್ತು ಜೀವನ ವೈಶಿಷ್ಟ್ಯಗಳ ನಾಶಕ್ಕೆ ಸಮ ಎಂಬುದನ್ನು ಮರೆತು ಬಿಡುತ್ತಾರೆ. ಭಾಷೆ, ಸಾಹಿತ್ಯದ ವಿದ್ವಾಂಸರಾದ ರಾಧಾವಲ್ಲಭ ತ್ರಿಪಾಠಿಯವರು ಪ್ರತಿಯೊಂದು ಪರಿಸರಕ್ಕೆ ತನ್ನದೇ ಆದ ವಿಶಿಷ್ಟ ಸಂಸ್ಕೃತಿ ಇದೆ. ನಮ್ಮ ಪರಿಸರದಲ್ಲಿರುವ ವಸ್ತು ವಿಶೇಷಗಳು, ಜೀವ ವೈವಿಧ್ಯಗಳನ್ನು ಹೆಸರಿಸುವ ಶಬ್ದಕೋಶವಿದೆ. ಈ ಪದಗಳ ನಷ್ಟದೊಂದಿಗೆ ಒಂದು ಜಗತ್ತು ಕಣ್ಮರೆಯಾಗುತ್ತದೆ. ಒಂದು ಪರಂಪರೆ, ಒಂದು ಜೀವನ ಶೈಲಿ ನಾಶವಾಗುತ್ತದೆ. ಆ ಪರಿಸರದ, ಮಣ್ಣಿನ ಸಂಪರ್ಕ ಕಳಚಿ ಹೋಗುತ್ತದೆ.

ಸ್ವಾತಂತ್ರ್ಯ ಪೂರ್ವದಲ್ಲಿ ವಸಾಹತುಶಾಹಿ ಬ್ರಿಟಿಷ್ ಸರಕಾರವು ತನ್ನ ಆಡಳಿತ ಸ್ಥಾಪಿಸಲು ದೇಶದಲ್ಲಿ ಇಂಗ್ಲಿಷ್ ಅನ್ನು ಅಧಿಕೃತ ಭಾಷೆಯಾಗಿ ಮಾಡಿತು. ಇದರಿಂದ ಭಾರತೀಯರಿಗೆ ಇಂಗ್ಲಿಷ್ ಭಾಷೆ ಕಲಿಯುವುದು ಅನಿವಾರ್ಯವಾಯಿತು. ಬ್ರಿಟಿಷ್ ಸರಕಾರವು ನಮ್ಮ ಶಾಲೆಗಳಲ್ಲಿದ್ದ ಮಾತೃಭಾಷೆ ಆಧಾರಿತ ಸಾಂಪ್ರದಾಯಿಕ ಶಿಕ್ಷಣ ಪದ್ಧತಿಯನ್ನು ಬೇರು ಸಹಿತ ಕಿತ್ತೆಸೆಯಲು ಬಯಸಿತು.

20.10.1931ರಂದು ಲಂಡನ್ ದುಂಡುಮೇಜಿನ ಪರಿಷತ್ ಸಭೆಯಲ್ಲಿ ಭಾಗವಹಿಸಿದ್ದ ಗಾಂಧೀಜಿಯವರು ಮಾತನಾಡುತ್ತಾ, 'ಬ್ರಿಟಿಷರ ವಸಾಹತುಶಾಹಿ ಕಾರ್ಯಸೂಚಿಗೆ ಅನುಕೂಲವಾಗುವ ರೀತಿಯಲ್ಲಿ ಭಾರತೀಯ ಶಾಲೆಗಳಿಗೆ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲ. ಈ ಕಾರಣದಿಂದ ಭಾರತೀಯ ಶಾಲೆಗಳು ಮಾನ್ಯತೆ ಗಳಿಸದೇ ಅಂತ್ಯಗೊಳ್ಳುತ್ತಿವೆ. ಆದರೆ ದುಬಾರಿಯಾಗಿರುವ ಯುರೋಪಿಯನ್ ಶೈಲಿಯ ಶಾಲೆಗಳನ್ನು ನಡೆಸುವ ಸ್ಥಿತಿಯಲ್ಲಿಲ್ಲ. ಅದೇ ರೀತಿ ಯುರೋಪಿಯನ್ ಮಾದರಿ ಬಳಸಿಕೊಂಡು ಮುಂದಿನ ನೂರು ವರ್ಷಗಳಲ್ಲಿ ಈ ದೇಶದಲ್ಲಿ ಸಂಪೂರ್ಣ ಸಾಕ್ಷರತೆ ತರಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ನಾನು ಸವಾಲು ಹಾಕುತ್ತೇನೆ' ಎಂದರು.

ಮುಂದೆ ಗಾಂಧೀಜಿಯವರ ಮಾತುಗಳು ನಿಜವೆಂದು ಸಾಬೀತಾದವು ಮತ್ತು ನಮ್ಮ ಶತಮಾನಗಳಷ್ಟು ಹಳೆಯದಾದ ಸ್ವಾವಲಂಬಿ ಜ್ಞಾನ ಪರಂಪರೆ ಹಾಗೂ ಅರ್ಥ ವ್ಯವಸ್ಥೆ ವಿನಾಶದ ಅಂಚಿಗೆ ತಲುಪಿದ್ದವು. ಇಂತಹ ಪರಿಸ್ಥಿತಿಯಲ್ಲಿ ಭಾರತೀಯರು ಜೀವನಕ್ಕಾಗಿ ಉದ್ಯೋಗ ಗಳಿಸಲು ಇಂಗ್ಲಿಷ್ ಕಲಿಯುವಂತೆ ಒತ್ತಾಯಿಸಲಾಯಿತು. ಕ್ರಮೇಣ ಇಂಗ್ಲಿಷ್ ಭಾಷೆ ಅಧಿಕಾರ, ಅಂತಸ್ತು ಹಾಗೂ ಪ್ರಭಾವದ ಭಾಷೆಯಾಯಿತು. ಆ ನಂತರ ಭಾರತೀಯರಲ್ಲಿ ಇಂಗ್ಲಿಷ್ ವ್ಯಾಮೋಹ ಮೇರೆ ಮೀರಿದೆ.

ಬ್ರಿಟೀಷರು ಭಾರತ ಬಿಟ್ಟು ತೆರಳಿದ ನಂತರ ದೇಶದ ಪ್ರತಿಯೊಂದು ಹಂತದಲ್ಲೂ ಮಾತೃಭಾಷೆ ಬಲಗೊಳಿಸಬೇಕೆಂದು ಅಸಂಖ್ಯಾತ ಸ್ವಾತಂತ್ರ್ಯ ಹೋರಾಟಗಾರರು ಕನಸು ಕಂಡಿದ್ದರು. ಸ್ವತಂತ್ರ ಭಾರತವು ಹಳೆಯ ಹಳ್ಳಿ ಶಿಕ್ಷಕರನ್ನು ಮರಳಿ ತರುತ್ತದೆ, ಪ್ರತಿ ಹಳ್ಳಿಯ ಬಾಲಕ–ಬಾಲಕಿಯರಿಗೆ ಶಾಲೆಗಳನ್ನು ಒದಗಿಸಲಾಗುವುದೆಂದು ಗಾಂಧೀಜಿಯವರು ಸ್ಪಷ್ಟವಾಗಿ ಹೇಳಿದ್ದರು. ಆದರೆ ಆ ನಂತರದ ವರ್ಷಗಳಲ್ಲಿ ಗಾಂಧೀಜಿಯವರ ಕಲ್ಪನೆಗೆ ವಿರುದ್ಧವಾಗಿ ನಾಯಿಕೊಡೆಗಳಂತೆ ಇಂಗ್ಲಿಷ್ ಮಾಧ್ಯಮ ಶಿಕ್ಷಣ ಸಂಸ್ಥೆಗಳು ಪ್ರಾರಂಭವಾದವು.

ಮಾತೃಭಾಷೆಯಿಂದಲೇ ಸಮಗ್ರ ಶಿಕ್ಷಣ ಸಾಧ್ಯ: ಶಿಕ್ಷಣದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಶಿಕ್ಷಣವನ್ನು ಮಾತೃಭಾಷೆಯಲ್ಲಿ ನೀಡುವುದರಿಂದ ಮಾತ್ರ ನಿಜವಾದ ಸಮಗ್ರ ಶಿಕ್ಷಣವನ್ನು ಸಾಧಿಸಬಹುದು. ಪ್ರತಿಭಾ ಪಲಾಯನವು ತನ್ನಿಂದ ತಾನೆ ಸ್ಥಗಿತಗೊಳ್ಳಬಹುದು. ನೊಬೆಲ್ ಪ್ರಶಸ್ತಿ ಮತ್ತು ಭಾರತ ರತ್ನ ಪುರಸ್ಕೃತ ಭೌತಶಾಸ್ತ್ರ ವಿಜ್ಞಾನಿ ಮತ್ತು ರಾಮನ್ ಪರಿಣಾಮ ಶೋಧಿಸಿದ ಸಿ.ವಿ.ರಾಮನ್ ಅವರು ಒಮ್ಮೆ ವಿಜ್ಞಾನ ಶಿಕ್ಷಣವನ್ನು ಮಾತೃಭಾಷೆಯಲ್ಲಿ ನೀಡಬೇಕೆಂದು ಹೇಳಿದ್ದರು. ಇಲ್ಲದಿದ್ದರೆ ವಿಜ್ಞಾನವು ಹುಸಿ ಶ್ರೇಷ್ಠತೆ ಮತ್ತು ದುರಹಂಕಾರಿ ಚಟುವಟಿಕೆಯಾಗುತ್ತದೆ ಎಂದು ಎಚ್ಚರಿಸಿದ್ದರು.

ಸಾಮಾನ್ಯ ಜನರು ವಿಜ್ಞಾನ ಕ್ಷೇತ್ರದಲ್ಲಿ ಕೆಲಸ ಮಾಡಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದ್ದರು. ಆದಾಗ್ಯೂ ಪ್ರಸ್ತುತ ಪರಿಸ್ಥಿತಿಯೆಂದರೆ ವಿದ್ಯಾರ್ಥಿಗಳಲ್ಲಿ ತಾರತಮ್ಯ ಹೆಚ್ಚುತ್ತಿದೆ. ಭಾರತೀಯ ಭಾಷೆಯಲ್ಲಿ ಶಿಕ್ಷಣ ಪಡೆದವರನ್ನು ಕೀಳಾಗಿ ಕಾಣಲಾಗುತ್ತಿದೆ. ಪರಿಣಾಮವಾಗಿ ಪೋಷಕರು ತಮ್ಮ ಮಕ್ಕಳನ್ನು ಇಂಗ್ಲಿಷ್ ಮಾಧ್ಯಮದಲ್ಲಿ ಓದಿಸಲು ತಮ್ಮ ಉಳಿತಾಯದ ಬಲುಪಾಲನ್ನು ಖರ್ಚು ಮಾಡುತ್ತಿದ್ದಾರೆ. ಇದಲ್ಲದೇ ಮಕ್ಕಳು ವಿದೇಶಿ ಭಾಷೆಗಳನ್ನು ಕಲಿಯಲು ಪ್ರೋತ್ಸಾಹಿಸುತ್ತಿದ್ದಾರೆ.

ಬನಾರಸ್ ಹಿಂದು ವಿವಿಯಲ್ಲಿ ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ಗಾಂಧೀಜಿಯವರು, 'ನಾನು ಪೂನಾದಲ್ಲಿ ಕೆಲವು ಪ್ರಾಧ್ಯಾಪಕರೊಂದಿಗೆ ಮತುಕತೆ ನಡೆಸಿದ್ದೆ. ನಾವು ಭಾರತೀಯ ವಿದ್ಯಾರ್ಥಿಗಳಿಗೆ ಇಂಗ್ಲಿಷ್‌ನಲ್ಲಿ ಶಿಕ್ಷಣ ನೀಡಲು ಪ್ರಯತ್ನಿಸುತ್ತಿರುವುದರಿಂದ ಈ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಕನಿಷ್ಠ ಆರು ವರ್ಷ ವ್ಯರ್ಥವಾಗಿ ಕಳೆಯಬೇಕಾಗುತ್ತೆ' ಎಂದು ಹೇಳಿದ್ದರು. ಇದು ಶ್ರಮ ಮತ್ತು ಸಂಪನ್ಮೂಲಗಳ ವ್ಯರ್ಥಕ್ಕೂ ಕಾರಣವಾಗುತ್ತದೆ ಎಂದು ಪ್ರಾಧ್ಯಾಪಕರು ಹೇಳಿದ್ದರು.

ಈ ಬಗ್ಗೆ ಗಾಂಧೀಜಿಯವರು 'ನಾನು ಸರ್ವಾಧಿಕಾರಿಯಾಗಿದ್ದರೆ ತತ್‌ಕ್ಷಣದಿಂದ ಮಾತೃಭಾಷೆಯಲ್ಲಿ ಶಿಕ್ಷಣವನ್ನು ಕಡ್ಡಾಯಗೊಳಿಸುತ್ತಿದ್ದೆ. ಪಠ್ಯ ಪುಸ್ತಕಗಳಿಗಾಗಿ ಕಾಯುತ್ತಿರಲಿಲ್ಲ. ಏಕೆಂದರೆ ಶಿಕ್ಷಣ ಮಾಧ್ಯಮವು ಜಾರಿಯಾಗುತ್ತಿದ್ದಂತೆ ಪಠ್ಯ ಪುಸ್ತಕಗಳು ತನ್ನಿಂದ ತಾನೆ ಮಾರುಕಟ್ಟೆಯಲ್ಲಿ ಕಾಣಿಸಿಕೊಳ್ಳುತ್ತವೆ.

ಹಲವಾರು ವೈಜ್ಞಾನಿಕ ಅಧ್ಯಯನಗಳು ವಿದ್ಯಾರ್ಥಿಗಳು ತಮ್ಮ ಮಾತೃಭಾಷೆಯಲ್ಲಿ ಕಲಿಸಿದರೆ ವಿಷಯಗಳನ್ನು ವೇಗವಾಗಿ ಕಲಿತು, ಅರ್ಥೈಸಿಕೊಳ್ಳುತ್ತಾರೆ ಎಂಬುದು ದೃಢಪಟ್ಟಿದೆ. ಜಪಾನ್, ಫ್ರಾನ್ಸ್, ಜರ್ಮನಿ, ಇಸ್ರೇಲ್ ನೆರೆಯ ಚೀನಾದಂತಹ ಅನೇಕ ದೇಶಗಳು ತಮ್ಮ ಮಾತೃಭಾಷೆಗಳ ವ್ಯಾಪಕ ಬಳಕೆಯ ಮೂಲಕ ಸ್ವಾವಲಂಬಿ, ಶಕ್ತಿಶಾಲಿ ದೇಶಗಳಾಗಿವೆ. ಭಾರತದಂತಹ ಬಹುಭಾಷಾ ದೇಶವು ತನ್ನ ಮಾತೃ ಭಾಷೆಗಳನ್ನು ಸಂರಕ್ಷಿಸಿ, ಉತ್ತೇಜಿಸಲು ಮೇಲೆ ತಿಳಿಸಿದ ದೇಶಗಳು ಅಳವಡಿಸಿಕೊಂಡ ನೀತಿಗಳು, ವಿಧಾನಗಳನ್ನು ಅಧ್ಯಯನ ಮಾಡಿ ಕಾರ್ಯಗತ ಗೊಳಿಸಬೇಕು.

ಹೊಸ ಉಪಕ್ರಮ–ರಾಷ್ಟ್ರೀಯ ಶಿಕ್ಷಣ ನೀತಿ–2020: ಈ ಸಂದರ್ಭದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ–2020 ರಲ್ಲಿರುವ ಭಾಷಾ ಸಂಬಂಧಿತ ನಿಬಂಧನೆಗಳು ಹೊಸ ಭರವಸೆ ನೀಡಿವೆ. ದೇಶದ ಪ್ರಮುಖ ಶಿಕ್ಷಣ ತಜ್ಞರ ಒಳನೋಟಗಳೊಂದಿಗೆ ಸಿದ್ಧಪಡಿಸಲಾದ ರಾಷ್ಟ್ರೀಯ ಶಿಕ್ಷಣ ನೀತಿ–2020 ಭಾರತದ ವೈವಿಧ್ಯಮಯ ಮಾತೃಭಾಷೆಗಳ ಪ್ರಚಾರಕ್ಕೆ ವಿಶೇಷ ಒತ್ತು ನೀಡುತ್ತದೆ. ಈ ಶಿಕ್ಷಣ ನೀತಿಯಲ್ಲಿ ಪ್ರಾಥಮಿಕ ಶಿಕ್ಷಣಕ್ಕೆ ಸಂಬಂಧಿಸಿದ ನಿಬಂಧನೆಗಳಲ್ಲಿರುವಂತೆ ಚಿಕ್ಕ ಮಕ್ಕಳು ತಮ್ಮ ಮನೆ ಭಾಷೆ, ಮಾತೃಭಾಷೆಯಲ್ಲಿ ವೇಗವಾಗಿ ಕಲಿಯುತ್ತಾರೆ ಮತ್ತು ಗ್ರಹಿಸುತ್ತಾರೆಂಬುದು ಸರ್ವವಿಧಿತ ಎಂದು ಹೇಳಲಾಗಿದೆ. ಪ್ರಸ್ತುತ ಶಿಕ್ಷಣ ನೀತಿಯು ಸಾಧ್ಯವಾದಷ್ಟು ಮಟ್ಟಿಗೆ ಬೋಧನಾ ಮಾಧ್ಯಮವೂ ಕನಿಷ್ಠ ಎಂಟನೇ ತರಗತಿಯವರೆಗೆ ಮತ್ತು ಸಾಧ್ಯವಾದಲ್ಲೆಲ್ಲಾ ಎಂಟಕ್ಕಿಂತ ಹೆಚ್ಚಿನ ತರಗತಿಗಳಿಗೆ ಮನೆ, ಮಾತೃಭಾಷೆಯನ್ನು ಕಲಿಕೆಯ ಭಾಷೆಯಾಗಿ ಮುಂದುವರಿಸುವುದನ್ನು ಸಾರ್ವಜನಿಕ, ಖಾಸಗಿ ಶಾಲೆಗಳು ಇದನ್ನು ಅನುಸರಿಸಬೇಕು. ವಿಜ್ಞಾನ ಸೇರಿದಂತೆ ಎಲ್ಲಾ ವಿಷಯಗಳಲ್ಲಿ ಉತ್ತಮ ಗುಣಮಟ್ಟದ ಪಠ್ಯ ಪುಸ್ತಕಗಳನ್ನು ಮಾತೃಭಾಷೆಯಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ.

ಮಧ್ಯಪ್ರದೇಶ ಶಿಕ್ಷಣ ಸಚಿವಾಲಯವು ಹಿಂದಿಯಲ್ಲಿ ವೈದ್ಯಕೀಯ ಶಿಕ್ಷಣಕ್ಕಾಗಿ ವ್ಯವಸ್ಥೆಗಳನ್ನು ಪ್ರಾರಂಭಿಸಿದೆ. ಶಿಕ್ಷಣದ ಭಾರತೀಕರಣಕ್ಕೆ ಬದ್ಧವಾಗಿರುವ ಸಂಘ ಮತ್ತು ಅದರ ಅಂಗ ಸಂಸ್ಥೆಗಳು ಹಲವಾರು ಸರಕಾರೇತರ ಸಂಸ್ಥೆಗಳ ಅವಿಶ್ರಾಂತ ಯತ್ನಗಳಿಂದಾಗಿ ಕೇಂದ್ರ ಸರಕಾರದ ಲೋಕ ಸೇವಾ ಆಯೋಗವು ಬಹುಕಾರ್ಯ ತಾಂತ್ರಿಕೇತರ ಸಿಬ್ಬಂದಿಗಳ ಆಯ್ಕೆಗೆ ಹದಿಮೂರು ಭಾರತೀಯ ಭಾಷೆಗಳಲ್ಲಿ ಪರೀಕ್ಷೆಯನ್ನು ನಡೆಸಲು ನಿರ್ಧರಿಸಿದೆ.

ಗೌರವಾನ್ವಿತ ರಾಷ್ಟ್ರಪತಿಗಳು, ಎಂಜಿನಿಯರಿಂಗ್ ಪುಸ್ತಕಗಳು, ತಾಂತ್ರಿಕ ಪರಿಭಾಷೆ ಮತ್ತು ಲಿಪಿಯು ಭಾಷೆಗೆ ಅನುವಾದಿಸಲಾದ ಇ–ಕುಂಭ ಪೋರ್ಟಲ್ ಅನ್ನು ಎರಡು ವರ್ಷದ ಹಿಂದೆ ಅನಾವರಣಗೊಳಿಸಿರುವುದು ಪ್ರಾದೇಶಿಕ ಭಾಷೆಗಳನ್ನು ಉತ್ತೇಜಿಸಲು ಒಂದು ಗಮನಾರ್ಹ ಉಪಕ್ರಮವಾಗಿದೆ. ಜ್ಞಾನ, ವಿಜ್ಞಾನ, ತಂತ್ರಜ್ಞಾನಗಳನ್ನು ಸಾಧ್ಯವಾದಷ್ಟು ಬೇಗ ಭಾರತೀಯ ಭಾಷೆಗಳಲ್ಲಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ 'ರಾಷ್ಟ್ರೀಯ ಅನುವಾದ ಮಿಷನ್ ಬಲಪಡಿಸಬೇಕಾಗಿದೆ. ಒರಿಸ್ಸಾ, ಮಧ್ಯಪ್ರದೇಶಗಳಂತೆ ಕರ್ನಾಟಕವು ವೈದ್ಯಕೀಯ, ತಾಂತ್ರಿಕ ಶಿಕ್ಷಣಗಳನ್ನು ಕನ್ನಡದಲ್ಲಿ ಕಲಿಯಲು ಅವಕಾಶ ಕಲ್ಪಿಸಬೇಕು.

ದೇಶೀಯ ಮತ್ತು ಅಂತರರಾಷ್ಟ್ರೀಯವಾಗಿ ನಡೆಸಿದ ಸಂಶೋಧನೆಯ ಪ್ರಕಾರ ಮೂರು ವರ್ಷದ ಹೊತ್ತಿಗೆ ಒಂದು ಮಗು ತನ್ನ ಪರಿಸರದಿಂದ ಸುಮಾರು ಒಂದು ಸಾವಿರ ಪದಗಳನ್ನು ಕಲಿಯುತ್ತದೆ. ಈ ಪದಗಳನ್ನು ಅವರ ಶಿಕ್ಷಣದಲ್ಲಿ ಸೇರಿಸುವುದರಿಂದ ಅವರ ಕಲಿಕೆಯ ಹಾದಿಯೂ ತುಲನಾತ್ಮಕವಾಗಿ ಸುಗಮ ಮತ್ತು ಅರ್ಥಪೂರ್ಣವಾಗುತ್ತದೆ. ಎರಡು ವರ್ಷದ ಹಿಂದೆ ಬ್ರಿಟನ್‌ನಲ್ಲಿರುವ ರೀಡಿಂಗ್ ವಿವಿಯ ಸಂಶೋಧಕರು ಪ್ರತಿದಿನ ಬಹುಭಾಷೆಗಳನ್ನು ಬಳಸುವ ಮಕ್ಕಳು ಉತ್ತಮ ಕಲಿಕಾ ಫಲಿತಾಂಶಗಳನ್ನು ಹೊಂದಿದ್ದಾರೆಂದು ಕಂಡುಕೊಂಡಿದ್ದಾರೆ. ಜೀವನದಲ್ಲಿ ತಮ್ಮ ಭಾಷೆ ಬಳಸುವವರು ಅನ್ಯ ಭಾಷೆಯನ್ನು ಮಾತ್ರ ತಿಳಿದಿರುವ ಮಕ್ಕಳಿಗಿಂತ ಬುದ್ಧಿಮತ್ತೆಯ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸುತ್ತಾರೆ. ಈ ಸಂಶೋಧನೆಯಿಂದ ಪ್ರೇರಿತರಾಗಿ ಮಕ್ಕಳು ತಮ್ಮ ಮಾತೃಭಾಷೆಯಲ್ಲಿ ಸಂವಹನ ನಡೆಸಲು ಪ್ರೋತ್ಸಾಹಿಸಬೇಕು. ಇತರ ಭಾಷೆಗಳ ಜ್ಞಾನ ಒಂದು ನ್ಯೂನತೆಯಲ್ಲ, ಬದಲಾಗಿ ಹೆಚ್ಚುವರಿ ಕೌಶಲ್ಯವೆಂದು ತಿಳಿಯಬೇಕು. ಕೊನೆಯದಾಗಿ ನಮ್ಮ ಭಾಷೆಯನ್ನು ಬಲಿಕೊಟ್ಟು ವಿದೇಶಿ ಭಾಷೆಯನ್ನು ಬಳಸುವುದು ತಾರ್ಕಿಕವೂ ಅಲ್ಲ, ನ್ಯಾಯಸಮ್ಮತವೂ ಅಲ್ಲ ಎಂಬುದನ್ನು ಮನಗಾಣಬೇಕಾಗಿದೆ.


(ಸೌಜನ್ಯ: ಪಾಂಚಜನ್ಯ ಸಾಪ್ತಾಹಿಕ)

ಉದ್ದೇಶಿತ ಪೆರಿಫೆರಲ್ ರಿಂಗ್ ರಸ್ತೆ ಇಕ್ಕೆಲಗಳಲ್ಲಿ 100 ಅಡಿ ಭೂಮಿ ಸ್ವಾಧೀನಕ್ಕೆ ಎಂಡಿಎ ನಿರ್ಧಾರ

ಮೈಸೂರು,ನ.5(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನ ಸಮಗ್ರ ಅಭಿವೃದ್ಧಿ ಹಾಗೂ ಭವಿಷ್ಯದ ದೂರದೃಷ್ಟಿಯನ್ನೊಳಗೊಂಡ ಮಹತ್ವದ ಯೋಜನೆಯಾದ 105.51 ಕಿಲೋ ಮೀಟರ್ ಉದ್ದದ 'ಪೆರಿಫೆರಲ್ ರಿಂಗ್ ರೋಡ್ (ಪಿಆರ್‌ಆರ್)' ನಿರ್ಮಾಣಕ್ಕೆ ಮುಂದಾಗಿರುವ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ವು ಹೆಚ್ಚುವರಿ ಭೂ ಸ್ವಾಧೀನಕ್ಕೆ ಸಿದ್ಧತೆ ನಡೆಸುವ ಮೂಲಕ ಆದಾಯಕ್ಕೆ ಹೊಸ ದಾರಿಯನ್ನೂ ಕಂಡುಕೊಂಡಿದೆ.

ಮೈಸೂರಿನಲ್ಲಿ ವಾಹನ ಸಂಚಾರ ದಟ್ಟಣೆ ನಿಯಂತ್ರಣ ಹಾಗೂ ಭವಿಷ್ಯದ ದೃಷ್ಟಿಯಿಂದ ಮಹತ್ವದ ಹೆಜ್ಜೆ ಇಟ್ಟಿರುವ ಎಂಡಿಎ, 'ಪೆರಿಫೆರಲ್ ರಿಂಗ್ ರೋಡ್(ಪಿಆರ್‌ಆರ್)' ಉದ್ದಕ್ಕೂ ಎರಡೂ ಬದಿಯಲ್ಲಿ ಕನಿಷ್ಠ 100 ಅಡಿ ಭೂಮಿ ಸ್ವಾಧೀನಪಡಿಸಿಕೊಳ್ಳಲು ನವೀಕೃತ ಡಿಪಿಆರ್(ಡಿಟೈಲ್ಡ್ ಪ್ರಾಜೆಕ್ಟ್ ರಿಪೋರ್ಟ್) ಸಿದ್ಧಪಡಿಸುತ್ತಿದೆ. ಮೈಸೂರನ್ನು ಯೋಜಿತ ನಗರವನ್ನಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಉದ್ದೇಶಿತ 'ಪೆರಿಫೆರಲ್ ರಿಂಗ್ ರೋಡ್ (ಪಿಆರ್‌ಆರ್)'ನ ನವೀಕೃತ ಡಿಪಿಆರ್ ಸಿದ್ಧವಾಗುತ್ತಿದ್ದು, 45 ಮೀಟರ್ ಅಗಲದಲ್ಲಿ 6 ಲೈನ್ (3+3 ವಾಹನ ಮಾರ್ಗಗಳು) ಹಾಗೂ 4 ಸರ್ವಿಸ್ ರಸ್ತೆ ಮಾರ್ಗ(2+2) ಹೊಂದಿರಲಿದೆ. ಈ ಮೂಲಕ ರಿಂಗ್ ರೋಡ್‌ನಲ್ಲಾಗುತ್ತಿರುವ ವಾಹನ ಸಂಚಾರ ದಟ್ಟಣೆ ನಿವಾರಣೆಯ ಜೊತೆಗೆ ಆದಾಯಕ್ಕೆ ಹೊಸ ದಾರಿ ಮಾಡಿಕೊಟ್ಟಿದೆ. ರಿಂಗ್ ರಸ್ತೆ ನಿರ್ಮಾಣದ ಸಂದರ್ಭದಲ್ಲಿ 6 ಲೈನ್ ರಸ್ತೆ ಜೊತೆಗೆ ಸರ್ವಿಸ್ ರಸ್ತೆಗೆ ಬೇಕಾದಷ್ಟು ಭೂಮಿಯನ್ನು ಮಾತ್ರ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಇದರಿಂದ ರಸ್ತೆ ಅಗಲೀಕರಣಕ್ಕೆ ಅವಕಾಶ ಇಲ್ಲದಂತಾಯಿತಲ್ಲದೆ ರಿಂಗ್ ರಸ್ತೆ ಬದಿಯಲ್ಲಿ ವಾಣಿಜ್ಯ ಮಳಿಗೆಗಳು, ಬಡಾವಣೆಗಳು, ನಿವೇಶನ, ವಸತಿಗಳು ನಿರ್ಮಾಣಗೊಂಡಿದ್ದರಿಂದ ಖಾಸಗಿ ವ್ಯಕ್ತಿಗಳಿಗೆ ಲಾಭದಾಯಕವಾಗಿ ಮಾರ್ಪಾಟ್ಟಿತ್ತು. ಅಲ್ಲದೆ ಅಗತ್ಯವಿದ್ದ ಸ್ಥಳಗಳಲ್ಲಿಯೂ ಸರ್ವಿಸ್ ರಸ್ತೆಯನ್ನು ಅಗಲೀಕರಣ ಮಾಡಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಯಿತು. ಇದರಿಂದ ಎಚ್ಚೆತ್ತಿರುವ ಎಂಡಿಎ, ಉದ್ದೇಶಿತ ಪೆರಿಫೆರಲ್ ರಿಂಗ್ ರೋಡ್ ನಿರ್ಮಾಣ ಪ್ರಕ್ರಿಯೆಯ ಆರಂಭದಲ್ಲಿಯೇ 6 ಪಥ ರಸ್ತೆ ಮತ್ತು 4 ಪಥದ ಸರ್ವಿಸ್ ರಸ್ತೆ ನಿರ್ಮಾಣಕ್ಕೆ ಅಗತ್ಯವಿರು ವಷ್ಟು ಭೂಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ. ಅಲ್ಲದೆ, 105.31 ಕಿಮೀ ಉದ್ದದ ಪಿಆರ್‌ಆರ್‌ನ ಎರಡೂ ಬದಿಗಳಲ್ಲೂ ತಲಾ 100 ಅಡಿ ಅಗಲದ ಭೂಮಿ ಸ್ವಾಧೀನ ಪಡಿಸಿಕೊಳ್ಳಲಾಗುತ್ತಿದ್ದು, ಸುಮಾರು 6,82,50,000 ಚದುರ ಅಡಿ ಭೂಮಿ ಸರ್ಕಾರದ ಆಸ್ತಿಯಾಗಿ ಉಳಿಯಲಿದೆ. ಈ ಭೂಮಿಯನ್ನು ಎಂಡಿಎ ತನ್ನ ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲಿದೆ. ಇದರಿಂದ ಭವಿಷ್ಯದಲ್ಲಿ ಸರ್ಕಾರದ ಆದಾಯಕ್ಕೆ ಮೂಲ ಸೃಷ್ಟಿಯಾಗುವುದಲ್ಲದೆ, ಸಾರ್ವಜನಿಕ ಮೂಲ ಸೌಕರ್ಯದಿಂದ ಖಾಸಗಿಯವರು ಲಾಭ ಪಡೆಯುವ ಪ್ರವೃತ್ತಿಗೆ ತಡೆ ಬೀಳಲಿದೆ.


ಮುಖ್ಯಮಂತ್ರಿಗಳ ಅನುಮೋದನೆ: ಸೋಮವಾರ ನಡೆದ 'ಗ್ರೇಟರ್ ಮೈಸೂರು ಸಭೆಯಲ್ಲಿ ಎಂಡಿಎ ಅಧಿಕಾರಿಗಳು ಪೆರಿಫೆರಲ್ ರಿಂಗ್ ರೋಡ್ ಅಭಿವೃದ್ಧಿ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾಹಿತಿ ನೀಡಿದ್ದು, ಆದಾಯೋತ್ಪಾದಕ ಈ ಮಹತ್ವದ ಯೋಜನೆಗೆ ಮುಖ್ಯಮಂತ್ರಿಗಳು ಗ್ರೀನ್ ಸಿಗ್ನಲ್ ನೀಡಿರುವುದಾಗಿ ಮೂಲಗಳು ತಿಳಿಸಿವೆ. ಅಲ್ಲದೆ ಮುಂದಿನ ಹಂತದಲ್ಲಿ ಡಿಪಿಆರ್ ಸಲಹೆಗಾರರಿಗೆ ಮುಖ್ಯ ರಸ್ತೆ, ಸರ್ವಿಸ್ ರಸ್ತೆ ಹಾಗೂ ಎರಡೂ ಬದಿಗಳ 100 ಅಡಿ ಬಫರ್ ವಲಯಗಳ ಗುರುತಿಸಲು ಸೂಚನೆ ನೀಡಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಆದಾಯಕ್ಕೆ ಹೊಸ ದಾರಿ

> ಹೆಚ್ಚುವರಿಯಾಗಿ ಸ್ವಾಧೀನಪಡಿಸಿಕೊಳ್ಳುವ ಜಾಗದಲ್ಲಿ ಟ್ರಕ್ ಟರ್ಮಿನಲ್‌ಗಳು, ಗೋದಾಮುಗಳು, ಲಾಜಿಸ್ಟಿಕ್ಸ್ ಹಬ್‌ಗಳು, ಸರ್ವಿಸ್ ಸೆಂಟರ್‌ಗಳು, ಹಸಿರು ವಲಯಗಳು, ಜಲಮಾರ್ಗ, ವಿದ್ಯುತ್ ಉಪ ಕೇಂದ್ರಗಳು, ತ್ಯಾಜ್ಯ ನಿರ್ವಹಣಾ ಘಟಕಗಳು ಹಾಗೂ ಇತರೆ ಸಾರ್ವಜನಿಕ ಸೌಲಭ್ಯಗಳನ್ನು ಸ್ಥಾಪಿಸುವ ದೂರ ದೃಷ್ಟಿಯನ್ನು ಎಂಡಿಎ ಹೊಂದಿದೆ. ಈ ಸೌಲಭ್ಯಗಳಿಂದ ಎಂಡಿಎ ನೇರವಾಗಿ ಆದಾಯ ಬರಲಿದೆ.
>
> – ಎಂಡಿಎ ಅಧಿಕಾರಿಗಳು

ಮುಂದಿನ ಎಲ್ಲ ಚುನಾವಣೆಗೆ ಸಿದ್ದರಾಮಯ್ಯ ನೇತೃತ್ವ



ಡಿ.ಕೆ.ಸುರೇಶ್

ಬೆಂಗಳೂರು: ಸಿದ್ದರಾಮಯ್ಯ ಅವರಿಗೆ ವಯಸ್ಸಾಗಿಲ್ಲ. ಮುಂದಿನ ಎಲ್ಲ ಚುನಾವಣೆಗಳು ಅವರ ನೇತೃತ್ವದಲ್ಲೇ ನಡೆಯಲಿವೆ. ಮುಂದೆಯೂ ಅವರೇ ಮುಖ್ಯಮಂತ್ರಿಯಾಗಿರಬಹುದು ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಹೇಳಿದರು.

ಸುದ್ದಿಗಾರರ ಜತೆ ಬುಧವಾರ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಎಷ್ಟು ದಿನ ಮುಖ್ಯಮಂತ್ರಿಯಾಗಿ ಇರುತ್ತಾರೋ ಅಷ್ಟು ದಿನ ಅವರೇ ಮುಖ್ಯಮಂತ್ರಿ ನಾಯಕತ್ವ ಬದಲಾವಣೆ, ಅಧಿಕಾರ ಹಸ್ತಾಂತರ ವಿಚಾರವಾಗಿ ನಡೆಯುತ್ತಿರುವ ಚರ್ಚೆಗಳೆಲ್ಲವೂ ಊಹಾಪೋಹ. ಮಾಧ್ಯಮಗಳಲ್ಲಿನ ಚರ್ಚೆಗಳು ಪಕ್ಷದ ಮುಂದೆ ಇಲ್ಲ. ಸಿದ್ದರಾಮಯ್ಯ ಅವರು ನಮ್ಮ ನಾಯಕರು. ಅವರ ನೇತೃತ್ವದಲ್ಲೇ ಪಕ್ಷ ಕಟ್ಟುತ್ತಿದ್ದೇವೆ ಎಂದರು.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಬೇಕು ಎಂದು ಅಭಿಮಾನಿಗಳು ಆಸೆ ಪಡುವುದು ಸಹಜ. ಕೆಲವರು ಎಚ್.ಡಿ.ಕುಮಾರಸ್ವಾಮಿ, ಮತ್ತೆ ಕೆಲವರು ಬಿ.ವೈ.ವಿಜಯೇಂದ್ರ, ಅಶ್ವತ್ಥನಾರಾಯಣ, ಆರ್.ಅಶೋಕ, ಜಿ.ಪರಮೇಶ್ವರ, ಸತೀಶ ಜಾರಕಿಹೊಳಿ ಎನ್ನುತ್ತಾರೆ. ಆಯಾಯ ಊರಿನ ಜನರು ತಮ್ಮ ನಾಯಕರು ಆಗಬೇಕು ಎಂದು ಬಯಸುತ್ತಾರೆ. ಇವೆಲ್ಲವು ರಾಜಕಾರಣದ ಭಾಗ. ಇಂತಹ ವಿಷಯಗಳ ಬಗ್ಗೆ ಹೈಕಮಾಂಡ್ ನಾಯಕರು ತೀರ್ಮಾನ ಮಾಡುತ್ತಾರೆ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com


ಮೈಸೂರು ಮಿತ್ರ ಗುರುವಾರ 6 ನವೆಂಬರ್ 2025

ಮೈಸೂರು ಪಾರಂಪರಿಕತೆಗೆ ಧಕ್ಕೆಯಾಗುವ ಉದ್ದೇಶಿತ ಫ್ಲೈ ಓವರ್ ನಿರ್ಮಾಣ ಬೇಡವೇ ಬೇಡ

● ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹ ● ಒಂದು ವೇಳೆ ಹಠಕ್ಕೆ ಬಿದ್ದು ನಿರ್ಮಾಣಕ್ಕೆ ಮುಂದಾದರೆ ಕಾನೂನು ಹೋರಾಟದ ಎಚ್ಚರಿಕೆ



ಸುದ್ದಿಗೋಷ್ಠಿಯಲ್ಲಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡುತ್ತಿರುವುದು.



ಫ್ಲೈಓವರ್ ನಿರ್ಮಾಣಕ್ಕೆ ಚಿಂತಿಸಿರುವ ಹುಣಸೂರು ರಸ್ತೆ.

ಮೈಸೂರು, ನ.5(ಎಂಟಿವೈ)– ಮೈಸೂರಿನ ಪಾರಂಪರಿಕತೆ ಕಾಪಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಝಾನ್ಸಿರಾಣಿ ಲಕ್ಷ್ಮೀ ಬಾಯಿ (ಜೆಎಲ್‌ಬಿ) ಹಾಗೂ ವಿನೋಬಾ ರಸ್ತೆಯಲ್ಲಿ ಉದ್ದೇಶಿತ ಫ್ಲೈ ಓವರ್ ನಿರ್ಮಾಣ ನಿರ್ಧಾರದಿಂದ ಹಿಂದೆ ಸರಿಯಬೇಕು. ಇಲ್ಲದಿದ್ದರೆ ಕಾನೂನು ಹೋರಾಟ ಮಾಡುವುದಾಗಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಎಚ್ಚರಿಸಿದ್ದಾರೆ.

ಮೈಸೂರಿನ ಕಾಡಾ ಕಚೇರಿ ಕಟ್ಟಡದ ಸಂಸದರ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ಎರಡು ರಸ್ತೆಯಲ್ಲಿ ಫ್ಲೈಓವರ್ ನಿರ್ಮಾಣಕ್ಕೆ ಈಗಾಗಲೇ ಮಣ್ಣಿನ ಪರೀಕ್ಷೆ ನಡೆಸಲಾಗುತ್ತಿದೆ. ಇವು ಪಾರಂಪರಿಕ ರಸ್ತೆಗಳಾಗಿದ್ದು, ಅವುಗಳನ್ನು ಹಾಗೆಯೇ ಉಳಿಸಿಕೊಳ್ಳಬೇಕು. ವಿನೋಬ ರಸ್ತೆಯಲ್ಲಿ ಫ್ಲೈ ಓವರ್ ನಿರ್ಮಿಸಲು ಮುಂದಾದರೆ ಹಲವು ಮರಗಳ ಹನನ ಮಾಡಬೇಕಾಗುತ್ತದೆ. ಅಭಿವೃದ್ಧಿ ನೆಪದಲ್ಲಿ ಮೈಸೂರಿನ ಸೌಂದರ್ಯ ಹಾಳು ಮಾಡಬಾರದು. ಪಾರಂಪರಿಕ ನಗರಿಯ ಗುರುತು ಉಳಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಜನಾಭಿಪ್ರಾಯ ಪಡೆಯದೆ ಈ ಮಾರ್ಗದಲ್ಲಿ ಫ್ಲೈ ಓವರ್ ನಿರ್ಮಾಣ ಕಾರ್ಯಕ್ಕೆ ಮುಂದಾಗಿರುವಂತಿದೆ. ಜನಪ್ರತಿನಿಧಿಗಳಿಗೂ ಈ ವಿಚಾರವಾಗಿ ಸರಿಯಾದ ಮಾಹಿತಿ ಇಲ್ಲ. ಆದರೂ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುತ್ತಿದ್ದಾರೆ. ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಫ್ಲೈ ಓವರ್ ನಿರ್ಮಾಣವೇ ಶಾಶ್ವತ ಪರಿಹಾರವಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊನ್ನೆ ನಡೆದ ಗ್ರೇಟರ್ ಮೈಸೂರು ಸಭೆಯಲ್ಲಿ ಮೈಸೂರಿನ ಪಾರಂಪರಿಕತೆ ಉಳಿಸಿಕೊಳ್ಳುವಂತೆ ಸಲಹೆ ನೀಡಿದ್ದಾರೆ. ಅವರ ಸಲಹೆಯಂತೆ ಅಧಿಕಾರಿಗಳು ನಡೆದುಕೊಳ್ಳಬೇಕು. ಜನರ ವಿರೋಧದ ನಡುವೆ ಫ್ಲೈ ಓವರ್ ಕಾಮಗಾರಿ ಕೈಗೆತ್ತಿಕೊಂಡರೆ ಕಾನೂನಾತ್ಮಕವಾಗಿ ಹೋರಾಟ ಮಾಡುತ್ತೇವೆ. ಜನರ ಸಹಕಾರದೊಂದಿಗೆ ಹೋರಾಟ ರೂಪಿಸುತ್ತೇವೆ ಎಂದರು.

ಮೈಸೂರಲ್ಲಿ ಮೆಟ್ರೋಗೆ ವಿರೋಧವಿಲ್ಲ: ಮೈಸೂರು ನಗರದ ಭವಿಷ್ಯದ ಬೆಳವಣಿಗೆಯ ದೃಷ್ಟಿಯನ್ನು ಇಟ್ಟುಕೊಂಡು ಮೆಟ್ರೋಗೆ ನಮ್ಮ ವಿರೋಧವಿಲ್ಲ. ಆದರೆ ಮುಂಬೈ ಮಾದರಿಯಲ್ಲಿ ಸುರಂಗ ಮಾರ್ಗ ಮೆಟ್ರೋ ನಿರ್ಮಾಣ ಮಾಡಬೇಕು. ಮೈಸೂರಿನ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿಗೆ ಸಲಹೆ ನೀಡಿದರು.

ಗ್ರೇಟರ್ ಮೈಸೂರಿಗೆ ಪೂರ್ವ ತಯಾರಿ ಮಾಡಿಕೊಳ್ಳಲಿ: ಗ್ರೇಟರ್ ಮೈಸೂರು ನಿರ್ಮಾಣ ಮಾಡುವಾಗ ಸ್ಥಳೀಯರಿಗೆ ಅನುಕೂಲವಾಗುವಂತೆ ಅಭಿವೃದ್ಧಿ ಕಾಮಗಾರಿ ಮಾಡಬೇಕು. ಇದಕ್ಕೆ ಪೂರ್ವ ತಯಾರಿ ಮಾಡಿಕೊಳ್ಳಬೇಕು. ಬೆಂಗಳೂರು ಮಾದರಿಯಲ್ಲಿ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಬಾರದು ಎಂದರು.

ರೈತರಿಗೆ ಸ್ಪಂದಿಸಬೇಕು: ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿ ಮಾಡಬೇಕು ಎಂದು ಬೆಳಗಾವಿಯಲ್ಲಿ ರೈತರು ಪ್ರತಿಭಟನೆ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರ ಅವರ ಮನವಿಗೆ ಸ್ಪಂದಿಸಬೇಕು. ಸಿಎಂ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿ ದ್ದಾರೆ. ಈ ಹಿಂದಿನಿಂದಲೂ ಇದು ನಡೆಯುತ್ತಲೇ ಇದೆ. ಇನ್ನಾದರೂ ಅದನ್ನು ಬಿಟ್ಟು ರೈತರ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು.

ಸುಳ್ಳು ಸತ್ಯ ಆಗುವುದಿಲ್ಲ: ದೇಶದ ಸೇನೆಯನ್ನು ಶೇ.10ರಷ್ಟು ಜನ ನಿಭಾಯಿಸುತ್ತಿದ್ದಾರೆ ಎಂದು ಸಂಸದ ರಾಹುಲ್ ಗಾಂಧಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ರಾಹುಲ್ ಗಾಂಧಿ ಸುಳ್ಳನ್ನು ಸತ್ಯ ಮಾಡಲು ಹೋಗುತ್ತಾರೆ. ಸುಳ್ಳು ಎಷ್ಟು ಬಾರಿ ಹೇಳಿದರು ಸುಳ್ಳೇ. ಅದು ಎಂದಿಗೂ ಸತ್ಯ ಆಗುವುದಿಲ್ಲ ಎಂದರು.

ಪ್ರತಿಮೆಯ ಲೋಪ ಸರಿಪಡಿಸಲು ಕ್ರಮ ಕೈಗೊಳ್ಳಬೇಕು: ಮೈಸೂರಿನ ಸಿದ್ಧಾರ್ಥ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಷ್ಠಾಪಿಸಿರುವ ಪ್ರತಿಮೆ ಡಿ. ದೇವರಾಜ ಅರಸು ಅವರನ್ನು ಹೋಲುತ್ತಿಲ್ಲ. ಈ ಬಗ್ಗೆ ಅರಸು ಅವರ ಪುತ್ರಿ ಭಾರತಿ ಅರಸು ಅವರೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರತಿಮೆ ಅನಾವರಣಕ್ಕೂ ಮುನ್ನಾ ಸಂಬಂಧಪಟ್ಟವರು ಪರಿಶೀಲನೆ ಮಾಡಬೇಕಾಗಿತ್ತು. ಪ್ರತಿಮೆ ಲೋಕಾರ್ಪಣೆ ಬಳಿಕ ಇದು ಗಮನಕ್ಕೆ ಬಂದಿದೆ. ಹಾಗಾಗಿ ಪ್ರತಿಮೆಯಲ್ಲಿ ಆಗಿರುವ ಲೋಪವನ್ನು ಸರಿಪಡಿಸಬೇಕು. ದೇವರಾಜ ಅರಸು ಅವರು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿ ಆಗಿದ್ದವರು. ಅವರ ಪ್ರತಿಮೆಯಲ್ಲಿ ಆಗಿರುವ ತಪ್ಪನ್ನು ಕೂಡಲೇ ಸರಿಪಡಿಸಬೇಕು ಎಂದು ಒತ್ತಾಯಿಸಿದರು.

70 ಕೋಟಿ ರೂ. ಅನುದಾನ ವಾಪಸ್ಸಾಗಿದೆ: ಮೈಸೂರು ಮಹಾನಗರ ಪಾಲಿಕೆಯ ಅಭಿವೃದ್ಧಿ ಕಾರ್ಯಗಳಿಗಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದ 70 ಕೋಟಿ ರೂ. ವಾಪಸ್ಸಾಗಿದೆ. ನಗರ ಪಾಲಿಕೆಯಲ್ಲಿ ಜನಪ್ರತಿನಿಧಿಗಳ ಆಡಳಿತವಿಲ್ಲ. ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಹೀಗಾಗಿ ಅನುದಾನ ಬಳಕೆಯಾಗದೆ ವಾಪಸ್ ಹೋಗಿದೆ. ಆದ್ದರಿಂದ ಗ್ರೇಟರ್ ಮೈಸೂರು ಯೋಜನೆ ರೂಪಿಸುವಾಗ ಸ್ಥಳೀಯ ಪ್ರತಿನಿಧಿಗಳ ಸಲಹೆ–ಸೂಚನೆ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾಡಿನ ಕಳೆ ತೆರವುಗೊಳಿಸಿದರೆ ವನ್ಯಜೀವಿಗಳು ಅಲ್ಲೆ ನೆಲೆ ನಿಲ್ಲಬಹುದು

● ಸಂಸದ ಯದುವೀರ್ ಅಭಿಮತ
● ಸಫಾರಿ, ರೆಸಾರ್ಟ್‌ಗಳಿಂದ ಹುಲಿಗಳು ಹೊರ ಬರುತ್ತಿವೆ ಎಂಬುದು ನಂಬುವಂತಹದ್ದಲ್ಲ



ಸಂಗ್ರಹ ಚಿತ್ರ

ಮೈಸೂರು,ನ.5(ಎಂಟಿವೈ)– ಅರಣ್ಯ ಪ್ರದೇಶದಲ್ಲಿ ಸಫಾರಿಯಿಂದಲೇ ಹುಲಿಗಳು ಕಾಡಿನಿಂದ ಹೊರಗೆ ಬರುತ್ತಿವೆ ಎನ್ನುವುದು ಸರಿಯಲ್ಲ. ಕಾಡೊಳಗೆ ಬೆಳೆದಿರುವ ನಿರುಪಯುಕ್ತ ಕಳೆ ಗಿಡಗಳಾದ ಲಂಟಾನ ಹಾಗೂ ಸೆನ್ನಾ, ಸ್ಪೆಕ್ಟಾಬಿಲಿಸ್ ಸೇರಿದಂತೆ ವಿದೇಶಿ ತಳಿಯ ಕಳೆ ಗಿಡಗಳ ತೆರವಿಗೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರತಿಪಾದಿಸಿದ್ದಾರೆ.

ಮೈಸೂರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅರಣ್ಯ ಪ್ರದೇಶದಲ್ಲಿ ಸಫಾರಿ ಹಾಗೂ ಅಕ್ರಮ ರೆಸಾರ್ಟ್‌ಗಳಿಂದಲೇ ಹುಲಿಗಳು ಕಾಡಿಂದ ಹೊರಗೆ ಬರುತ್ತಿವೆ ಎಂಬ ಆರೋಪದಲ್ಲಿ ಯಾವುದೇ ಹುರುಳಿಲ್ಲ. ಯಾವುದೇ ಅರಣ್ಯ ಪ್ರದೇಶದ ಒಟ್ಟು ಭೂ ಪ್ರದೇಶದಲ್ಲಿ ಶೇ.10ರಷ್ಟು ಭಾಗದಲ್ಲಿ ಮಾತ್ರ ಸಫಾರಿಗೆ ಅವಕಾಶವಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಒಂದು ಸಾವಿರ ಚದರ ಕಿ.ಮಿಗೂ ಹೆಚ್ಚಿನ ವಿಸ್ತೀರ್ಣವಿದ್ದು, ಅದರಲ್ಲಿ 150 ಚ.ಕಿ.ಮಿ ಪ್ರದೇಶದಲ್ಲಿ ಮಾತ್ರ ಸಫಾರಿಗೆ ಅವಕಾಶವಿದೆ. ಮೇಲಾಗಿ ಯಾವುದೇ ಸಂಶೋಧನಾ ವರದಿಯಲ್ಲೂ ಸಫಾರಿಯಿಂದ ಹುಲಿಗಳು ಹೊರಗೆ ಬರುತ್ತವೆ ಎಂದು ಖಚಿತವಾಗಿಲ್ಲ ಎಂದರು.

ಮೊದಲಿನಿಂದಲೂ ಕಾಡಿನಿಂದ ಆನೆ, ಹುಲಿಗಳು ಹೊರ ಬರುತ್ತಿವೆ. ಇತ್ತೀಚಿನ ಕೆಲ ವರ್ಷಗಳಿಂದ ರಾಜ್ಯದ ಕಾಡುಗಳಲ್ಲಿ ಹುಲಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಆ ಕಾರಣದಿಂದಲೂ ಅವು ಹೊರಗೆ ಬರುತ್ತಿರಬಹುದು. ಅರಣ್ಯದಲ್ಲಿ ಹುಲಿಗಳ ಸಂಖ್ಯೆ ಎಷ್ಟಿದೆ ಎನ್ನುವುದನ್ನು ಖಚಿತಪಡಿಸಿಕೊಳ್ಳಬೇಕು. ಇದಕ್ಕಾಗಿ ಸಮೀಕ್ಷೆಯನ್ನು ರಾಜ್ಯ ಸರ್ಕಾರ ಆಗಿಂದಾಗ್ಗೆ ಕೈಗೊಳ್ಳಬೇಕು. ಹುಲಿಗಳು ಹೊರಗೆ ಬರುತ್ತಿರುವುದಕ್ಕೆ ಕಡಿವಾಣ ಹಾಕಲು ಶಾಶ್ವತ ಕಾರ್ಯಕ್ರಮ ರೂಪಿಸಬೇಕು. ಇದಕ್ಕಾಗಿ ಒಳ್ಳೆಯ ಯೋಜನೆ ರೂಪಿಸಬೇಕಾಗಿದೆ. ಕಾಡಂಚಿನ ಗ್ರಾಮದಲ್ಲಿ ವಾಸಿಸುವ ಜನರಿಗೆ ತೊಂದರೆಯಾಗದಂತೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಮೈಸೂರು ಜಿಲ್ಲೆ ಹಾಗೂ ಚಾಮರಾಜನಗರದ ಬಂಡೀಪುರ ಅರಣ್ಯದ ಅಂಚಿನ ಗ್ರಾಮಗಳಲ್ಲಿ ಹುಲಿಗಳ ದಾಳಿ ಹೆಚ್ಚುತ್ತಿರುವ ವಿಚಾರದಲ್ಲಿ ಅರಣ್ಯ ಇಲಾಖೆ ಸರಿಯಾದ ರೀತಿ ಯಲ್ಲಿ ಸ್ಪಂದಿಸಬೇಕು ಎಂದು ಸಲಹೆ ನೀಡಿದರು. ಅಕ್ರಮ ರೆಸಾರ್ಟ್‌ಗಳಿಂದ ಹುಲಿಗಳು ಕಾಡಿನಿಂದ ಹೊರಗೆ ಬರುತ್ತಿವೆ ಎನ್ನುವ ಆರೋಪ ಸರಿಯಲ್ಲ. ಅಕ್ರಮ ರೆಸಾರ್ಟ್‌ಗಳಿಂದ ಪರಿಸರದ ಮೇಲೆ ಹಾನಿಯಾಗುತ್ತದೆ. ಪರಿಸರ ಸಂರಕ್ಷಣೆಯ ಹಿತದೃಷ್ಟಿಯಿಂದ ಅಕ್ರಮ ರೆಸಾರ್ಟ್‌ಗಳ ಬಗ್ಗೆ ಕ್ರಮ ಕೈಗೊಳ್ಳಬೇಕು. ಆದರೆ, ಅವುಗಳಿಂದಲೇ ಹುಲಿಗಳು ಕಾಡಿಂದ ಹೊರಗೆ ಬರುತ್ತವೆ ಎನ್ನುವುದು ಸರಿಯಲ್ಲ ಎಂದರು.

ಕಳೆ ಗಿಡ ತೆರವು ಮಾಡಲೇಬೇಕು: ಅರಣ್ಯ ಪ್ರದೇಶದಲ್ಲಿ ಲಂಟಾನ, ಸೆನ್ನಾ, ಸ್ಪೆಕ್ಟಾಬಿಲಿಸ್ ಸೇರಿದಂತೆ ವಿದೇಶಿ ತಳಿಯ ಕಳೆಗಿಡಗಳು ಹೆಚ್ಚಾಗಿ ಆವರಿಸಿಕೊಂಡಿವೆ. ಈ ಕಳೆ ಗಿಡಗಳನ್ನು ಜಿಂಕೆ ಸೇರಿದಂತೆ ಯಾವುದೇ ಸಸ್ಯಹಾರಿ ಪ್ರಾಣಿಯೂ ತಿನ್ನುವುದಿಲ್ಲ. ಈ ಕಳೆ ಗಿಡ ಆವರಿಸಿರುವುದರಿಂದ ಜಿಂಕೆ, ಸಾಂಬರ್‌ನಂತಹ ಸಸ್ಯಾಹಾರಿ ಪ್ರಾಣಿಗಳು ಆಹಾರ ಹುಡುಕಿಕೊಂಡು ಕಾಡಿನಿಂದ ಹೊರ ಬರುತ್ತಿವೆ. ಹಾಗಾಗಿ ಇವುಗಳನ್ನು ಬೇಟೆಯಾಡಲು ಹುಲಿಗಳು ಕಾಡಿನಿಂದ ಹೊರ ಬರುತ್ತಿರಬಹುದು. ಆದ್ದರಿಂದ ಕಾಡಿನೊಳಗೆ ಕಳೆ ಗಿಡವನ್ನು ತೆರವು ಮಾಡಿ ಹುಲ್ಲುಗಾವಲು ಹೆಚ್ಚಿನ ಪ್ರಮಾಣದಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.


ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ...





ಮೈಸೂರು ಜಿಲ್ಲಾಡಳಿತದ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದಲ್ಲಿ 'ಮೈಸೂರು ಮಿತ್ರ' ಹಿರಿಯ ವರದಿಗಾರ ಎಂ.ಟಿ.ಯೋಗೇಶ್‌ಕುಮಾರ್, ಛಾಯಾಗ್ರಾಹಕ ಎಂ.ಎನ್.ಲಕ್ಷ್ಮೀನಾರಾಯಣ ಯಾದವ್ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರದಾನ ಮಾಡಿದರು. ಈ ವೇಳೆ ಶಾಸಕ ಕೆ.ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ನಗರ ಕಾಂಗ್ರೆಸ್ ಅಧ್ಯಕ್ಷ ಮೂರ್ತಿ, ಹಿರಿಯ ಪತ್ರಕರ್ತ ಗುರುರಾಜ್ ಇತರರಿದ್ದರು.

ಹರಿಯಾಣದಲ್ಲೂ ಮತಗಳ್ಳತನ: ರಾಹುಲ್ ಗಾಂಧಿ ಆರೋಪ



ರಾಹುಲ್ ಗಾಂಧಿ

ನವದೆಹಲಿ: ಕರ್ನಾಟಕದ ಆಳಂದ, ಮಹಾದೇವಪುರದಂತೆ ಹರಿಯಾಣದಲ್ಲಿ ಕೂಡ ಮತಗಳ್ಳತನ ನಡೆದಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಒಂದೇ ವ್ಯಕ್ತಿ ಹಲವು ಕಡೆ ಮತದಾನ ಮಾಡಿರುವ ನಿದರ್ಶನಗಳಿವೆ. ಅದರಲ್ಲೂ ಬ್ರೆಜಿಲ್ ಮಾಡೆಲ್ ಫೋಟೊ ಬಳಸಿ 10 ಬೂತ್‌ಗಳಲ್ಲಿ 22 ಹೆಸರಿನಲ್ಲಿ ಮತದಾನ ನಡೆದಿತ್ತು ಎಂದು ಹೇಳಿದ್ದಾರೆ. ಹರಿಯಾಣದಲ್ಲ 25 ಲಕ್ಷ ನಕಲಿ ಮತದಾರರಿದ್ದಾರೆ ಎಂದು ದೂರಿದ್ದಾರೆ.

ಹಲವು ರಾಜ್ಯಗಳಲ್ಲಿ ಮತ ಕಳ್ಳತನದ ದೂರುಗಳು ನಮಗೆ ಬಂದಿವೆ, ಹರಿಯಾಣದ ಎಕ್ಸಿಟ್ ಪೋಲ್‌ನಲ್ಲಿ ಕಾಂಗ್ರೆಸ್ ಗೆಲ್ಲುವ ಮುನ್ಸೂಚನೆ ನೀಡಲಾಗಿತ್ತು. ಅಂಚೆ ಮತಪತ್ರಗಳಲ್ಲಿ ಕೂಡ ಕಾಂಗ್ರೆಸ್ ಮುಂದಿತ್ತು. ಆದರೆ ಕೊನೆಯಲ್ಲಿ ಫಲಿತಾಂಶ ಮಾತ್ರ ಉಲ್ಟಾ ಆಗಿತ್ತು ಎಂದರು.

ಅಕ್ರಮಗಳ ಕರಾಳ ಮುಖ ಬಹಿರಂಗ: ದೇಶದ ಚುನಾವಣಾ ವ್ಯವಸ್ಥೆಯಲ್ಲಿ ನಡೆಯುತ್ತಿರುವ ವ್ಯವಸ್ಥಿತ ಅಕ್ರಮಗಳ ಕರಾಳ ಮುಖವನ್ನು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಮತ್ತೊಮ್ಮೆ ಬಹಿರಂಗಪಡಿಸಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬಹುತೇಕ ಚುನಾವಣಾ ಸಮೀಕ್ಷೆಗಳು ಹರಿಯಾಣದಲ್ಲಿ ಬಿಜೆಪಿ ಧೂಳೀಪಟ ವಾಗಲಿದೆ ಎಂಬ ಭವಿಷ್ಯ ನುಡಿದಿದ್ದವು. ಅಲ್ಲದೆ, ಹರಿಯಾಣ ಮತದಾರ ಈ ಬಾರಿ ಬಿಜೆಪಿ ಸರ್ಕಾರ ಕಿತ್ತೊಗೆಯಲೇಬೇಕು ಎಂಬ ದೃಢ ಸಂಕಲ್ಪ ಮಾಡಿದ್ದರೂ ಬಿಜೆಪಿ ಹೇಗೆ ಬಹುಮತ ಪಡೆದು ಸರ್ಕಾರ ರಚಿಸಿತು ಎನ್ನುವ ಅನುಮಾನಕ್ಕೆ ರಾಹುಲ್ ಗಾಂಧಿ ಉತ್ತರ ನೀಡಿದ್ದಾರೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಲ್ಲಿ ವಿಚಾರಗೋಷ್ಠಿ

ಭಾರತೀಯ ರಂಗಭೂಮಿಗೆ ಕನ್ನಡ ನಾಡಿನ ರಂಗಕರ್ಮಿಗಳಿಂದ ಮಹತ್ವದ ಕೊಡುಗೆ

ದೆಹಲಿ ಮೂಲದ ಖ್ಯಾತ ವಿಮರ್ಶಕ ರವೀಂದ್ರ ತ್ರಿಪಾಠಿ ಪ್ರಶಂಸೆ



ಮೈಸೂರಿನ ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ವಿಚಾರ ಗೋಷ್ಠಿಯಲ್ಲಿ ದೆಹಲಿ ಮೂಲದ ಖ್ಯಾತ ವಿಮರ್ಶಕ ರವೀಂದ್ರ ತ್ರಿಪಾಠಿ ಮಾತನಾಡಿದರು. ಹಿರಿಯ ರಂಗಕರ್ಮಿ ಪ್ರಸನ್ನ ಚಿತ್ರದಲ್ಲಿದ್ದಾರೆ.

ಮೈಸೂರು,ನ.5(ಪಿಎಂ)– ಭಾರತೀಯ ರಂಗಭೂಮಿ ರೂಪಿಸುವಲ್ಲಿ ಕನ್ನಡ ನಾಡಿನ ರಂಗಕರ್ಮಿಗಳ ಕೊಡುಗೆ ಪರಿಣಾಮಕಾರಿ ಹಾಗೂ ಮಹತ್ವದ್ದಾಗಿದೆ ಎಂದು ದೆಹಲಿ ಮೂಲದ ಖ್ಯಾತ ವಿಮರ್ಶಕ ರವೀಂದ್ರ ತ್ರಿಪಾಠಿ ಹೇಳಿದರು.

ಮೈಸೂರಿನ ಹಾರ್ಡ್ವಿಕ್ ಶಾಲಾ ಆವರಣದ ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಲ್ಲಿ (ಐಐಇಟಿ) ಬುಧವಾರ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ವಿಚಾರಗೋಷ್ಠಿಯಲ್ಲಿ ಕಮಲಾದೇವಿ ಚಟ್ಟೋಪಾಧ್ಯಾಯ, ಆದ್ಯ ರಂಗಾಚಾರ್ಯ, ಬಿ.ವಿ.ಕಾರಂತರು, ಎಂ.ಎಸ್.ಸತ್ಯು, ಗಿರೀಶ್ ಕಾರ್ನಾಡ್ ಮತ್ತು ಇತರರು ಭಾರತೀಯ ರಂಗಭೂಮಿಗೆ ನೀಡಿದ ಕೊಡುಗೆ ಕುರಿತು ಅವರು ಆಂಗ್ಲ ಭಾಷೆಯಲ್ಲಿ ವಿಚಾರ ಮಂಡಿಸಿದರು.

ಕರ್ನಾಟಕದವರಾದ ಕಮಲಾದೇವಿ ಚಟ್ಟೋಪಾಧ್ಯಾಯ, ರಾಷ್ಟ್ರಮಟ್ಟದಲ್ಲಿ ರಂಗಭೂಮಿಗೆ ನೀಡಿದ ಕೊಡುಗೆ ಅಪಾರ. ಅವರು 'ರಾಷ್ಟ್ರೀಯ ನಾಟಕ ಶಾಲೆ' (ಎನ್‌ಎಸ್‌ಡಿ) ವಿನ್ಯಾಸಗೊಳಿಸಿದವರು. ಜೊತೆಗೆ ಅವರೇ ಈ ಶಾಲೆಯ ಮೊದಲ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು. ಅವರು ರಂಗಕರ್ಮಿ ಆಗಿ ಭಾರತೀಯ ರಂಗಭೂಮಿಗೆ ಅಪಾರ ಸೇವೆ ನೀಡಿದ್ದರ ಜೊತೆಗೆ ಕುಶಲಕರ್ಮಿಯಾಗಿಯೂ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಪಾಕಿಸ್ತಾನದಿಂದ ಬಂದ ಸುಮಾರು 50 ಸಾವಿರ ನಿರಾಶ್ರಿತರಿಗೆ ದೆಹಲಿ ಹೊರವಲಯದಲ್ಲಿ ಫರೀದಾಬಾದ್ ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಿಸಿಕೊಡುವಲ್ಲಿ ಇವರ ಪಾತ್ರ ಪ್ರಮುಖವಾಗಿದೆ. ಇವರ ಸಾಮಾಜಿಕ ಕೊಡುಗೆಗಳಲ್ಲಿ ಇದು ಮಹತ್ವದ್ದಾಗಿದೆ. ಕರ್ನಾಟಕದ ಇಂತಹ ಒಬ್ಬ ಮಹಿಳೆ ಹಲವು ಕ್ಷೇತ್ರಗಳಿಗೆ ಕೊಡುಗೆ ನೀಡಿದ್ದು, ಅವರ ಬಗ್ಗೆ ಹೆಚ್ಚು ಬರವಣಿಗೆಗಳು ಬರುವುದು ಇಂದಿನ ಅಗತ್ಯ ಎಂದರು.

ಅಂತೆಯೇ ಗಿರೀಶ್ ಕಾರ್ನಾಡ್ ಅವರ ಬರಹಗಳು ಹಿಂದಿ ಭಾಷಾ ರಂಗಭೂಮಿಯ ಮೇಲೆ ಬಹಳಷ್ಟು ಪ್ರಭಾವ ಬೀರಿವೆ. ದೆಹಲಿ ಸೇರಿದಂತೆ ಉತ್ತರ ಭಾರತದಲ್ಲಿ ಅವರ ನಾಗಮಂಡಲ, ಹಯವದನ ನಾಟಕಗಳು ಇಂದಿಗೂ ಪ್ರದರ್ಶನವಾಗುತ್ತಿವೆ. ಅದೇ ರೀತಿ ಬಿ.ವಿ. ಕಾರಂತರು ಕನ್ನಡದ ಆಸ್ತಿಯಾಗಿದ್ದರೂ ಭಾರತೀಯ ರಂಗಭೂಮಿಯಲ್ಲಿ ತನ್ನದೇ ಛಾಪು ಮೂಡಿಸಿದ್ದಾರೆ. ರಂಗಭೂಮಿ ಸಂಗೀತದಲ್ಲಿನ ಅವರ ಪ್ರಯೋಗಗಳನ್ನು ಉತ್ತರ ಭಾರತದ ರಂಗಭೂಮಿಯೂ ಒಪ್ಪಿಕೊಂಡು ಪಾಲಿಸಲಾಗುತ್ತಿದೆ ಎಂದು ಹೇಳಿದರು.

ಪ್ರಸನ್ನ ಅವರು ಪ್ರಸ್ತುತ ಹಿಂದಿ ಹಾಗೂ ಕನ್ನಡದ ಬಾಂಧವ್ಯಕ್ಕೆ ಕೊಂಡಿಯಾಗಿದ್ದು, ಮುಂದೆ ಈ ಸ್ಥಾನ ತುಂಬುವವರು ಯಾರು ಎಂಬ ಪ್ರಶ್ನೆ ಮೂಡಿದೆ. ಕನ್ನಡದ ಸಂಸ್ಕೃತಿ ಹಾಗೂ ಸಂಗೀತ ಹಿಂದಿ ಭಾಷಾ ರಂಗಭೂಮಿಗೆ ದೊಡ್ಡ ಕೊಡುಗೆ ನೀಡಿದೆ. ಕನ್ನಡದ ಅನಂತಮೂರ್ತಿ ಅವರ ಕಥೆಗಳು, ರಂಗ ಬರಹಗಳು ಇಂದಿಗೂ ಹಿಂದಿಯಲ್ಲಿ ಪ್ರದರ್ಶನಗೊಳ್ಳುತ್ತಿರುವುದು ಇದಕ್ಕೆ ಸಾಕ್ಷಿ ಎಂದು ತಿಳಿಸಿದರು.

ಇದಕ್ಕೂ ಮುನ್ನ ಹಿರಿಯ ರಂಗಕರ್ಮಿ ಪ್ರಸನ್ನ ಮಾತನಾಡಿ, ಸಾಮಾನ್ಯವಾಗಿ ವ್ಯಕ್ತಿ, ಸಂಸ್ಕೃತಿ ಅಥವಾ ಭಾಷೆಯೇ ಆಗಲಿ. ಒಳಗು ಮತ್ತು ಹೊರಗು ಎರಡರ ನಡುವೆ ಸಮಭಾವ ಇದ್ದಾಗ ಆರೋಗ್ಯಪೂರ್ಣತೆ ಕಾಣಬಹುದು. ಆದರೆ ಇತ್ತೀಚಿನ ದಿನಗಳಲ್ಲಿ ಎಲ್ಲಾ ಭಾರತೀಯ ಭಾಷೆಗಳಿಗೆ ಹೊರಗಿನ ದಾಳಿ ಹೆಚ್ಚಾಗಿದೆ. ಇದರಿಂದ ನಾವು ಸ್ವಲ್ಪ ಜಾಸ್ತಿಯೇ ಒಳಮುಖವಾಗಿದ್ದೇವೆ. ಕೂಪ ಮಂಡೂಕಗಳೂ ಆಗಿರುವುದೂ ಉಂಟು ಎಂದು ಬೇಸರ ವ್ಯಕ್ತಪಡಿಸಿದರು.

ಕನ್ನಡದ ರಾಜ್ಯೋತ್ಸವದ ಸಂದರ್ಭದಲ್ಲಿ ಕನ್ನಡದ ಕೊಡುಗೆ ನೆನೆಯುವುದು ಮುಖ್ಯ. ಬಂಗಾಳಿ ಭಾಷೆ ನೋಡುವುದಾದರೆ, ಅವರ ಧೈರ್ಯ ಮೆಚ್ಚುವಂತದ್ದು. ಅವರು ಒಳಮುಖ ಹಾಗೂ ಹೊರಮುಖವಾಗಿಯೂ ಇದ್ದರು. ಒಳ–ಹೊರಗು ಅನ್ನು ಸಮರ್ಥವಾಗಿ ನಿರ್ವಹಿಸುತ್ತಲೇ ಬಂಗಾಳಿಗಳು ಇಡೀ ದೇಶಕ್ಕೆ ಒಂದು ಸಾಂಸ್ಕೃತಿಕ ನವೋದಯ ನೀಡಿದ ಹೆಗ್ಗಳಿಕೆ ಹೊಂದಿದ್ದಾರೆ ಎಂದರು.

ಕನ್ನಡಕ್ಕೂ ಆ ಹೆಗ್ಗಳಿಕೆ ಇದ್ದು, ಹಲವಾರು ಜನ, ಸಂಸ್ಥೆಗಳು ನಮ್ಮ ಭಾಷೆ ಮತ್ತು ಭಾರತೀಯ ರಂಗಭೂಮಿ ರೂಪಿಸುವಲ್ಲಿ ಮಹತ್ವದ ಕೊಡುಗೆ ನೀಡಿರುವುದಿದೆ. ಅದರಲ್ಲಿ ಅಗ್ರಗಣ್ಯರು ಕಮಲಾದೇವಿ ಚಟ್ಟೋಪಾಧ್ಯಾಯ. ಅವರು ಕನ್ನಡತಿ ಎಂಬುದು ಎಷ್ಟೋ ಸಾಮಾನ್ಯ ಜನರಿಗೆ ಗೊತ್ತಿಲ್ಲ. ಜೊತೆಗೆ ಅವರ ಅವಿರತ ಸೇವೆ ಬಗ್ಗೆಯೂ ಕನ್ನಡಿಗರಿಗೆ ಗೊತ್ತಿಲ್ಲ. ಅವರೊಬ್ಬ ಧೈರ್ಯಸ್ಥ ಹೆಣ್ಣು ಮಗಳು ಎಂದು ಸ್ಮರಿಸಿದರು. ಹಿರಿಯ ರಂಗಕರ್ಮಿಗಳಾದ ರಾಮೇಶ್ವರಿ ವರ್ಮ, ಹೆಚ್.ಜನಾರ್ಧನ್ (ಜನ್ನಿ) ಮತ್ತಿತರರು ಹಾಜರಿದ್ದರು.

> **ನಾವು ಧೈರ್ಯದಿಂದ ಕನ್ನಡ ಕಟ್ಟಬೇಕಿದ್ದು, ಜೊತೆ ಜೊತೆಗೆ ಭಾರತೀಯ ರಂಗಭೂಮಿಯನ್ನೂ ರೂಪಿಸಬೇಕಿದೆ. ಭಾರತೀಯ ರಂಗಭೂಮಿ ಮತ್ತು ರಾಜ್ಯ ಭಾಷೆಗಳ ನಡುವೆ ಒಡಕು ತರುತ್ತಿರುವ ಸಂದರ್ಭದಲ್ಲಿ ನಾವಿದ್ದು, ಕೇವಲ ಒಂದು ಭಾಷೆ, ಒಂದು ಸಂಸ್ಕೃತಿ ಮಾತ್ರ ಇಡೀ ದೇಶ ಎನ್ನುವ ವಿತಂಡವಾದ ಹರಡಲಾಗುತ್ತಿದೆ. ಈ ಸಂದರ್ಭದಲ್ಲಿ ಹಲವು ಭಾಷೆಗಳು ಮತ್ತು ಸಂಸ್ಕೃತಿಗಳು ರೂಪಿಸಿದ ಒಂದು ಒಕ್ಕೂಟ ಸಂಸ್ಕೃತಿಯೇ ನಮ್ಮ ದೇಶ ಎನ್ನುವ ಸಂದೇಶವನ್ನು ಸ್ಪಷ್ಟವಾಗಿ ತಲುಪಿಸಬೇಕಿದೆ.**
> -ಪ್ರಸನ್ನ, ಹಿರಿಯ ರಂಗಕರ್ಮಿ.

1ನೇ ವರ್ಷದ ಸವಿನೆನಪು



ನಾಗಮ್ಮ ಚಂದ್ರಶೇಖರ್ ಆರಾಧ್ಯ

ದುಃಖತಪ್ತರು

ಹೆಣ್ಣುಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಬಂಧು–ಮಿತ್ರರು

ಮೈಸೂರು ಮಿತ್ರ 46 ಓದುಗರ ಗಮನಕ್ಕೆ

ಮೈಸೂರು ಮಿತ್ರ

ರಾಜ್ಯದಲ್ಲಿ 2 ಸಾವಿರಕ್ಕೂ ಹೆಚ್ಚು ರೈತರ ಸರಣಿ ಆತ್ಮಹತ್ಯೆ

ಮಂಡ್ಯದಲ್ಲಿ ಸುದ್ದಿಗೋಷ್ಠಿಯಲ್ಲಿ ಪ್ರತಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ್

ಮಂಡ್ಯ, ನ.5– ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ಬಳಿಕ ರೈತರ ಸರಣಿ ಆತ್ಮಹತ್ಯೆ ನಡೆಯುತ್ತಿದೆ. ಕಳೆದ 2 ವರ್ಷದಲ್ಲಿ 2000ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವಿಧಾನ ಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಆತಂಕ ವ್ಯಕ್ತಪಡಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಮೇಲೆ ರೈತರಿಗೆ ವಿಶ್ವಾಸ ಕುಂದಿದೆ ರೈತ ಪರವಾದ ಯಾವುದೇ ಕಾರ್ಯಕ್ರಮಗಳನ್ನು ಕಾಂಗ್ರೆಸ್ ಸರ್ಕಾರ ನೀಡುತ್ತಿಲ್ಲ ಎಂದು ಟೀಕಿಸಿದರು.

ರಾಹುಲ್ ಗಾಂಧಿಯಿಂದ ಕೇಂದ್ರ ಸರ್ಕಾರದ ವಿರುದ್ಧ ಚುನಾವಣಾ ಅಕ್ರಮ ಆರೋಪಕ್ಕೆ ಪ್ರತಿಕ್ರಿಯಿಸಿ, ರಾಹುಲ್ ಗಾಂಧಿಗೆ ಇಡೀ ದೇಶದಲ್ಲಿ ಗೆಲ್ಲಲು ಯೋಗ್ಯತೆ ಇಲ್ಲ. ಕುಣಿಯಲಾರದವನು ನೆಲ ಡೊಂಕು ಎನ್ನುತ್ತಿದ್ದಾರೆ. ಎಲೆಕ್ಟ್ರಾನಿಕ್ ವೋಟಿಂಗ್ ಮೆಷಿನ್ ತಂದು ಈಗ ಇವರೇ ಸರಿಯಿಲ್ಲ ಎನ್ನುತ್ತಿದ್ದಾರೆ. ಕರ್ನಾಟಕದಲ್ಲಿ ಓಟ್ ಚೋರಿ ಎನ್ನುತ್ತಾರೆ, ಹಾಗಾದರೆ 136 ಸೀಟ್ ಹೇಗೆ ಬಂತು? ಕಾಂಗ್ರೆಸ್‌ನವರಿಗೆ ಭ್ರಮನಿರಸನ ಆಗಿದೆ. ಬಿಹಾರ ಎಲೆಕ್ಷನ್‌ಗೆ ಕಾಂಗ್ರೆಸ್ ಸರ್ಕಾರ ಫಸ್ಟ್ ಕ್ಲಾಸ್ ಫಂಡಿಂಗ್ ಮಾಡಿದೆ ಎಂದು ದೂರಿದರು.

ತುಪ್ಪದ ಬೆಲೆ ಏರಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಸಾಲ ಮಾಡಿ ತುಪ್ಪ ತಿನ್ನು ಎನ್ನುತ್ತಾರೆ. ಆದರೆ, ಕಾಂಗ್ರೆಸ್ ಸರ್ಕಾರ ಸಾಲ ಮಾಡಿಯೂ ತುಪ್ಪ ತಿನ್ನದ ಹಾಗೇ ಮಾಡಿದೆ. ಕೇಂದ್ರ ಸರ್ಕಾರ ಜಿಎಸ್‌ಟಿ ಕಡಿಮೆ ಮಾಡಿ ಬೆಲೆ ಇಳಿಸುತ್ತಿದೆ. ರಾಜ್ಯ ಸರ್ಕಾರ ಲೂಟಿ ಹೊಡೆಯಲು ಬೆಲೆ ಏರಿಕೆ ಮಾಡುತ್ತಿದೆ. ಕಳೆದ ತಿಂಗಳಷ್ಟೇ ಹಾಲು, ತುಪ್ಪದ ಬೆಲೆ ಕಡಿಮೆ ಮಾಡಿ ಈಗ ಧಿಡೀರ್ ಏರಿಕೆ ಮಾಡಿದೆ. ಕಳೆದ ಎರಡೂವರೆ ವರ್ಷದಲ್ಲಿ ಕರ್ನಾಟಕವವನ್ನು ಅಧೋಗತಿಗೆ ತಳ್ಳಿದೆ. ನವೆಂಬರ್ ಕ್ರಾಂತಿ ಪಕ್ಕಾ, ಸಿದ್ದರಾಮಯ್ಯ ಮನೆಗೆ ಹೋಗುವುದು ಪಕ್ಕಾ ಸಿಎಂ ಖುರ್ಚಿ ಫೈಟ್‌ನಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತವಾಗುವಂತೆ ಮಾಡಿದೆ. ನವೆಂಬರ್ ಕ್ರಾಂತಿ, ಕಾಂಗ್ರೆಸ್ ವಾಂತಿ ಪಕ್ಕಾ ಎಂದು ಛೇಡಿಸಿದರು.

ರೈತರ ಸಾವಿಗೆ ಕಾಂಗ್ರೆಸ್ ಸರ್ಕಾರ ಕಾರಣ: ಕೆಆರ್.ಪೇಟೆ ತಾಲೂಕಿನ ಮೂಡನ ಹಳ್ಳಿಯ ರೈತ ಮಂಜೇಗೌಡ ಸಾವಿಗೆ ನೇರ ಕಾರಣ ಕಾಂಗ್ರೆಸ್ ಸರ್ಕಾರ. ಇನ್ನೆಷ್ಟು ಸಾವು ನೋಡಲು ಅಧಿಕಾರದಲ್ಲಿ ಕುಳಿತಿರುತ್ತೀರಾ? ರೈತ ಆತ್ಮಹತ್ಯೆ ಬಹಳ ದುಃಖಕರ ಹಾಗೂ ನೋವಿನ ಸಂಗತಿ ಎಂದು ಆರೋಪಿಸಿದರು.

ರೈತ 11 ಲಕ್ಷ ರೂ. ಸಾಲ ಮಾಡಿದ್ದರು. ಮನೆಯಲ್ಲಿದ್ದ ಎಲ್ಲ ಚಿನ್ನಾಭರಣವನ್ನು 4.5 ಲಕ್ಷ ರೂ.ಗೆ ಅಡವಿಟ್ಟಿದ್ದರು. ಬಗರ್ ಹುಕುಂ ಸಾಗುವಳಿಯಲ್ಲಿ 15 ರಿಂದ 16 ವರ್ಷದಿಂದ ಉಳುಮೆ ಮಾಡುತ್ತಿದ್ದಾರೆ. ಅರಣ್ಯ ಇಲಾಖೆಯವರು ಈಗ ತಕರಾರು ಮಾಡಿದ್ದಾರೆ. ಅರ್ಜಿ ಕೊಟ್ಟರು ಯಾವುದೇ ಸ್ಪಂದನೆ ಇಲ್ಲ. ಇದರಿಂದಾಗಿ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಾಂಗ್ರೆಸ್ ಸರ್ಕಾರಕ್ಕೆ ಮಾನ ಮರ್ಯಾದೆ ಇಲ್ಲ. ಕಬ್ಬು ಬೆಳೆಗಾರರು ಪ್ರತಿಭಟನೆ ಮಾಡುತ್ತಿದ್ದರೂ ಸರ್ಕಾರ ಕ್ಯಾರೆ ಎನ್ನುತ್ತಿಲ್ಲ. ಚಾಮರಾಜನಗರದಲ್ಲಿ ಕೆರೆ ತುಂಬಿಸಿ ಎರಡು ವರ್ಷ ಕಳೆದಿದೆ. ಮಾನವ ಮೃಗಗಳ ಸಂಘರ್ಷ ನಡೆಯುತ್ತಿದೆ. ಅರಣ್ಯದಂಚಿನ ಗ್ರಾಮಗಳಿಗೆ ಸೌಲಭ್ಯ ಕೊಡಬೇಕು. ಅಧಿಕಾರಿಗಳು, ಮಂತ್ರಿಗಳು ಜನರಿಗೆ ಸ್ಪಂದಿಸುತ್ತಿಲ್ಲ. ಸಿಎಂ ಸ್ಥಾನಕ್ಕಾಗಿ ಮ್ಯೂಸಿಕಲ್ ಛೇರ್ ನಡೆಯುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಮುಖಂಡರಾದ ಇಂಡುವಾಳು ಸಚ್ಚಿದಾನಂದ, ಎಚ್.ಆರ್. ಅಶೋಕ್‌ಕುಮಾರ್, ವಸಂತ್‌ಕುಮಾರ್, ಶಿವಕುಮಾರ್ ಆರಾಧ್ಯ ಇತರರಿದ್ದರು.

ಸರ್ಕಾರಿ ಶಾಲೆ ಬಲವರ್ಧನೆಗೆ ದಾನಿಗಳು ನೀಡುವ ಕೊಡುಗೆ ಮರೆಯಬಾರದು



ಕಿಕ್ಕೇರಿ: ಸರ್ಕಾರಿ ಶಾಲೆಗಳ ಬಲವರ್ಧನೆಗೆ ನಾಗರೀಕ ಸಮಾಜದಲ್ಲಿ ವಾಸ ಮಾಡುವ ಪ್ರತಿಂಯೊಬ್ಬರೂ ಕೈಜೋಡಿಸಿ ಕೆಲಸ ಮಾಡಬೇಕು ಎಂದು ಎಳನೀರು ವರ್ತಕ ಮಾದಾಪುರ ಯೋಗೇಶ್ ತಿಳಿಸಿದರು.

ಹೋಬಳಿಯ ಮಾದಾಪುರ ಗ್ರಾಪಂ. ವ್ಯಾಪ್ತಿಯ ಸುತ್ತಮುತ್ತಲ ಸರ್ಕಾರಿ ಶಾಲೆಯ 500ಕ್ಕೂ ಹೆಚ್ಚು ಮಕ್ಕಳಿಗೆ ಬೆಂಗಳೂರಿನ ಹೊಸಕೋಟೆಯ ಸಮಾಜಸೇವಕ, ಉದ್ಯಮಿ ಪುಷ್ಪಾ ಜಿ. ನಾಗರಾಜು ಕೊಡುಗೆಯಾಗಿ ನೀಡಿದ 5ಲಕ್ಷ ರೂ.ಗಳಷ್ಟು ಮೌಲ್ಯದ ಶಾಲಾ ಬ್ಯಾಗ್, ನೋಟ್ ಪುಸ್ತಕಗಳು, ಶಾಲಾ ಪರಿಕರಗಳನ್ನು ಒಳಗೊಂಡಿರುವ ಪ್ರತಿ ವಿದ್ಯಾರ್ಥಿಗೆ 1 ಸಾವಿರ ರೂ. ಮೌಲ್ಯದ ಪಠ್ಯ ಸಾಮಗ್ರಿ ವಿತರಿಸಿ ಮಾತನಾಡುತ್ತಾ ಸ್ವಾರ್ಥವೇ ತುಂಬಿರುವ ಇಂದಿನ ಸಮಾಜದಲ್ಲಿ ಉಳ್ಳವರು ಹಾಗೂ ಶ್ರೀಮಂತರು ಸಮಾಜಮುಖಿಯಾಗಿ ಆಲೋಚಿಸಿ ಭವಿಷ್ಯದ ಮಕ್ಕಳಿಗೆ ಸಹಾಯ ಮಾಡಬೇಕಿದೆ ಎಂದರು.

ಸಮಾಜ ಸೇವಕ ಎಳನೀರು ವರ್ತಕ ಯೋಗೇಶ್ ಹಾಗೂ ಮಾನಸ ಯೋಗೇಶ್ ಅವರನ್ನು ಗೌರವಿಸಲಾಯಿತು.

ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ರಾಮಸಮುದ್ರದಲ್ಲಿ ಜೀರ್ಣೋದ್ಧಾರಗೊಂಡ ವೀರಭದ್ರೇಶ್ವರ ದೇವಸ್ಥಾನ ಉದ್ಘಾಟನೆ



ಸಮಾರಂಭದಲ್ಲಿ ಮಾತನಾಡುತ್ತಿರುವ ಶಾಸಕ ಹೆಚ್.ಟಿ.ಮಂಜು.

ಕೆ.ಆರ್.ಪೇಟೆ, ನ.5– ದೇವಾಲಯಗಳು ನಮ್ಮ ಸಂಸ್ಕೃತಿ ಪರಂಪರೆಯ ಪ್ರತಿಬಿಂಬಗಳಾಗಿವೆ. ಶಾಲೆಗಳು ಜ್ಞಾನವನ್ನು ನೀಡುವ ಶ್ರೇಷ್ಠ ತಾಣಗಳಾಗಿವೆ. ಹಾಗಾಗಿ ದೇವಾಲಯಗಳನ್ನು ಹಾಗೂ ಶಾಲೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಆಚಾರ–ವಿಚಾರಗಳನ್ನು ಸಂರಕ್ಷಣೆ ಮಾಡುವ ಕೆಲಸವನ್ನು ಮಾಡಬೇಕಾಗಿದೆ ಎಂದು ಬೆಂಗಳೂರು ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ.ನಿಶ್ಚಲಾನಂದ ನಾಥಸ್ವಾಮೀಜಿ ಹೇಳಿದರು.

ತಾಲೂಕಿನ ಶೀಳನೆರೆ ಹೋಬಳಿಯ ರಾಯಸಮುದ್ರ ಗ್ರಾಮದಲ್ಲಿ ಜೀರ್ಣೋದ್ಧಾರ ಮಾಡಿರುವ ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಾಲಯದ ಲೋಕಾರ್ಪಣೆ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಮನುಷ್ಯ ಎಷ್ಟೇ ಕೋಟಿ ಸಂಪಾದನೆ ಮಾಡಿದರೂ ಸಹ ನೆಮ್ಮದಿಗಾಗಿ ಹಂಬಲಿಸುತ್ತಾನೆ. ನಿಮ್ಮದಿಗಾಗಿ ಗುಡಿ ಗೋಪುರಗಳು ಹಾಗೂ ದೇವಾಲಯಗಳಿಗೆ ಭೇಟಿ ನೀಡಿ ದೇವರನ್ನು ಭಕ್ತಿಯಿಂದ ಪ್ರಾರ್ಥನೆ ಸಲ್ಲಿಸಿದರೆ ಮನಸ್ಸಿಗೆ ಶಾಂತಿ ನೆಮ್ಮದಿ ದೊರೆಯುತ್ತದೆ. ಹಾಗಾಗಿ ನಮ್ಮ ದೇಶದಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸುವ ಮೂಲಕ ನೆಮ್ಮದಿಯನ್ನು ಪಡೆದುಕೊಳ್ಳುತ್ತಿದ್ದಾರೆ. ಕೆಲವರು ದೇವರೆಲ್ಲಿದ್ದಾನೆ ಎಂದು ಪ್ರಶ್ನಿಸುತ್ತಾರೆ. ಆದರೆ ಅವರು ತಮ್ಮ ಸಂಕಷ್ಟದ ಸಮಯದಲ್ಲಿ, ಮನಸ್ಸಿನ ನೆಮ್ಮದಿಗಾಗಿ ದೇವರ ಮೊರೆ ಹೋಗಿದ್ದನ್ನು ಕಂಡಿದ್ದೇವೆ.

ಶಾಸಕರಾದ ಹೆಚ್.ಟಿ.ಮಂಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ರಾಯಸಮುದ್ರ ಗ್ರಾಮವು ಈಶಾನ್ಯ ದಿಕ್ಕಿನಲ್ಲಿರುವ ಕಾರಣ ಈ ಗ್ರಾಮವು ಹೆಚ್ಚು ಧಾರ್ಮಿಕ ಕಾರ್ಯಕ್ರಮಗಳು ನಡೆದು ಗ್ರಾಮವು ಅಭಿವೃದ್ಧಿಯಾದರೆ ಇಡೀ ತಾಲೂಕು ಅಭಿವೃದ್ಧಿ ಸಾಧ್ಯವಾಗುತ್ತದೆ. ನಾನು ಜಿಲ್ಲಾ ಪಂಚಾಯತ್ ಚುನಾವಣೆ, ಮನ್‌ಮುಲ್ ಚುನಾವಣೆ, ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದಾಗ ಹೆಚ್ಚು ಜನ ಬೆಂಬಲ ನೀಡುತ್ತಾ ಬಂದಿರುವ ಕಾರಣ ನನಗೆ ಹೆಚ್ಚಿನ ರಾಜಕೀಯ ಶಕ್ತಿ ರಾಯಸಮುದ್ರ ಗ್ರಾಮದಿಂದ ದೊರೆಕಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಕೆ.ಸಿ.ನಾರಾಯಣಗೌಡ, ಮನ್‌ಮುಲ್ ನಿರ್ದೇಶಕರಾದ ಡಾಲು ರವಿ, ಎಂ.ಬಿ. ಹರೀಶ್, ನಿವೃತ್ತ ಆರೋಗ್ಯಾಧಿಕಾರಿ ಡಾ.ವೆಂಕಟೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕಾವ್ಯ ಚಂದ್ರು, ಮಾಜಿ ಅಧ್ಯಕ್ಷರಾದ ಆರ್.ಕೆ.ಯೋಗೇಶ್, ದೇವಾಲಯದ ಜೀರ್ಣೋದ್ದಾರ ಟ್ರಸ್ಟ್ ಅಧ್ಯಕ್ಷ ಡಾ. ವೆಂಕಟೇಶ್, ಉಪಾಧ್ಯಕ್ಷ ಆರ್.ಕೆ.ನಾಗರಾಜು ಸೇರಿದಂತೆ ಸಾವಿರಾರು ಮಂದಿ ಭಕ್ತಾದಿಗಳು ದೇವಾಲಯದ ಉದ್ಘಾಟನಾ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಅನ್ನ ನೀಡುವ ರೈತನನ್ನೇ ಕಾಪಾಡದ ಸರ್ಕಾರ ಇದ್ದು ಏನು ಪ್ರಯೋಜನ



ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳುತ್ತಿರುವ ನಿಖಿಲ್ ಕುಮಾರಸ್ವಾಮಿ.

ಬೆಂಗಳೂರು/ಮಂಡ್ಯ,ನ.5– ಅನ್ನ ನೀಡುವ ರೈತನನ್ನೇ ಕಾಪಾಡದ ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಇದ್ದು ಏನು ಪ್ರಯೋಜನ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ನಿನ್ನೆ ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿ, ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಬುಧವಾರ ಕೊನೆಯುಸಿರೆಳೆದ ರೈತನ ಅಂತಿಮ ದರ್ಶನ ಪಡೆದು ಹಾಗೂ ಅವರ ಕುಟುಂಬಕ್ಕೆ ಸಾಂತ್ವಾನ ಹೇಳಿದ ನಂತರ, ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಬೆಳಗಾವಿಯಲ್ಲಿ ರೈತರು ಏಳು ದಿನದಿಂದ ಹೋರಾಟ ಮಾಡ್ತಿದ್ದಾರೆ, ಸಿಎಂ, ಉಸ್ತುವಾರಿ ಸಚಿವರು ಇದರ ಬಗ್ಗೆ ಚಕಾರ ಎತ್ತಿಲ್ಲಾ. ಅನ್ನ ಕೊಡುವ ರೈತನನ್ನೇ ಕಾಪಾಡದ ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಇದ್ದು ಪ್ರಯೋಜನ ಏನು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳೇ ಸಕ್ಕರೆ ಕಾರ್ಖಾನೆ ಮಾಲೀಕರ ಲಾಬಿಗೆ ಮಣಿದು ಕಬ್ಬು ಬೆಳೆಯುವ ರೈತರನ್ನು ಬಲಿಪಶು ಮಾಡಬೇಡಿ. ಕಬ್ಬು ಬೆಳೆಗಾರರ ವಿಚಾರದಲ್ಲಿ ರಾಜಕಾರಣ ಮಾಡದೇ, ರೈತರ ಬೆನ್ನೆಲುಬಾಗಿ ನಿಲ್ಲುವ ಕೆಲಸ ಮಾಡಬೇಕು. ನಾವು ಕೂಡ ಶೀಘ್ರವಾಗಿ ಕಬ್ಬು ಬೆಳೆಗಾರರನ್ನು ಭೇಟಿಯಾಗಿ, ಅವರ ಹೋರಾಟಕ್ಕೆ ಬೆಂಬಲ ನೀಡುತ್ತೇವೆ ಎಂದು ಭರವಸೆ ನೀಡಿದರು.

ಬಿಜೆಪಿ ಜೊತೆ ಜೆಡಿಎಸ್ ವೀಲಿನ ಆಗಿದೆ ಎಂಬ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ನಮಗೆ ಸಿಕ್ಕಿದ ಬೆಂಬಲ ನೋಡಿ ಕಾಂಗ್ರೆಸ್ ನವರು ಬೆಚ್ಚಿಬಿದ್ದಿದ್ದಾರೆ. ಹಾಗಾಗಿ ಈ ರೀತಿ ಮಾತಾಡ್ತಾರೆ ಎಂದು ಕಿಡಿ ಕಾರಿದರು.

GBA ಚುನಾವಣೆಯಿಂದ ಬೆಂಗಳೂರು ನಗರದಲ್ಲಿ ಇಲ್ಲಿವರೆಗೆ 70% ಆದಾಯ ರೆವಿನ್ಯೂ ಕಲೆಕ್ಟ್ ಆಗ್ತಿದೆ. ಅದ್ರೆ ಬೆಂಗಳೂರು ನಗರಕ್ಕೆ ವಾಪಸ್ ಏನ್ ಕೊಟ್ಟಿದ್ದೀರಾ.? ರಸ್ತೆ ಗುಂಡಿಗಳಿಂದ ಹಲವಾರು ಸಾವು ನೋವಾಗಿದೆ ಆದ್ರೆ ಎಷ್ಟು ಗುಂಡಿಗಳನ್ನ ಮುಚ್ಚಿದ್ದಿರಾ.? ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರು ನಗರದಲ್ಲಿ ರಸ್ತೆ ಗುಂಡಿ ಮುಚ್ಚಲು ಕೊಟ್ಟಿದ್ದ ಗಡುವು ಮುಗಿದಿದೆ. ಬಿಬಿಎಂಪಿನೇ ಬೆಂಗಳೂರಿನಲ್ಲಿ ಹದಿನೈದು ಸಾವಿರ ಗುಂಡಿ ಇವೆ ಅಂತ ಹೇಳದೆ. ಈಗ ಟನಲ್ ಅಂತ ಕುತ್ತಿದ್ದೀರಾ? ಟನಲ್ ರೋಡ್‌ಗೆ ಎಷ್ಟು ಬಜೆಟ್ ಬೇಕು, ಅಲ್ಲಿ ಓಡಾಡೋರು ಯಾರು.? ಬರೀ ಕಾರಿನಲ್ಲಿ ಹೋಗೊಕೆ ಬರೋಕೆ 300 ಕೊಡಬೇಕು. ಸಾರ್ವಜನಿಕ ಸಾರಿಗೆಗೆ ಮನ್ನಣೆ ಕೊಡಿ ಎಂದು ವಾಗ್ದಾಳಿ ನಡೆಸಿದರು.

ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕು ಮೂಡನಹಳ್ಳಿ ಗ್ರಾಮದ ರೈತ ಮಂಜೇಗೌಡ ಅವರು ಭೂ ಸ್ವಾಧೀನವಾಗಿದ್ದ ಜಮೀನಿಗೆ ಸೂಕ್ತ ಪರಿಹಾರ ಸಿಗದಕ್ಕೆ ಮನನೊಂದು ಮಂಡ್ಯ ಜಿಲ್ಲಾಧಿಕಾರಿ ಕಛೇರಿ ಎದುರು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದರು. ಚಿಕಿತ್ಸೆ ಫಲಕಾರಿಯಾಗದೇ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಇಂದು, ಕೊನೆಯುಸಿರೆಳೆದ ಹಿನ್ನೆಲೆಯಲ್ಲಿ ನಿಖಿಲ್ ಕುಮಾರಸ್ವಾಮಿ ಅವರು ಮತ್ತು ಕೆ.ಆರ್.ಪೇಟೆ ಶಾಸಕರಾದ ಹೆಚ್.ಟಿ.ಮಂಜು ಅವರು ಆಸ್ಪತ್ರೆಗೆ ಭೇಟಿ ನೀಡಿ, ಮೃತ ರೈತನ ಅಂತಿಮ ದರ್ಶನ ಪಡೆದು, ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ನಿಧನ

ಬಿ.ಜೆ. ಸುರೇಂದ್ರ



ಶ್ರೀರಂಗಪಟ್ಟಣ: ತಾಲೂಕಿನ ಬಾಬುರಾಯನಕೊಪ್ಪಲು ನಿವಾಸಿ ಬಿ.ಜೆ. ಸುರೇಂದ್ರ (85) ಅವರು ಇಂದು ರಾತ್ರಿ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ವರ್ಗ–ಮಿತ್ರರನ್ನು ಅಗಲಿದ್ದಾರೆ. ಇವರು ಬಾಬುರಾಯನಕೊಪ್ಪಲು ಭಾರತಿ ಪೆಟ್ರೋಲ್ ಬಂಕ್, ಭಾರತಿ ಚಿತ್ರಮಂದಿರ ಹಾಗೂ ಭಾರತಿ ಕಲ್ಯಾಣ ಮಂಟಪದ ಮಾಲೀಕರೂ ಆಗಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಗುರುವಾರ) ಬೆಳಗ್ಗೆ 11.30 ಗಂಟೆಗೆ ಸ್ವಗ್ರಾಮ ಬಾಬುರಾಯನಕೊಪ್ಪಲಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೂರನೇ ಪುಟದಿಂದ

ದರ ಏರಿಕೆ ಸುಳಿವು

1 ಕೋಟಿ ಲೀಟರ್ ಹಾಲು ಉತ್ಪತ್ತಿಯಾಗುತ್ತದೆ. ಆದರೆ 50 ಲಕ್ಷ ಲೀಟರ್ ಹಾಲು ಮಾತ್ರ ಮಾರಾಟ ವಾಗುತ್ತದೆ. ಸರ್ಕಾರ ಹಾಲಿನ ಮೇಲೆ ದರ ಹೆಚ್ಚಳ ಮಾಡಿರುವ 4 ರೂಪಾಯಿಯನ್ನು ರೈತರಿಗೆ ಕೊಡಲು ಸೂಚಿಸಿದ್ದೇವೆ ಎಂದರು. 50 ಲಕ್ಷ ಲೀಟರ್ ಮಾರಾಟ ಮಾಡುವುದಕ್ಕೆ ಮಾತ್ರ ನಮಗೆ ಹಣ ಬರುತ್ತಿದೆ. ಉಳಿದ 50 ಲಕ್ಷ ಲೀಟರ್ ಹಾಲಿಗೆ ನಮ್ಮ ಕೈಯಿಂದ ರೈತರಿಗೆ ಹಣ ಕೊಡುತ್ತಿದ್ದೇವೆ. ಸದ್ಯ ಬೆಣ್ಣೆ ಮತ್ತು ತುಪ್ಪಕ್ಕೆ ಬೇಡಿಕೆ ಇದ್ದು, ಈಗ ನಾವು ತುಪ್ಪಕ್ಕೆ ನಿಗದಿ ಮಾಡಿರುವ ದರ ಮಾರುಕಟ್ಟೆಗಿಂತ ಕಡಿಮೆಯಿದೆ. ಆದರೆ ಗುಣಮಟ್ಟದಲ್ಲಿ ನಾವೇ ಮುಂಚೂಣಿಯಲ್ಲಿದ್ದೇವೆ ಎಂದು ಡಿ.ಕೆ.ಸುರೇಶ್ ಹೇಳಿದರು.

ರಾಜ್ಯದಲ್ಲಿ ಬೆಲೆ ಏರಿಕೆಯ ಸರಮಾಲೆ

- ಬಸ್ ದರ ಶೇ.15ರಷ್ಟು ಹೆಚ್ಚಳ
- ಡೀಸೆಲ್ ದರ ಪ್ರತಿ ಲೀ.ಗೆ 2 ರೂ. ಹೆಚ್ಚಳ
- ವಿದ್ಯುತ್ ದರದೊಂದಿಗೆ ಸೆಸ್ ಹೆಚ್ಚಳ
- ಆಸ್ತಿ ಮಾರ್ಗಸೂಚಿ ಮೌಲ್ಯ ಶೇ.15ರಿಂದ 30ರಷ್ಟರವರೆಗೆ ಹೆಚ್ಚಳ
- ಕೈಗಾರಿಕಾ ಬಳಕೆಗಾಗಿ ವಿದ್ಯುತ್, ನೀರು, ಇಂಧನದ ದರಗಳು ಹೆಚ್ಚಳ.
- ಖಾಸಗಿ ಪದವಿ ಕಾಲೇಜುಗಳಲ್ಲಿ ಶೇ.10ರಷ್ಟು ಶುಲ್ಕ ಏರಿಕೆ
- ರೂ. 25 ಲಕ್ಷ ಮೀರಿದ ವಿದ್ಯುತ್ ವಾಹನಗಳಿಗೆ ಶೇ.10ರಷ್ಟು ಲೈಫ್ಟೈಮ್ ಟ್ಯಾಕ್ಸ್
- ಬೆಂಗಳೂರು ಮೆಟ್ರೋ ಪ್ರಯಾಣ ದರ ಶೇ.71ರಷ್ಟು ಏರಿಕೆ
- ಹಾಲು, ಮೊಸರು, ಮಜ್ಜಿಗೆ ದರಗಳಲ್ಲಿ ರೂ.4ರಷ್ಟು ಏರಿಕೆ.
- ಒಟಿಟಿ ಸೇವೆಗಳು, ಚಿತ್ರಮಂದಿರ ಟಿಕೆಟ್‌ಗಳಿಗೆ ಶೇ.2ರಷ್ಟು ಸೆಸ್.
- ವಾಸಸ್ಥಳ ಮತ್ತು ವ್ಯಾಪಾರಿಕ ಪ್ರದೇಶಗಳಲ್ಲಿ ಪಾರ್ಕಿಂಗ್ ಶುಲ್ಕ ಏರಿಕೆ.
- ಕ್ವಾರಿ ಚಾರ್ಜ್ ಹೆಚ್ಚಳದಿಂದ ಕಟ್ಟಡ ನಿರ್ಮಾಣದ ವೆಚ್ಚ ಗಗನಕ್ಕೆ.
- ಬಾಡಿಗೆ ದಾಖಲೆಗಳ ಸ್ಟಾಂಪ್ ಡ್ಯೂಟಿ ಶೇ.200ರಿಂದ 500ರಷ್ಟು ಹೆಚ್ಚಳ.
- ಬೆಂಗಳೂರು ನಗರದಲ್ಲಿ ಆಸ್ತಿ ತೆರಿಗೆಯೊಂದಿಗೆ ತ್ಯಾಜ್ಯ ಶುಲ್ಕ ಸೇರ್ಪಡೆ.
- ಹೊಸ ವಾಹನ ನೋಂದಣಿಗೆ ಹೆಚ್ಚುವರಿ ಶುಲ್ಕ
- ಮದ್ಯದ ದರ ಹೆಚ್ಚಳ
- ಆಹಾರ ಪದಾರ್ಥಗಳ ಬೆಲೆ ಏರಿಕೆ
- ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಹೆಚ್ಚಳ
- ಆಸ್ಪತ್ರೆಗಳಲ್ಲಿ ಎಕ್ಸರೇ, ಔಟ್ ಪೇಷೆಂಟ್ ಶುಲ್ಕ ಶೇ.50ರಿಂದ 100ರಷ್ಟು ಹೆಚ್ಚಳ
- ಗಿಗ್ ವರ್ಕರ್ಸ್ ನಿಧಿಗೆ ಕಂಪನಿಗಳಿಂದ ಶೇ.5ರಷ್ಟು ಸೆಸ್.

ಸೆರೆಸಿಕ್ಕ ಮತ್ತೊಂದು ಹುಲಿ ಮರಿ

ಮೇಲೆ ತೀವ್ರವಾಗಿ ದಾಳಿ ನಡೆಸಿದ್ದ 8 ವರ್ಷದ ಹುಲಿ ಮತ್ತು ಅದರ ಒಂದೂವರೆ ವರ್ಷದ ಹೆಣ್ಣು ಮರಿಯನ್ನು ಅಕ್ಟೋಬರ್ 18ರಂದು ಕಾರ್ಯಾಚರಣೆ ಪಡೆ ಸೆರೆ ಹಿಡಿದು ಕೂರ್ಗಳ್ಳಿಯಲ್ಲಿ ಇರುವ ಪುನಶ್ಚೇತನ ಕೇಂದ್ರಕ್ಕೆ ರವಾನಿಸಿತ್ತು. ಇಂದು ಸೆರೆಯಾದ ಮರಿಯನ್ನೂ ಅಲ್ಲಿಗೆ ರವಾನಿಸಲಾಗಿದೆ. ತಕ್ಷಣ ಸಾಕಾನೆಗಳ ಮೇಲೆ ಸ್ಥಳಕ್ಕೆ ತೆರಳಿದ ವಾಸಿಂ ಮಿರ್ಜಾ ಮತ್ತು ರಂಜನ್ ಹುಲಿಮರಿಗಳ ಮೇಲೆ ಅರವಳಿಕೆ ಮದ್ದು ಪ್ರಯೋಗ ಮಾಡಿದ ವೇಳೆ ಒಂದು ಹುಲಿಮರಿ ಸ್ಥಳದಿಂದ ಪರಾರಿಯಾದರೆ, ಮತ್ತೊಂದು ಅರವಳಿಕೆ ಚುಚ್ಚುಮದ್ದಿಗೆ ಪ್ರಜ್ಞಾಹೀನವಾಗಿದೆ. ನಂತರ ಅದನ್ನು ಬಲೆಯಲ್ಲಿ ಸೆರೆ ಹಿಡಿದು ಕೊಂಡೊಯ್ಯಲಾಗಿದೆ. ಇಂದು ಬೆಳಗ್ಗೆಯಿಂದ ನಡೆದ ಕಾರ್ಯಾಚರಣೆಯಲ್ಲಿ ಅರಣ್ಯ ಇಲಾಖೆಯ ಸಿಎಫ್ ಎಸ್.ಪ್ರಭಾಕರನ್, ಎಸಿಎಫ್‌ಗಳಾದ ಡಿ.ಪರಮೇಶ್, ಸತೀಶ್, ಆರ್‌ಎಫ್‌ಓಗಳಾದ ಮುನಿರಾಜು, ವಿವೇಕ್, ಅಮೃತೇಶ್, ಎಡಿಆರ್‌ಎಫ್‌ಓ ರಂಜನ್, ಪಶುವೈದ್ಯ ವಾಸಿಂ ಮಿರ್ಜಾ ಭಾಗವಹಿಸಿದ್ದರು. ತಾಯಿ ಹುಲಿಯನ್ನು ಅ.18ರಂದು ಅರಣ್ಯ ಇಲಾಖೆ ಸೆರೆ ಹಿಡಿದ ಪರಿಣಾಮ ಬೇಟೆಯಾಡುವ ತಂತ್ರ ಗೊತ್ತಿಲ್ಲದ ಅದರ ಮರಿಗಳು ತಾಯಿಗಾಗಿ ಅಲೆದಾಡುತ್ತಾ ಅಸ್ವಸ್ಥಗೊಂಡಿವೆ ಇಂದು ಆ ಪೈಕಿ ಒಂದು ಮರಿ ಸೆರೆಯಾಗಿದ್ದು, ಅದನ್ನು ಕೂರ್ಗಳ್ಳಿ ಪ್ರಾಣಿಗಳ ಪುನಶ್ಚೇತನ ಕೇಂದ್ರದಲ್ಲಿ ಆರೈಕೆ ಮಾಡಿ ಅಲ್ಲೇ ಇರುವ ತಾಯಿಯೊಂದಿಗೆ ಸೇರಿಸ ಲಾಗುವುದು. ಅಲ್ಲದೇ ಇದೇ ಭಾಗದಲ್ಲಿ ಅಲೆದಾಡುತ್ತಿರುವ ಮತ್ತೊಂದು ಮರಿ ಸೆರೆಗೂ ನಾಳೆ ಬೆಳಗ್ಗೆಯಿಂದಲೇ ಕಾರ್ಯಾಚರಣೆ ಆರಂಭಿಸಲಾಗುವುದು ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ.

ರೈತ ಸಾವು

ಎಂದು ಹಠಕ್ಕೆ ಬಿದ್ದಿದ್ದ ಮಂಜೇಗೌಡ ತನ್ನ ಹೋರಾಟವನ್ನು ಮುಂದುವರೆಸಿಕೊಂಡು ಬಂದಿದ್ದು ಮೊನ್ನೆ ಅದು ವಿಕೋಪಕ್ಕೆ ತಿರುಗಿ ಸಾವಿನಲ್ಲಿ ಅಂತ್ಯ ಕಂಡಿದೆ. ತನ್ನ ಹೆಸರಿನಲ್ಲಿ ನಾಲ್ಕು ಎಕರೆ ಒಂದು ಗುಂಟೆ ಜಮೀನಿದ್ದರೂ ತನ್ನ ಬಳಿ ಯಾವುದೇ ಜಮೀನಿಲ್ಲ. ಸರ್ಕಾರ ವಶಪಡಿಸಿಕೊಂಡಿರುವ ಜಮೀನಿಗೆ ಬದಲಾಗಿ ಬೇರೆ ಕಡೆ ಜಮೀನು ನೀಡಬೇಕು ಮತ್ತು ಪರಿಹಾರ ಕೂಡ ಕೊಡಬೇಕು ಎಂದು ನಿರಂತರವಾಗಿ ಸರ್ಕಾರಕ್ಕೆ ಮನವಿಗಳ ಮೇಲೆ ಮನವಿ ಸಲ್ಲಿಸುತ್ತಾ ಬಂದಿದ್ದ ಎಂದು ಮೂಲಗಳು ತಿಳಿಸಿವೆ.

ಸಂತ್ರಸ್ತರ ವಶಕ್ಕೆ

ಜಮೀನಿನಲ್ಲಿ ವ್ಯವಸಾಯ ಮಾಡದಂತೆ ಅರಣ್ಯ ಇಲಾಖೆ ಸೂಚಿಸಿದ್ದರಿಂದ ಮನ ನೊಂದು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ಕೆ.ಆರ್.ಪೇಟೆ ತಾಲೂಕು ಮೂಡನಹಳ್ಳಿ ಗ್ರಾಮದ ರೈತ ಮಂಜೇಗೌಡ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು, ಸಚಿವರು ಆಸ್ಪತ್ರೆಗೆ ಭೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿದರು. ಮೃತ ರೈತನ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ಘೋಷಿಸಿದ ಸಚಿವರು, ಮುಖ್ಯಮಂತ್ರಿ ಜೊತೆ ಚರ್ಚಿಸಿ ಹೆಚ್ಚುವರಿ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು. ಮಂಜೇಗೌಡ ಕೆ.ಆರ್. ಪೇಟೆ ತಾಲೂಕಿನ ಮಲ್ಲೇನ ಹಳ್ಳಿಯ ಸರ್ವೆ ನಂಬರ್ 103ರ ಬೀಳು ಜಾಗದಲ್ಲಿ ಕಲ್ಲುಗಳನ್ನು ತೆಗೆದು ವ್ಯವಸಾಯ ಮಾಡುತ್ತಿದ್ದು, ಅವರ ಹೆಸರಿನಲ್ಲಿ ಒಟ್ಟು 4 ಎಕರೆ ಒಂದು ಗುಂಟೆಗೆ ಪಹಣಿ ಇರುವುದು ಕಂಡು ಬಂದಿದೆ. ಅಲ್ಲದೆ, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ 2014ರಲ್ಲಿ 3,50,000 ರೂ. ಬೆಳೆ ಸಾಲ ಪಡೆದಿದ್ದು, ಬಾಕಿ ಪಾವತಿಸದೇ 7,79,613 ರೂ. ಉಳಿಸಿಕೊಂಡಿದ್ದಾರೆ. ಮಂಜೇಗೌಡ ಕುಟುಂಬದಲ್ಲಿ 10 ಸದಸ್ಯರಿದ್ದು ಬೇರೆ ಯಾವುದೇ ಜಮೀನು ಇಲ್ಲ ಎಂಬ ಮನವಿಯನ್ನು ಕುಟುಂಬಸ್ಥರು ಸಲ್ಲಿಸಿದ್ದಾರೆ.

ಹುಲಿ ಮರಿಗಳ ವೀಡಿಯೋ ಚಿತ್ರೀಕರಣ; ತಾಯಿ ಹುಲಿ ನಾಪತ್ತೆ

ಸಿಐಡಿ ತನಿಖೆಗೆ ಸಚಿವ ಈಶ್ವರ ಖಂಡ್ರೆ ಆದೇಶ

ಬೆಂಗಳೂರು: ಚಾಮರಾಜನಗರ ಜಿಲ್ಲೆಯ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಪುಣಜನೂರು ವಲಯದ ಬೇಡಗುಳಿ ಅರಣ್ಯ ಪ್ರದೇಶದಲ್ಲಿ 3 ನವಜಾತ ಹುಲಿ ಮರಿಗಳೊಂದಿಗೆ ಕೆಲವರು ವಾಹನದ ಬೆಳಕಿನಲ್ಲಿ ಫೋಟೋ, ವೀಡಿಯೋ ಮಾಡಿದ್ದು, ತಾಯಿ ಹುಲಿ ಸಾವಿನ ಶಂಕೆ ಹಿನ್ನೆಲೆಯಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಸಿಐಡಿ ತನಿಖೆಗೆ ಆದೇಶ ನೀಡಿದ್ದಾರೆ.

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ 2015ರಲ್ಲಿ ಅರಣ್ಯ ಅಪರಾಧ ಪ್ರಕರಣ ದಾಖಲಾಗಿದ್ದ ಸಂಸ್ಥೆಯೊಂದರೊಂದಿಗೆ ನಂಟು ಹೊಂದಿರುವವರೂ ಸೇರಿ ಕೆಲವರು ಅರಣ್ಯದಲ್ಲಿ ವಾಹನದ ಹೆಡ್‌ಲೈಟ್ ಬೆಳಕಲ್ಲಿ ಹುಲಿಮರಿಗಳ ಚಿತ್ರೀಕರಣ ಮಾಡಿ, ಅವುಗಳ ಸ್ಪರ್ಶಿಸಿ ವನ್ಯಜೀವಿ ಕಾಯಿದೆ ಉಲ್ಲಂಘಿಸಿರುವ ಬಗ್ಗೆ ಹಾಗೂ ತಾಯಿ ಹುಲಿಯ ಇರುವಿಕೆ ಬಗ್ಗೆ ಸಂಶಯ ವ್ಯಕ್ತಪಡಿಸಿ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಸಮಗ್ರ ತನಿಖೆಗೆ ಆದೇಶ ನೀಡಿದ್ದಾರೆ. ಈ ಮಧ್ಯೆ ಅ.15ರಂದು ಬಿಆರ್‌ಟಿ ಅರಣ್ಯ ವಿಭಾಗದ ವತಿಯಿಂದ ನೀಡಿದ ಮಾಧ್ಯಮ ಪ್ರಕಟಣೆ, ಹುಲಿ ಮರಿ ಜೊತೆ ಕೆಲವರು ವಿಡಿಯೋ ಮಾಡಿರುವ ದೃಶ್ಯ ತುಣುಕು ಸಾಮಾಜಿಕ ತಾಣದಲ್ಲಿ ವೈರಲ್ ಆದ ಬಳಿಕ ನೀಡಿರುವ ಹೇಳಿಕೆಗಳಲ್ಲಿ ವ್ಯತ್ಯಾಸ ಮತ್ತು ಗೊಂದಲ ಇರುವುದರ ಜೊತೆಗೆ ತಾಯಿ ಹುಲಿ ಹತ್ಯೆ ಸಂಶಯವೂ ಮೂಡಿರುವ ಕಾರಣ, ಎನ್‌ಜಿಓಗಳಿಗೆ ಬರುವ ಹಣ ದುರುಪಯೋಗದ ಆರೋಪವೂ ಇರುವುದರಿಂದ ಈ ಪ್ರಕರಣವನ್ನು ಸಿಐಡಿ ತನಿಖೆ ವಹಿಸುವುದು ಸೂಕ್ತ ಎಂದು ಪರಿಗಣಿಸಿದ್ದಾರೆ.

ಕ್ರಾಂತಿಗೆ ಮುನ್ನುಡಿ...!

ಕ್ಯಾತ್ಸಂದ್ರದಲ್ಲಿನ ರಾಜಣ್ಣ ನಿವಾಸ ವೈಟ್‌ಹೌಸ್‌ನಲ್ಲಿ ಮಧ್ಯಾಹ್ನ 1.30ರಿಂದ 3ರ ಸಮಯದಲ್ಲಿ ಅಹಿಂದ ನಾಯಕರ ಸಭೆ ಮತ್ತು ಭೋಜನಕೂಟ ಏರ್ಪಡಿಸಲಾಗಿದೆ. ಸಿದ್ದರಾಮಯ್ಯ ಹಾಗೂ ಅವರ ಸಂಪುಟದ ಹಿರಿಯ ಸಹೋದ್ಯೋಗಿಗಳಾದ ಡಾ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ಡಾ.ಎಚ್.ಸಿ. ಮಹದೇವಪ್ಪ, ಭೈರತಿ ಸುರೇಶ್, ಜಮೀರ್ ಅಹಮದ್ ಖಾನ್ ಸೇರಿದಂತೆ 70 ಮಂದಿ ಅಹಿಂದ ಸಚಿವರು, ಶಾಸಕರಿಗೆ ರಾಜಣ್ಣ ಭೋಜನಕೂಟಕ್ಕೆ ಆಹ್ವಾನಿಸಿದ್ದಾರೆ. ರಾಜಣ್ಣ 150 ಮುಖಂಡರಿಗೆ ಭೋಜನ ಕೂಟದ ವ್ಯವಸ್ಥೆ ಮಾಡಿದ್ದು, 70ಕ್ಕೂ ಹೆಚ್ಚು ಸಚಿವರು, ಶಾಸಕರು ಭಾಗವಹಿಸಲಿದ್ದಾರೆನ್ನಲಾಗಿದೆ. ಸಿದ್ದರಾಮಯ್ಯ ಅವರನ್ನು ಬೆಂಬಲಿಸುವುದು ಹಾಗೂ ಅವರು ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಅಧಿಕಾರದಲ್ಲಿ ಇರಬೇಕು. ಅವರ ಹಿಂದೆ ನಾವಿದ್ದೇವೆ ಎಂಬುದನ್ನು ವರಿಷ್ಠರ ಗಮನಕ್ಕೆ ತರುವ ನವಂಬರ್ ಕ್ರಾಂತಿಯ ಮೊದಲ ಸಭೆ ಇದಾಗಲಿದೆ. ವೈಟ್‌ಹೌಸ್‌ನಲ್ಲಿ ಭೋಜನ ಕೂಟ ಹಾಗೂ ಸಭೆ ನಂತರ ಸಿದ್ದರಾಮಯ್ಯ ಚಿತ್ರದುರ್ಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಅವರು ತೆರಳಿದ ನಂತರ ಉಳಿದ ನಾಯಕರು ತಮ್ಮ ಗೌಪ್ಯ ಸಭೆ ಮುಂದು ವರೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಸರ್ಕಾರಿ ಸಮಾರಂಭ ಮತ್ತು ರಾಜಣ್ಣ ಅವರ ಮನೆಯಲ್ಲಿನ ಭೋಜನ ಕೂಟ ಯಶಸ್ವಿಗೊಳಿಸುವ ಉದ್ದೇಶದಿಂದ ಡಾ.ಪರಮೇಶ್ವರ್ ಸಹ ಕಳೆದ 3 ದಿನಗಳಿಂದ ತುಮಕೂರಲ್ಲೇ ಬಿಡಾರ ಹೂಡಿದ್ದಾರೆ.

ಪ್ರಧಾನಿ ಮೋದಿ ಭೇಟಿಯಾದ ವಿಶ್ವ ವಿಜೇತ ಭಾರತ ಮಹಿಳಾ ತಂಡ




ನವದೆಹಲಿ: ನವೆಂಬರ್ 2ರಂದು ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆದಿದ್ದ ಮಹಿಳಾ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು 52 ರನ್‌ಗಳಿಂದ ಮಣಿಸಿದ್ದ ಭಾರತ ವನಿತಾ ಪಡೆ, 52 ವರ್ಷಗಳ ಏಕದಿನ ಕ್ರಿಕೆಟ್ ವಿಶ್ವಕಪ್ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಚಾಂಪಿಯನ್ ಪಟ್ಟವನ್ನು ಅಲಂಕರಿಸಿತ್ತು.

ಭಾರತದ ಸಿಂಹಿಣಿಯರ ಈ ಐತಿಹಾಸಿಕ ಸಾಧನೆಗೆ ದೇಶದಾದ್ಯಂತ ಮೆಚ್ಚುಗೆ ವ್ಯಕ್ತವಾಗಿತ್ತು. ಅಭಿಮಾನಿಗಳಿಂದ ಹಿಡಿದು ಮಾಜಿ ಕ್ರಿಕೆಟಿಗರು, ಸೆಲೆಬ್ರೆಟಿಗಳು ಸೇರಿದಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೂಡ ಹರ್ಮನ್ ಪ್ರೀತ್ ಕೌರ್ ಪಡೆಯನ್ನು ಅಭಿನಂದಿಸಿದ್ದರು. ಇದೀಗ ವಿಶ್ವಕಪ್ ಮುಗಿದ ಮೂರು ದಿನಗಳ ಬಳಿಕ ಮಹಿಳಾ ಪಡೆ, ಮೋದಿ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಿದೆ.

ಮೋದಿಗೆ ಜೆರ್ಸಿ ಉಡುಗೊರೆ: ಪ್ರಧಾನಿ ಅವರನ್ನು ಭೇಟಿ ಮಾಡಲು ಇಂದು ಮುಂಬೈನಿಂದ ದೆಹಲಿಗೆ ಬಂದಿಳಿದ ಭಾರತ ವನಿತಾ ಪಡೆಗೆ ಅದ್ಧೂರಿ ಸ್ವಾಗತ ಸಿಕ್ಕಿತು. ಅಲ್ಲಿಂದ ಆಟಗಾರ್ತಿಯರೆಲ್ಲ ತಂಡದ ಹೋಟೆಲ್‌ಗೆ ತೆರಳಿ ನಂತರ ಮೋದಿ ನಿವಾಸಕ್ಕೆ ಬಸ್ ಹತ್ತಿದರು. ಮೋದಿ ನಿವಾಸದಲ್ಲಿ ಆಟಗಾರ್ತಿಯರನ್ನು ಆತ್ಮೀಯವಾಗಿ ಬರಮಾಡಿಕೊಳ್ಳಲಾಗಿದ್ದು, ಪ್ರಧಾನಿಯವರು ತಂಡದ ಎಲ್ಲಾ ಆಟಗಾರ್ತಿಯರೊಂದಿಗೆ ಸಂವಾದ ನಡೆಸಿದ್ದಾರೆ. ಇದೇ ವೇಳೆ ತಂಡದ ಎಲ್ಲಾ ಆಟಗಾರ್ತಿಯರ ಸಹಿ ಇರುವ ಜೆರ್ಸಿಯನ್ನು ಮೋದಿ ಅವರಿಗೆ ಉಡುಗೊರೆಯಾಗಿ ನೀಡಲಾಗಿದೆ.

ಆಟಗಾರ್ತಿಯರೊಂದಿಗೆ ಸಂವಾದ: ಆಟಗಾರ್ತಿಯರೊಂದಿಗೆ ಸಂವಾದ ನಡೆಸಿರುವ ಮೋದಿ ಅವರು, ಇಡೀ ತಂಡದ ಹೋರಾಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸತತ ಮೂರು ಸೋಲುಗಳು, ಸೋಶಿಯಲ್ ಮೀಡಿಯಾದಲ್ಲಿ ಟ್ರೋಲಿಂಗ್ ಇದೆಲ್ಲವನ್ನು ಮೆಟ್ಟಿ ನಿಂತು ವಿಶ್ವಕಪ್ ಎತ್ತಿಹಿಡಿದ ಮಹಿಳಾ ತಂಡದ ಸಾಧನೆಯನ್ನು ಮೋದಿ ಶ್ಲಾಘಿಸಿದರು.



ಮೈಸೂರು ಮಿತ್ರ ಗುರುವಾರ 6 ನವೆಂಬರ್ 2025

ನ.8ರಂದು ಅದ್ದೂರಿಯಾಗಿ ಕನಕ ಜಯಂತಿ ಆಚರಿಸಲು ನಿರ್ಧಾರ



538ನೇ ಭಕ್ತ ಕನಕದಾಸರ ಜಯಂತಿ ಅಂಗವಾಗಿ ಮೈಸೂರಿನ ಸಂತಶ್ರೇಷ್ಠ ಭಕ್ತ ಕನಕದಾಸರ ಜಯಂತ್ಯುತ್ಸವ ಸಮಿತಿ ಸದಸ್ಯರು ಬುಧವಾರ ಪೂರ್ವಭಾವಿ ಸಭೆ ನಡೆಸಿದರು.

ಮೈಸೂರು, ನ.5(ಎಸ್‌ಪಿಎನ್)– ಸಂತ ಶ್ರೇಷ್ಠ ಭಕ್ತ ಕನಕದಾಸರ 538ನೇ ಜಯಂತ್ಯೋತ್ಸವವನ್ನು ನ.8ರಂದು ಅದ್ದೂರಿಯಾಗಿ ಆಚರಿಸಲು ಮೈಸೂರಿನ ಸಂತಶ್ರೇಷ್ಠ ಭಕ್ತ ಕನಕದಾಸರ ಜಯಂತ್ಯುತ್ಸವ ಸಮಿತಿ ಸದಸ್ಯರು ಮೈಸೂರಿನ ಸಿದ್ದಾರ್ಥನಗರದ ಕನಕ ಸಮುದಾಯ ಭವನದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಿದರು.

ಈ ವೇಳೆ ಸಮಿತಿಯ ಅಧ್ಯಕ್ಷರೂ ಆದ ಮಾಜಿ ಶಾಸಕ ಎಂ.ಕೆ ಸೋಮಶೇಖರ್ ಮಾತನಾಡಿ, ಪ್ರತಿ ಬಾರಿಯಂತೆ ಈ ಬಾರಿಯು ಕನಕದಾಸರ ಭಾವಚಿತ್ರವನ್ನು ಬೆಳ್ಳಿ ರಥದಲ್ಲಿಟ್ಟು ಜಾನಪದ ಕಲಾತಂಡದೊಂದಿಗೆ ಮೆರವಣಿಗೆ ಮಾಡಲಾಗುವುದು. ಈ ಮೆರವಣಿಗೆಗೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಿಂದ ಅಂದು ಬೆಳಗ್ಗೆ 9 ಗಂಟೆಗೆ ಕಾಗಿನೆಲೆ ಕೆ.ಆರ್.ನಗರ ಶಾಖಾ ಮಠದ ಶ್ರೀ ಶಿವಾನಂದಪುರಿ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಚಾಲನೆ ನೀಡಲಾಗುವುದು ಎಂದರು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕರಾದ ತನ್ವೀರ್‌ಸೇಠ್, ಕೆ.ಹರೀಶ್‌ಗೌಡ, ಡಾ.ಡಿ.ತಿಮ್ಮಯ್ಯ, ಡಾ.ಯತೀಂದ್ರ ಸೇರಿದಂತೆ ಸಂಸದರು, ಸ್ಥಳೀಯ ಶಾಸಕರು, ಪರಿಷತ್ ಸದಸ್ಯರು, ನಿಗಮ ಮಂಡಳಿ ಅಧ್ಯಕ್ಷರು ಹಾಗೂ ಸಮಾಜದ ಗಣ್ಯರು ಉಪಸ್ಥಿತರಿರುತ್ತಾರೆ.

ಸಮುದಾಯದ ಇತಿಹಾಸ ಸಾರುವ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಜನಪರ ಯೋಜನೆಗಳನ್ನು ಬಿಂಬಿಸುವ ಸ್ತಬ್ಧಚಿತ್ರಗಳು, ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸುವ 40ಕ್ಕೂ ಹೆಚ್ಚು ಜಾನಪದ ಕಲಾತಂಡಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ಅಶ್ವರೋಹಿ ದಳ ಈ ಮೆರವಣಿಗೆಯಲ್ಲಿ ಸಾಗಲಿದೆ. ಈ ಮೆರವಣಿಗೆಯು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಹೊರಟು ಕೆ.ಆರ್.ವೃತ್ತ, ಮೈಸೂರು ಮಹಾನಗರ ಪಾಲಿಕೆ ಮುಂಭಾಗದ ರಸ್ತೆ, ಬಸವೇಶ್ವರ ವೃತ್ತ, ಚಾಮರಾಜ ಜೋಡಿ ರಸ್ತೆ ಶಾಂತಲ ಟಾಕೀಸ್ ವೃತ್ತ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿ ಹಾದು ದೇವರಾಜ ಅರಸು ರಸ್ತೆ ಮೂಲಕ ಸಾಗಿ, ಮೆಟ್ರೋ ಪೋಲ್ ವೃತ್ತ ಮೂಲಕ ಕಲಾಮಂದಿರ ತಲುಪಲಿದೆ. ವೇದಿಕೆ ಕಾರ್ಯಕ್ರಮ ಮಧ್ಯಾಹ್ನ 1 ಗಂಟೆಗೆ ಆರಂಭವಾಗಲಿದೆ ಎಂದು ಮಾಹಿತಿ ನೀಡಿದರು.

ಕಲಾಮಂದಿರದಲ್ಲಿ ಸಂಜೆ 5ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಉಪ್ಪುಂದ ರಾಜೇಶ್ ಪಡಿಯಾರ್ ಮತ್ತು ರಶ್ಮಿ ಚಿಕ್ಕಮಗಳೂರು ತಂಡದಿಂದ ಕನಕದಾಸ ರಚಿತ ಗೀತಾಗಾಯನ ನಡೆಯಲಿದೆ. ನಂತರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ ನೂತನ ನಿಗಮ ಮಂಡಳಿಗಳ ಅಧ್ಯಕ್ಷರಿಗೆ ಅಭಿನಂದಿಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಮಾಜಿ ಮೇಯರ್ ಟಿ.ಬಿ.ಚಿಕ್ಕಣ್ಣ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶಿವಕುಮಾರ್, ಮೈಸೂರು ನಗರ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಎಂ.ಕೆ.ಶಂಕರ್, ಸಮಿತಿಯ ಕಾರ್ಯದರ್ಶಿ ಮಹದೇವೇಗೌಡ, ಸಹ ಕಾರ್ಯದರ್ಶಿ ಸಿದ್ದನಾಗೇಂದ್ರ, ಖಜಾಂಚಿ ಎಂ.ನಾಗರಾಜು, ವಿಶ್ವನಾಥ್ (ವಿಶ್ವ), ಅಪ್ಪುಗೌಡ, ದೀಪಕ್ ಪುಟ್ಟಸ್ವಾಮಿ, ಆಶ್ರಯ ಸಮಿತಿ ಸದಸ್ಯರಾದ ಕುರುಬಾರಳ್ಳಿ ಸೋಮು, ಗೋಕುಲಂ ರಾಮು, ಪ್ರಕಾಶ್, ರವಿ, ಧನಂಜಯ, ನಾಡನಹಳ್ಳಿ ರವಿ, ಚಿನ್ನಂಬಳ್ಳಿ ಮಹದೇವು, ಬಸವರಾಜು (ಬಸಪ್ಪ), ಲೋಕೇಶ್ ಕುಮಾರ್ ಮಾದಾಪುರ, ಶಿಂಷಾ ದಿನೇಶ್, ಮೈಸೂರು ಕೋಆಪರೇಟಿವ್ ಬ್ಯಾಂಕ್ ಮಾಜಿ ಅಧ್ಯಕ್ಷರಾದ ರೇವಣ್ಣ, ಕಾಳೇಗೌಡ, ಜಯಲಕ್ಷ್ಮಿ ಭವ್ಯ, ಕಾಗಿನೆಲೆ ಮಹೇಂದ್ರ, ಕಂಸಾಳೆ ರವಿ, ರೇಖಾ ಪ್ರಿಯದರ್ಶಿನಿ, ಬಂಡಿಕೇರಿ ರಮೇಶ್, ಪುನೀತ್, ಪಾನಿಪುರಿ ಶಿವು ಮತ್ತಿತರರು ಉಪಸ್ಥಿತರಿದ್ದರು. ಈ ವೇಳೆ ಮಂಗಳವಾರ ನಿಧನರಾದ ಮಾಜಿ ಸಚಿವ, ಬಾಗಲಕೋಟೆ ಶಾಸಕ ಹೆಚ್.ವೈ ಮೇಟಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಬಿ.ವೈ.ವಿಜಯೇಂದ್ರ ಹುಟ್ಟುಹಬ್ಬ ಅಂಗವಾಗಿ ವಿಶೇಷ ಪೂಜೆ



ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಹುಟ್ಟುಹಬ್ಬದ ಅಂಗವಾಗಿ ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಮೈಸೂರು, ನ.5– ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಹುಟ್ಟುಹಬ್ಬದ ಅಂಗವಾಗಿ ಕ್ಷೇತ್ರ ಶಾಸಕ ಟಿ.ಎಸ್. ಶ್ರೀವತ್ಸ ನೇತೃತ್ವದಲ್ಲಿ ಮೈಸೂರಿನ ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಸಾರ್ವಜನಿಕರಿಗೆ ಸಿಹಿ ಹಂಚಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಟಿಎಸ್ ಶ್ರೀವತ್ಸ ಅವರು, ಮುಂದಿನ ದಿನಗಳಲ್ಲಿ ವಿಜಯೇಂದ್ರ ಅವರಿಗೆ ಬಿಜೆಪಿ ಪಕ್ಷವನ್ನು ಮತ್ತಷ್ಟು ಸಂಘಟನೆ ಮಾಡಲು ಶಕ್ತಿ, ಆರೋಗ್ಯ, ಆಯಸ್ಸು ನೀಡುವಂತೆ ವಿಘ್ನೇಶ್ವರನಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿರುವುದಾಗಿ ತಿಳಿಸಿದರು. ಈ ವೇಳೆ ಕೆಆರ್ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್‌ರಾಜೇ ಅರಸ್, ಜೈ ಶಂಕರ್, ಜಯರಾಮ್, ನಗರ ಪಾಲಿಕೆ ಮಾಜಿ ಸದಸ್ಯರಾದ ಸೌಮ್ಯ, ಉಮೇಶ್, ಬಿವಿ ಮಂಜುನಾಥ್, ಜಗದೀಶ್, ಕೇಬಲ್ ಮಹೇಶ್, ಗೋಕುಲ್ ಗೋವರ್ಧನ್, ಪ್ರದೀಪ್‌ಕುಮಾರ್, ನಿಶಾಂತ್, ವಿನಯ್ ಪಾಂಚಜನ್ಯ, ನಾಗರಾಜ್ ಬಿಲ್ಲಯ್ಯ, ಕಿಶೋರ್, ಹರೀಶ್, ನವೀನ್, ಶಿವರಾಜ್, ಕಾವೇರಿ ಮುಂತಾದವರು ಇದ್ದರು

ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ...



ಮೈಸೂರು ಜಿಲ್ಲಾಡಳಿತದಿಂದ ನಡೆದ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ರಂಗಭೂಮಿಯಲ್ಲಿ ಸೇವೆ ಸಲ್ಲಿಸಿದ ಕೆರೆಹಳ್ಳಿ ಬಿ.ದೊರೆಸ್ವಾಮಿ ಅವರಿಗೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಿದರು.

ರಾಜ್ಯಮಟ್ಟದ ಬಾಲಕಿಯರ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಚಾಲನೆ

ಕ್ರೀಡೆಯಲ್ಲಿ ಸೋಲು–ಗೆಲುವಿಗಿಂತ ಭಾಗವಹಿಸುವುದೇ ಮುಖ್ಯ: ಆರ್‌ವಿ ವಿಶ್ವವಿದ್ಯಾನಿಲಯದ ಕುಲಸಚಿವೆ ಪ್ರೊ.ಸಹನಾ ಡಿ.ಗೌಡ





ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಮೂರು ದಿನಗಳ ರಾಜ್ಯಮಟ್ಟದ ಬಾಲಕಿಯರ ಅಥ್ಲೆಟಿಕ್ ಕ್ರೀಡಾಕೂಟ–2025ಕ್ಕೆ ಬುಧವಾರ ಚಾಲನೆ ದೊರೆಯಿತು. ಮತ್ತೊಂದು ಚಿತ್ರದಲ್ಲಿ ಟ್ರ್ಯಾಕ್‌ನಲ್ಲಿ ಗುರಿಯತ್ತ ಮುನ್ನುಗ್ಗುತ್ತಿರುವ ಕ್ರೀಡಾಪಟುಗಳನ್ನು ಕಾಣಬಹುದು.

ಮೈಸೂರು,ನ.5(ಎಂಕೆ)– ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಆರ್.ವಿ.ಪದವಿಪೂರ್ವ ಕಾಲೇಜು ವತಿಯಿಂದ ಆಯೋಜಿಸಿದ್ದ ಮೂರು ದಿನಗಳ ರಾಜ್ಯಮಟ್ಟದ ಬಾಲಕಿಯರ ಅಥ್ಲೆಟಿಕ್ ಕ್ರೀಡಾಕೂಟ–2025ಕ್ಕೆ ಬುಧವಾರ ಚಾಲನೆ ದೊರೆಯಿತು.

ರಾಜ್ಯದ 31 ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ಕ್ರೀಡಾಪಟುಗಳ ಆಕರ್ಷಕ ಪಥಸಂಚಲನದ ಮೂಲಕ ಗೌರವ ವಂದನೆ ಸಲ್ಲಿಸಿ, ಅಥ್ಲೆಟಿಕ್ಸ್ ಕ್ರೀಡಾಕೂಟ ವಿದ್ಯುಕ್ತವಾಗಿ ಚಾಲನೆ ನೀಡಿದರು. ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಆರ್‌ವಿ ವಿಶ್ವವಿದ್ಯಾಲಯದ ಕುಲಸಚಿವೆ ಪ್ರೊ.ಸಹನಾ ಡಿ.ಗೌಡ, ಗೆಲುವು ಮತ್ತು ಸೋಲು ಆಟದ ಭಾಗವಾಗಿದ್ದು, ಕ್ರೀಡೆಯಲ್ಲಿ ಭಾಗವಹಿಸುವಿಕೆ ಮುಖ್ಯ. ಪ್ರತಿಯೊಬ್ಬ ಕ್ರೀಡಾಪಟು ಆತ್ಮವಿಶ್ವಾಸದೊಂದಿಗೆ ತಮ್ಮಲ್ಲಿನ ಕ್ರೀಡಾ ಕೌಶಲ್ಯತೆ ಪ್ರದರ್ಶನ ನೀಡಿದರೆ ಗೆಲುವು ದೊರೆಯುತ್ತದೆ. ಈ ನಿಟ್ಟಿನಲ್ಲಿ ಶಿಸ್ತು, ಸಂಯಮ, ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಕ್ರೀಡಾ ನಿರ್ದೇಶಕ ಡಾ.ಸಿ.ಜಿ. ರಮೇಶ್ ಮಾತನಾಡಿ, ಕ್ರೀಡಾ ಕ್ಷೇತ್ರದಲ್ಲಿ ಯುವ ಪ್ರತಿಭೆಗಳನ್ನು ತಾಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಪ್ರೋತ್ಸಾಹಿಸಲು ಕ್ರೀಡಾ ಇಲಾಖೆ ಅಗತ್ಯ ನೆರವು ನೀಡುತ್ತಿದೆ. ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕ ಶಕ್ತಿ ವೃದ್ಧಿಸಲಿದೆ. ಅಲ್ಲದೆ ಕ್ರೀಡೆಯು ನಾಯಕತ್ವದ ಗುಣವನ್ನು ಹುಟ್ಟುಹಾಕಲಿದೆ. ಹಾಗೆಯೇ ವೈದ್ಯಕೀಯ, ಇಂಜಿನಿಯರ್ ಇನ್ನಿತರೆ ಅಧ್ಯಯನಕ್ಕೆ ಶೇ.2 ರಷ್ಟು ಕ್ರೀಡಾ ಮೀಸಲಾತಿ ಇದ್ದು, ಯುವಕ–ಯುವತಿಯರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕಿ ಎಂ.ಪಿ.ನಾಗಮ್ಮ, ಕ್ರೀಡೆಯು ನಮ್ಮಲ್ಲಿ ಸವಾಲುಗಳನ್ನು ಧೈರ್ಯದಿಂದ ಎದುರಿಸಲು ಮತ್ತು ಪ್ರತಿ ಸೋಲಿನ ನಂತರವೂ ಗೆಲ್ಲಬೇಕು ಎನ್ನುವ ಉತ್ಸಾಹ ತುಂಬಲಿದೆ. ಕಠಿಣ ಪರಿಶ್ರಮದಿಂದ ಸಾಧನೆ ಸಾಧ್ಯವಾಗಲಿದೆ. ಆದ್ದರಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಅಧ್ಯಯನದ ಜೊತೆಗೆ ಕ್ರೀಡೆಯನ್ನು ಸಮತೋಲನವಾಗಿ ಕಾಯ್ದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜು ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಅಧ್ಯಕ್ಷ ಬಸವರಾಜು, ಏಕಲವ್ಯ ಪ್ರಶಸ್ತಿ ಪುರಸ್ಕೃತ ಅಂತರರಾಷ್ಟ್ರೀಯ ಕ್ರೀಡಾಪಟು ನಾಗೇಂದ್ರ ಪ್ರಸಾದ್, ಮೈಸೂರು ಜಿಲ್ಲಾ ಪಿಯು ಕಾಲೇಜು ಪ್ರಾಂಶುಪಾಲರ ಸಂಘದ ಅಧ್ಯಕ್ಷ ಹನುಮಂತರಾವ್, ನಿರ್ದೇಶಕ ಎಂ.ಎಂ ಮಹಾದೇವ್, ಮೈಸೂರು ಸರ್ಕಾರಿ ನೌಕರರ ಸಂಘದ ನಿರ್ದೇಶಕ ಎ.ಸಿ.ಮಂಜೇಗೌಡ, ಮೈಸೂರು ಜಿಲ್ಲಾ ಪಿಯು ಕಾಲೇಜು ಬೋಧಕೇತರ ಸಿಬ್ಬಂದಿ ಸಂಘದ ಅಧ್ಯಕ್ಷ ಎಂ.ರಾಜ್‌ಕುಮಾರ್, ಕ್ರೀಡಾ ಸಂಯೋಜಕ ಕೆ.ಆರ್.ಮುರಳೀಧರ್, ಆರ್.ವಿ. ಪಿಯು ಕಾಲೇಜಿನ ಪ್ರಾಂಶುಪಾಲ ಪ್ರಸಾದ್ ರೆಡ್ಡಿ ಮತ್ತಿತರರಿದ್ದರು.

ಮೊದಲ ದಿನವೇ ಮಿಂಚಿದ ಕ್ರೀಡಾಪಟುಗಳು...!

ಮೂರು ದಿನ ರಾಜ್ಯಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದ ಮೊದಲ ದಿನ ನಡೆದ **1500 ಮೀಟರ್ ಓಟದಲ್ಲಿ** ದಕ್ಷಿಣ ಕನ್ನಡ ಜಿಲ್ಲೆಯ ನಾಗಿನಿ ಪ್ರಥಮ, ಚರಿಷ್ಮಾ ದ್ವಿತೀಯ ಹಾಗೂ ಬೆಳಗಾವಿಯ ಅಕ್ಷರ ಮಾಜುಕರ ತೃತೀಯ ಸ್ಥಾನ ಪಡೆದರು. ಹಾಗೆಯೇ **ಶಾಟ್‌ಪುಟ್‌ನಲ್ಲಿ** ಬೆಂಗಳೂರಿನ ಎಂ.ರೆಡ್ಡಿ ಸಂಜನಾ ಪ್ರಥಮ, ದಕ್ಷಿಣ ಕನ್ನಡದ ಶ್ರೀಮಯಿ ಕುಲಕರ್ಣಿ ದ್ವಿತೀಯ ಹಾಗೂ ಉಡುಪಿಯ ಅಕ್ಷತಾ ಶೆಟ್ಟಿ ತೃತೀಯ ಸ್ಥಾನ ಗೆದ್ದರೆ, 100 ಮೀಟರ್ ಹರ್ಡಲ್ಸ್‌ನಲ್ಲಿ ದಕ್ಷಿಣ ಕನ್ನಡದ ಸಾಕ್ಷಿ ಕ್ರಿಸ್ಟಿನಾ ಪ್ರಥಮ, ವಿಜಯಪುರದ ರಮ್ಯಾಕದಂ ದ್ವಿತೀಯ ಹಾಗೂ ಬೆಂಗಳೂರಿನ ಪಿ.ಹರ್ಷಿತಾ ತೃತೀಯ ಸ್ಥಾನ ಪಡೆದುಕೊಂಡರು.

ಇಂಗ್ಲಿಷ್ ಕಲಿಕಾ ತರಬೇತಿ ಶಿಬಿರ ಉದ್ಘಾಟನೆ...



ಮೈಸೂರಿನ ಸಮಾನತೆ ಸ್ವಾಭಿಮಾನ ಸ್ವಾವಲಂಬನೆ ಪ್ರತಿಷ್ಠಾನ, ಸಮಾನತೆ ಪ್ರಕಾಶನ ಹಾಗೂ ವಿ.ಶ್ರೀನಿವಾಸ ಪ್ರಸಾದ್ ಅಭಿಮಾನಿ ಬಳಗದ ವತಿಯಿಂದ ಕೇಂದ್ರದ ಮಾಜಿ ಸಚಿವ ದಿವಂಗತ ವಿ.ಶ್ರೀನಿವಾಸ ಪ್ರಸಾದ್ ಅವರು ಓದಿದ ಅಶೋಕಪುರಂನ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಎರಡು ತಿಂಗಳ ಇಂಗ್ಲಿಷ್ ಕಲಿಕಾ ತರಬೇತಿ ಶಿಬಿರವನ್ನು ಉದ್ಘಾಟಿಸಲಾಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಹಿರಿಯ ಮುಖಂಡರಾದ ವಿ.ರಾಮಸ್ವಾಮಿ, ಮಾಜಿ ಮೇಯರ್ ಪುರುಷೋತ್ತಮ್, ಪ್ರೊ.ನೀಲಗಿರಿ ತಳವಾರ, ಪ್ರೊ. ಜೆ.ಸೋಮಶೇಖರ್, ಪ್ರೊ.ನರೇಂದ್ರಕುಮಾರ್, ಪ್ರಕಾಶಕ ಭರತ್ ರಾಮಸ್ವಾಮಿ, ಪ್ರಸಾದ್ ಅಭಿಮಾನಿ ಬಳಗದ ಪ್ರಧಾನ ಕಾರ್ಯದರ್ಶಿ ಡಿ.ವೆಂಕಟರಾಜು, ಮುಡಾ ಮಾಜಿ ಸದಸ್ಯ ಶಿವಕುಮಾರ್, ವಿಶ್ವೇಶ್ವರಯ್ಯ, ಬಿಇಓ ಕೃಷ್ಣ, ಡಾ. ಲೋಹಿತ್ ರಾಮಸ್ವಾಮಿ, ಡಾ.ಚಾರ್ಲ್ಸ್ ಜೋಸೆಫ್, ಆದಿಕರ್ನಾಟಕ ಮಹಾಸಂಸ್ಥೆಯ ಅಧ್ಯಕ್ಷ ಸುನಿಲ್, ಕೆಪಿಸಿಸಿ ಸದಸ್ಯ ಎನ್.ಭಾಸ್ಕರ್, ಮುಖಂಡರಾದ ಆರ್.ಸಿ.ಮಹೇಶ್, ನಾಗರಾಜ್ ಬಿಲ್ಲಯ್ಯ, ವಕೀಲರಾದ ಕಾಂತರಾಜ್, ತಿಮ್ಮಯ್ಯ, ಪ್ರೇಮ್, ಪುನೀತ್, ಶಿವಸ್ವಾಮಿ, ಸುರೇಶ್ ಮತ್ತು ಶಾಲೆಯ ಸಿಬ್ಬಂದಿ ವರ್ಗ ಹಾಜರಿದ್ದರು

ವಿದ್ಯಾರ್ಥಿವೇತನ ಮೇಳ

ಮೈಸೂರು,ನ.5– 2025–26ನೇ ಸಾಲಿನಲ್ಲಿ 1ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕ್ಲಸ್ಟರ್ ಮಟ್ಟದ ವಿದ್ಯಾರ್ಥಿವೇತನ ಮೇಳವನ್ನು ಆಯೋಜಿಸಲಾಗುತ್ತಿದೆ. ಸದರಿ ಮೇಳದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ ಹಾಜರಿದ್ದು, ಈವರೆಗೆ ಅರ್ಜಿ ಸಲ್ಲಿಸದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಹಾಗೂ ಈಗಾಗಲೇ ಅರ್ಜಿ ಸಲ್ಲಿಸಿರುವ 9 ಮತ್ತು 10ನೇ ತರಗತಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಪ್ರಕ್ರಿಯೆಗೆ ಒಳಪಡಿಸಲಾಗುತ್ತದೆ. ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸದರಿ ಮೇಳದಲ್ಲಿ ಭಾಗವಹಿಸಿ ವಿದ್ಯಾರ್ಥಿವೇತನದ ಪ್ರಯೋಜನ ಪಡೆದುಕೊಳ್ಳಬಹುದು. ಮಾಹಿತಿಗೆ ಸಹಾಯಕ ನಿರ್ದೇಶಕರು ಗ್ರೇಡ್–1ರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಡಾ.ಬಾಬು ಜಗಜೀವನರಾಂ ಭವನ ಕಟ್ಟಡ, ನಾರಾಯಣಸ್ವಾಮಿ ಬ್ಲಾಕ್, ಪಡುವಾರಹಳ್ಳಿ, ಮೈಸೂರು, ದೂ.ಸಂ.2520910 ಸಂಪರ್ಕಿಸಲು ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್–1 ತಿಳಿಸಿದ್ದಾರೆ.

ಶಾಸ್ತ್ರೀಯ ಸಂಗೀತದ ಉಳಿವು ಬೆಳವಣಿಗೆಗೆ ಸರ್ಕಾರದ ಪ್ರೋತ್ಸಾಹ ಅಗತ್ಯ

ಹಿರಿಯ, ಕಿರಿಯ ವಿದ್ವಾಂಸರ ಸಮ್ಮೇಳನದಲ್ಲಿ ಪ್ರತಿಪಾದನೆ



ಮೈಸೂರಿನ ಕುವೆಂಪುನಗರದಲ್ಲಿರುವ ಗಾನಭಾರತಿ ರಮಾಗೋವಿಂದ ಕಲಾ ವೇದಿಕೆಯಲ್ಲಿ ಆಯೋಜಿಸಿರುವ 54ನೇ ಹಿರಿಯ ಸಂಗೀತ ವಿದ್ವಾಂಸರ ಹಾಗೂ 36ನೇ ಕಿರಿಯ ಯುವ ಸಂಗೀತ ವಿದ್ವಾಂಸರ ರಾಜ್ಯ ಸಂಗೀತ ಸಮ್ಮೇಳನವನ್ನು ಹಿರಿಯ ಸಾಹಿತಿ ಕಬ್ಬಿನಾಲೆ ವಸಂತ ಭಾರದ್ವಾಜ್ ಉದ್ಘಾಟಿಸಿದರು.

ಮೈಸೂರು,ನ.5(ಜಿಎ)–ಶಾಸ್ತ್ರೀಯ ಸಂಗೀತದ ಭವ್ಯ ಪರಂಪರೆಯ ಉಳಿವು, ಬೆಳವಣಿಗೆಗೆ ಸರ್ಕಾರದ ಪ್ರೋತ್ಸಾಹ ಅಗತ್ಯವಿದೆ ಎಂದು ವಿದ್ವಾಂಸ ಪ್ರೊ.ಸಿ.ಎ. ಶ್ರೀಧರ ಅಭಿಪ್ರಾಯಪಟ್ಟರು.

ಕರ್ನಾಟಕ ಗಾನಕಲಾ ಪರಿಷತ್ತು ಮತ್ತು ಗಾನಭಾರತಿ ವತಿಯಿಂದ ಮೈಸೂರಿನ ಕುವೆಂಪುನಗರದಲ್ಲಿರುವ ಗಾನಭಾರತಿ ರಮಾಗೋವಿಂದ ಕಲಾ ವೇದಿಕೆಯಲ್ಲಿ ಆಯೋಜಿಸಿರುವ 54ನೇ ಹಿರಿಯ ಸಂಗೀತ ವಿದ್ವಾಂಸರ ಹಾಗೂ 36ನೇ ಕಿರಿಯ ಯುವ ಸಂಗೀತ ವಿದ್ವಾಂಸರ ರಾಜ್ಯ ಸಂಗೀತ ಸಮ್ಮೇಳನದಲ್ಲಿ ಹಿರಿಯ ಸಂಗೀತ ವಿದ್ವಾಂಸರ ಸಮ್ಮೇಳನಾಧ್ಯಕ್ಷರಾಗಿ ಅವರು ಮಾತನಾಡಿದರು.

ಧ್ವನಿ, ಶಾರೀರ ಸಂಸ್ಕರಣವನ್ನು ಯುವ ಸಂಗೀತಗಾರರು ಕಾಪಾಡಿಕೊಳ್ಳಬೇಕು. ಸಂಗೀತ ವಾದ್ಯಗಳಲ್ಲಿ ತಂತ್ರಜ್ಞಾನದ ನಾವಿನ್ಯತೆಯು ಹೊಕ್ಕಿದೆ. ಎಲೆಕ್ಟ್ರಾನಿಕ್, ಫೈಬರ್ ವಾದ್ಯಗಳು ಬಂದಿವೆ. ಸಾಂಪ್ರದಾಯಿಕ ವಾದ್ಯ ಉಳಿಸಿಕೊಂಡು ಹೋಗುವುದು ಮುಖ್ಯ. ಪ್ರಸಿದ್ಧಿಗೆ ಬಾರದ ರಾಗಗಳಲ್ಲಿ ಯುವ ಸಮುದಾಯವು ಪ್ರಯೋಗ ನಡೆಸಬೇಕು. ಪರಂಪರೆಯನ್ನು ಉಳಿಸಬೇಕು' ಎಂದು ಸಲಹೆ ನೀಡಿದರು.

ಕರ್ನಾಟಕ ಸಂಗೀತವು ಸಂಕರಗೊಳ್ಳದೇ ಮೂಲಶಾಸ್ತ್ರೀಯ ಚೌಕಟ್ಟನ್ನು ಉಳಿಸಿಕೊಂಡಿದ್ದು, ಕಲೆಯಲ್ಲದೇ ವಿಜ್ಞಾನವೂ ಆಗಿದೆ. ಸಂಗೀತ ಪ್ರಯೋಗಗಳ ಬಗ್ಗೆ ಹೆಚ್ಚು ಸಂಶೋಧನೆಗಳು ನಡೆಯಬೇಕಿದೆ. ಉತ್ತರಾದಿ ಸಂಗೀತವು ಕಸಿ ಕಟ್ಟಿದ್ದಾಗಿದ್ದು, ಪರ್ಷಿಯನ್ ಸಂಸ್ಕೃತಿಯೊಂದಿಗೆ ಮೇಳೈಸಿದೆ. ಆದರೆ, ಕರ್ನಾಟಕ ಸಂಗೀತವು ಸಾಮವೇದದಿಂದಲೂ ಮೂಲದಾಟಿಯನ್ನು ಜತನದಿಂದ ಕಾಪಾಡಿಕೊಂಡಿದೆ. ಜಾನಪದ ಸಂಗೀತ, ವಾದ್ಯಗಳಿಂದ ಪ್ರಭಾವಿತಗೊಂಡಿದ್ದಲ್ಲದೇ ಹಿಂದೂಸ್ತಾನಿ ಸಂಗೀತದೊಂದಿಗೆ ಕೊಂಡುಕೊಳ್ಳುವಿಕೆಯನ್ನು ಮಾಡಿದೆ ಎಂದು ತಿಳಿಸಿದರು.

ಚಾಲುಕ್ಯ ಚಕ್ರವರ್ತಿ ಸೋಮೇಶ್ವರ, ವಿಜಯನಗರದ ವಿದ್ಯಾರಣ್ಯರು, ಪುರಂದರದಾಸರು, 'ಬತ್ತೀಸ' ರಾಗಗಳನ್ನು ಉಲ್ಲೇಖಿಸಿದ ಬಸವಾದಿ ಶರಣರು, ಕೀರ್ತನಕಾರರು, ನಿಜಗುಣ ಶಿವಯೋಗಿ, ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು ನಡೆಸಿದ ಪ್ರಯೋಗಗಳು ಕರ್ನಾಟಕ ಸಂಗೀತವನ್ನು ಶ್ರೀಮಂತಗೊಳಿಸಿವೆ. ಅದರಂತೆ ಮುತ್ತುಸ್ವಾಮಿ ದೀಕ್ಷಿತರು, ತ್ಯಾಗರಾಜರು ಸೇರಿದಂತೆ ವಾಗ್ಗೇಯಕಾರರು ದಕ್ಷಿಣಾದಿ ಸಂಗೀತಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ' ಎಂದರು.

ಪರಿಷತ್ತಿನ ಕಾರ್ಯಕಾರಿ ಸಮಿತಿ ಅಧ್ಯಕ್ಷ ವಿದ್ವಾನ್ ಆರ್.ಕೆ.ಪದ್ಮನಾಭ ಪ್ರಾಸ್ತಾವಿಕವಾಗಿ ಮಾತನಾಡಿ, ಮೊದಲು ಕರ್ನಾಟಕ ಸಂಗೀತ ವಿದ್ವಾಂಸರಿಗೆ ಹೊರ ರಾಜ್ಯ, ದೇಶಗಳಲ್ಲಿ ಆದ್ಯತೆ ಕಡಿಮೆ ಇತ್ತು. ಆದರೆ ಇಂದು ಅದು ಬದಲಾಗಿ ನಮಗೆ ಮೊದಲ ಆದ್ಯತೆ ನೀಡುತ್ತಿದ್ದಾರೆ. ಅದರ ಹಿಂದೆ ಸಾಕಷ್ಟು ವಿದ್ವಾಂಸರ ಶ್ರಮ ಅಡಗಿದೆ. ಈ ನಡುವೆ ರಾಜ್ಯೋತ್ಸವ ಪ್ರಶಸ್ತಿ ಪಟ್ಟಿಯಲ್ಲಿ ಒಬ್ಬರು ಕರ್ನಾಟಕ ಸಂಗೀತ ವಿದ್ವಾಂಸರ ಹೆಸರಿಲ್ಲದಿರುವುದು ಬೇಸರದ ಸಂಗತಿ. ಸರ್ಕಾರ ಈ ಬಗ್ಗೆ ಚಿಂತನೆ ನಡೆಸಬೇಕು ಎಂದರು.

ನಮ್ಮ ಪರಿಷತ್ತು ಶ್ರೀಮಂತಿಕೆಯಿಂದ ಕೂಡಿಲ್ಲ. ಪ್ರತಿ ಸಮ್ಮೇಳನಕ್ಕೂ 30–35 ಲಕ್ಷ ಖರ್ಚಾಗುತ್ತಿದೆ. ಪ್ರತಿ ಬಾರಿ ಜೋಳಿಗೆ ಹಿಡಿದು ಕಾರ್ಯಕ್ರಮ ಏರ್ಪಡಿಸುತ್ತೇವೆ. ಹಿರಿಯರು ಹಾಕಿಕೊಟ್ಟ ಅಡಿಪಾಯದಂತೆ ಕೆಲಸ ನಡೆಯುತ್ತಿದೆ. ಪರಿಷತ್ತಿಗೆ ಆರ್ಥಿಕ ಶ್ರೀಮಂತಿಕೆ ಇಲ್ಲದಿದ್ದರೂ ಗಾನ ಶ್ರೀಮಂತಿಕೆ ಇದೆ. ಸರಸ್ವತಿ ನಂಬಿದರೆ, ಲಕ್ಷ್ಮೀ ಹಿಂದೆ ಬರುತ್ತಾಳೆ ಎಂಬ ನಂಬಿಕೆಯಿಂದ ಕೆಲಸ ಮಾಡುತ್ತಿದ್ದೇವೆ. ಹಾಗೇ ಸಮ್ಮೇಳನದಲ್ಲಿ ಭಾಗವಹಿಸುವ ಶೇ.95 ಕಲಾವಿದರು ರಾಜ್ಯದವರೇ ಆಗಿದ್ದಾರೆ ಎಂದು ತಿಳಿಸಿದರು.

ಯುವ ಸಂಗೀತ ವಿದ್ವಾಂಸರ ಸಮ್ಮೇಳನಾಧ್ಯಕ್ಷ ವಿದ್ವಾನ್ ಮತ್ತೂರು ಆರ್.ಶ್ರೀನಿಧಿ ಹಾಗೂ ಲೇಖಕ ಕಬ್ಬಿನಾಲೆ ವಸಂತ ಭಾರದ್ವಾಜ್ ಮಾತನಾಡಿದರು. ಈ ಸಂದರ್ಭದಲ್ಲಿ ವಿದುಷಿ ಕಲಾವತಿ ಅವಧೂತ್, ಉದ್ಯಮಿ ಜಗನ್ನಾಥ ಶೆಣೈ, ಮೃದಂಗ ವಿದ್ವಾನ್ ಜಿ.ಎಸ್.ರಾಮಾನುಜನ್ ಮತ್ತಿತರರು ಪಾಲ್ಗೊಂಡಿದ್ದರು.

ದೇಶ – ವಿದೇಶ

ಪರೀಕ್ಷಾರ್ಥ ಸಂಚಾರದ ವೇಳೆ ವಾಲಿದ ಮೋನೋರೈಲು; ತಪ್ಪಿದ ಅನಾಹುತ

ಮುಂಬೈ: ಮುಂಬೈನ ವಡಾಲಾ ಡಿಪೋದಲ್ಲಿ ಬುಧವಾರ ಬೆಳಗ್ಗೆ ಪರೀಕ್ಷಾರ್ಥ ಸಂಚಾರದ ಸಮಯದಲ್ಲಿ ಮೋನೋರೈಲು ವಾಲಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ ರೈಲಿನೊಳಗೆ ಯಾವುದೇ ಪ್ರಯಾಣಿಕರು ಇರಲಿಲ್ಲ. ಘಟನೆಯಲ್ಲಿ ಯಾರಿಗೂ ಯಾವುದೇ ಗಾಯಗಳಾಗಿಲ್ಲ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ಫೋಟೋಗಳು ಮತ್ತು ವಿಡಿಯೋಗಳಲ್ಲಿ, ರೈಲು ಸ್ವಲ್ಪ ವಾಲಿರುವುದು ಕಂಡುಬಂದಿದೆ. ಇಂದು ಬೆಳಗ್ಗೆ 9 ಗಂಟೆಗೆ ಈ ಅಪಘಾತ ವರದಿಯಾಗಿದೆ. ಇಬ್ಬರು ಸಿಬ್ಬಂದಿಯನ್ನು ಮೋನೋರೈಲಿನಿಂದ ಸುರಕ್ಷಿತವಾಗಿ ರಕ್ಷಿಸಲಾಗಿದೆ.



ಮಹಾ ಮುಂಬೈ ಮೆಟ್ರೋ ರೈಲು ಕಾರ್ಯಾಚರಣೆ ಲಿಮಿಟೆಡ್ ಈ ಘಟನೆಯ ಬಗ್ಗೆ ಇದುವರೆಗೆ ಯಾವುದೇ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ. ಪ್ರಾಥಮಿಕ ಮಾಹಿತಿಯ ಪ್ರಕಾರ, ಘಟನೆ ಸಂಭವಿಸಿದಾಗ ರೈಲು ಸಿಗ್ನಲಿಂಗ್ ಪರೀಕ್ಷೆ ನಡೆಸುತ್ತಿತ್ತು ಮತ್ತು ಅದಕ್ಕೆ ಸ್ವಲ್ಪ ಹಾನಿಯಾಗಿದೆ. ಮೋನೋರೈಲ್ ಸಿಬ್ಬಂದಿ ಸ್ಥಳದಲ್ಲಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಾರತದ ಚಿತ್ರ ನಿರ್ಮಾಪಕಿ ಮೀರಾ ನಾಯರ್ ಪುತ್ರ ಜೊಹ್ರಾನ್ ಮಮ್ದಾನಿ ನ್ಯೂಯಾರ್ಕ್‌ನ ನೂತನ ಮೇಯರ್



ನ್ಯೂಯಾರ್ಕ್: ಭಾರತೀಯ ಮೂಲದ ಡೆಮಾಕ್ರಟಿಕ್ ಅಭ್ಯರ್ಥಿ ಜೋಹ್ರಾನ್ ಮಮ್ದಾನಿ ನ್ಯೂಯಾರ್ಕ್ ನಗರದ ಮೇಯರ್ ಚುನಾವಣೆಯಲ್ಲಿ ಜಯಗಳಿಸಿದ್ದಾರೆ. ಅವರು ನ್ಯೂಯಾರ್ಕ್‌ನ ಮೊದಲ ಮುಸ್ಲಿಂ ಮೇಯರ್. ಇದು ಅವರನ್ನು ನಿರಂತರವಾಗಿ ವಿರೋಧಿಸುತ್ತಿದ್ದ ಟ್ರಂಪ್‌ಗೆ ದೊಡ್ಡ ಹೊಡೆತವಾಗಿದೆ. ಬುಧವಾರ ಪ್ರಕಟವಾದ ಫಲಿತಾಂಶಗಳಲ್ಲಿ, ಮಮ್ದಾನಿ ತಮ್ಮ ಎರಡೂ ಪ್ರತಿಸ್ಪರ್ಧಿಗಳನ್ನು ಮೀರಿಸಿ ದೊಡ್ಡ ಗೆಲುವು ದಾಖಲಿಸಿದರು. ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಮಾಜಿ ನ್ಯೂಯಾರ್ಕ್ ಗವರ್ನರ್ ಆಂಡ್ರ್ಯೂ ಕ್ಯುಮೊ ಮತ್ತು ರಿಪಬ್ಲಿಕನ್ ಅಭ್ಯರ್ಥಿ ಕರ್ಟಿಸ್ ಸ್ಲಿವಾ ಅವರನ್ನು ಮಮ್ದಾನಿ ಸೋಲಿಸಿದರು. ಇದಕ್ಕೂ ಮೊದಲು, ಹಾಲಿ ಮೇಯರ್ ಎರಿಕ್ ಆಡಮ್ಸ್ ಸೆಪ್ಟೆಂಬರ್‌ನಲ್ಲಿ ಚುನಾವಣಾ ಸ್ಪರ್ಧೆಯಿಂದ ಹಿಂದೆ ಸರಿದಿದ್ದರು. ಮಂಗಳವಾರ ಬೆಳಗ್ಗೆ 6ರಿಂದ ರಾತ್ರಿ 9ರವರೆಗೆ ಚುನಾವಣೆ ನಡೆಯಿತು. ಅ.25ರಂದು ಆರಂಭಿಕ ಮತದಾನ ಪ್ರಾರಂಭವಾಗಿ ಭಾನುವಾರ ಕೊನೆಗೊಂಡಿತು. ಟ್ರಂಪ್ ಅವರ 2ನೇ ಅಧ್ಯಕ್ಷೀಯ ಅವಧಿಯಲ್ಲಿ ಇದು ಮೊದಲ ಪ್ರಮುಖ ಚುನಾವಣೆಯಾಗಿರುವುದರಿಂದ ಈ ಚುನಾವಣೆ ಮಹತ್ವದ್ದಾಗಿ ಪರಿಗಣಿಸಲಾಗಿದೆ.

ಛತ್ತೀಸಗಢ ರೈಲು ಅಪಘಾತ: ಸಾವಿನ ಸಂಖ್ಯೆ 11ಕ್ಕೆ ಏರಿಕೆ

ಬಿಲಾಸ್‌ಪುರ: ಛತ್ತೀಸಗಢ ಬಿಲಾಸ್‌ಪುರದಲ್ಲಿ ಮಂಗಳವಾರ ಸಂಭವಿಸಿದ ರೈಲು ಅಪಘಾತದಿಂದಾಗಿ ಮೃತಪಟ್ಟವರ ಸಂಖ್ಯೆ 11ಕ್ಕೆ ಏರಿದೆ. ಇವರಲ್ಲಿ 6 ಮಹಿಳೆಯರು ಸೇರಿದ್ದಾರೆ. 2 ವರ್ಷದ ಬಾಲಕ, 9 ಮಹಿಳೆಯರು ಸೇರಿದಂತೆ 20 ಜನರು ಗಾಯಗೊಂಡಿದ್ದಾರೆ.



ಮಂಗಳವಾರ ಸಂಜೆ 4ಕ್ಕೆ ನಿಲ್ದಾಣದ ಬಳಿ ಪ್ರಯಾಣಿಕ ರೈಲೊಂದು ಸರಕು ಸಾಗಣೆ ರೈಲಿಗೆ ಡಿಕ್ಕಿ ಹೊಡೆದು ದುರ್ಘಟನೆ ಸಂಭವಿಸಿತ್ತು. ಮೃತಪಟ್ಟ 11 ಜನರಲ್ಲಿ ಐವರನ್ನು ಲೋಕೊ ಪೈಲಟ್ ವಿದ್ಯಾ ಸಾಗರ್ (53), ಲವಕುಶ ಶುಕ್ಲಾ (41), ರಂಜೀತ್ ಪ್ರಭಾಕರ್ (40), ಶಿಲ್ಪಾ ಯಾದವ್ (25), ಪ್ರಿಯಾಚಂದ್ರಾ (21) ಎಂದು ಗುರುತಿಸಲಾಗಿದ್ದು, ಇತರ ನಾಲ್ವರು ಮಹಿಳೆಯರು ಮತ್ತು ಇಬ್ಬರು ಪುರುಷರ ಮೃತದೇಹಗಳ ಗುರುತು ಇನ್ನೂ ಪತ್ತೆಯಾಗಿಲ್ಲ. ಪ್ರಯಾಣಿಕ ರೈಲಿನ ನಜ್ಜುಗುಜ್ಜಾದ ಬೋಗಿಯ ಅವಶೇಷಗಳ ಅಡಿಯಲ್ಲಿ ಹಲವಾರು ಶವಗಳು ಸಿಲುಕಿಕೊಂಡಿದ್ದರಿಂದ, ಬೋಗಿ ತೆರವುಗೊಳಿಸಲು ರಕ್ಷಣಾ ಸಿಬ್ಬಂದಿ ಗಂಟೆಗಳ ಕಾಲ ಶ್ರಮಿಸಬೇಕಾಯಿತು. ಅಪಘಾತದಿಂದಾಗಿ ಹಾನಿಗೊಳಗಾಗಿದ್ದ ಮಾರ್ಗವನ್ನು ಮರುಸ್ಥಾಪಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೆಯುಐ ಮುಖ್ಯಸ್ಥ ಮೌಲಾನಾ ಹಫೀಜ್ ಅಪರಿಚಿತರ ಗುಂಡಿಗೆ ಬಲಿ

ಕರಾಚಿ: ಪಾಕಿಸ್ತಾನದಲ್ಲಿ ಜಮಿಯತ್ ಉಲೇಮಾ–ಎ–ಇಸ್ಲಾಂ (ಜೆಯುಐ) ನಾಯಕ ಮತ್ತು ಖ್ಯಾತ ಧಾರ್ಮಿಕ ವಿದ್ವಾಂಸ ಮೌಲಾನಾ ಹಫೀಜ್ ಅಬ್ದುಲ್ ಸಲಾಂ ಆರಿಫ್‌ನನ್ನು ಗುಂಡಿಕ್ಕಿ ಕೊಲ್ಲಲಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಬಗ್ಗೆ ಪಾಕಿಸ್ತಾನದ ಡಾನ್ ಪತ್ರಿಕೆ ವರದಿ ಮಾಡಿದ್ದು,



ಪಾಕಿಸ್ತಾನ ಚರ್ಸಡ್ಡಾದ ಮಂದಾನಿ ತಹಸಿಲ್‌ನಲ್ಲಿ ನಡೆದ ಅಪರಿಚಿತ ಗುಂಡಿನ ದಾಳಿಯಲ್ಲಿ ಮೌಲಾನಾ ಹಫೀಜ್ ಅಬ್ದುಲ್ ಸಲಾಂ ಆರಿಫ್ ಹತ್ಯೆಯಾಗಿದೆ ಎಂದು ವರದಿಯಾಗಿದೆ. ಉದ್ದೇಶಿತ ಹತ್ಯೆ ಘಟನೆಯಲ್ಲಿ, ಗುರುತಿಸಲಾಗದ ದಾಳಿಕೋರರು ಜಮಿಯತ್ ಉಲೇಮಾ–ಎ–ಇಸ್ಲಾಂ (ಜೆಯುಐ) ನಾಯಕ ಮತ್ತು ಖ್ಯಾತ ಧಾರ್ಮಿಕ ವಿದ್ವಾಂಸ ಮೌಲಾನಾ ಹಫೀಜ್ ಅಬ್ದುಲ್ ಸಲಾಂ ಆರಿಫ್ ಅವರನ್ನು ಕ್ರೂರವಾಗಿ ಗುಂಡಿಕ್ಕಿ ಕೊಂದಿದ್ದಾರೆ ಎಂದು ಡಾನ್ ಮೂಲಗಳು ತಿಳಿಸಿವೆ. ಮಂದಾನಿ ಪೊಲೀಸ್ ಠಾಣೆ ವ್ಯಾಪ್ತಿಯ ತಖ್ತ್‌ಭಾಯ್ ರಸ್ತೆಯಲ್ಲಿ ಬೈಕ್‌ನಲ್ಲಿ ಬಂದ ಅಪರಿಚಿತರು ಅಬ್ದುಲ್ ಸಲಾಂ ಮೇಲೆ ಗುಂಡು ಹಾರಿಸಿ ಪರಾರಿಯಾಗಿದ್ದಾರೆ. ಈ ವೇಳೆ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅವರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಜಮಾಲಾಬಾದ್‌ನ ಸಿವಿಲ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ

ಗಂಡನನ್ನು ಕೊಂದು ಅಡುಗೆ ಮನೆಯೊಳಗೆ ಹೂತಿಟ್ಟ ಪತ್ನಿ!

ಅಹಮದಾಬಾದ್: ಪ್ರಿಯತಮನ ಜೊತೆ ಸೇರಿಕೊಂಡು ಗಂಡನನ್ನು ಬರ್ಬರ ಕೊಲೆ ಮಾಡಿರುವ ಪತ್ನಿಯು, ಮೃತದೇಹವನ್ನು ತುಂಡು ತುಂಡಾಗಿಸಿ ಅಡುಗೆ ಮನೆಯಲ್ಲಿ ಹೂತು ಹಾಕಿರುವ ಘಟನೆಯು ಅಹಮದಾಬಾದ್‌ನಲ್ಲಿ ಜರುಗಿದ್ದು, ಬುಧವಾರ ಬೆಳಕಿಗೆ ಬಂದಿದೆ. ಸಿನಿಮಿಯ ಶೈಲಿಯ ಈ ಘಟನೆಯು



ಮಲಯಾಳಂ ಸಿನಿಮಾ ದೃಶ್ಯವನ್ನು ನೆನಪಿಗೆ ತರುವಂತಿದೆ ಎಂದಿದ್ದಾರೆ. ಮೇಸ್ತ್ರಿಯಾಗಿ ಕೆಲಸ ಮಾಡುತ್ತಿದ್ದ ಬಿಹಾರ ಮೂಲದ ಸಮೀರ್ ಅನ್ಸಾರಿ ಅವರು 2016ರಲ್ಲಿ ಅಹಮದಾಬಾದ್‌ಗೆ ವಲಸೆ ಬಂದಿದ್ದರು. ರೂಬಿ ಜೊತೆ ಪ್ರೀತಿಸಿ ಮದುವೆಯಾಗಿದ್ದ ಅವರಿಗೆ ಇಬ್ಬರು ಮಕ್ಕಳು ಕೂಡ ಇದ್ದರು ಎಂದು ಹೇಳಿದ್ದಾರೆ. ಕೆಲವು ವರ್ಷಗಳಿಂದ ರೂಬಿಗೆ ಅದೇ ಬಡಾವಣೆಯಲ್ಲಿದ್ದ ಇಮ್ರಾನ್ ವಘೇಲಾ ಎನ್ನುವವನ ಜೊತೆ ಪ್ರೇಮಾಂಕುರವಾಗಿತ್ತು. ಪತ್ನಿಯ ಅಕ್ರಮ ಸಂಬಂಧದ ವಿಷಯ ಅನ್ಸಾರಿಗೆ ತಿಳಿದು, ದಂಪತಿಗಳ ನಡುವೆ ಜಗಳವಾಗಿತ್ತು ಎಂದು ತಿಳಿಸಿದ್ದಾರೆ. ಕೆಲವು ತಿಂಗಳಿನಿಂದ ಅನ್ಸಾರಿ ನಾಪತ್ತೆಯಾಗಿದ್ದಾರೆ ಎನ್ನುವ ಸುಳಿವಿನ ಆಧಾರದಲ್ಲಿ ತನಿಖೆ ನಡೆಸುತ್ತಿದ್ದ ಪೊಲೀಸರಿಗೆ ಮಂಗಳವಾರ ರಾತ್ರಿ ಅವರ ಮನೆಯ ಅಡುಗೆ ಮನೆಯೊಳಗೆ ಹೂತಿಟಿದ್ದ ಮೃತದೇಹದ ಅವಶೇಷಗಳು ಪತ್ತೆಯಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಪಾದಚಾರಿಗೆ ಬೈಕ್ ಡಿಕ್ಕಿ ಹೊಡೆದು ಸರಣಿ ಅಪಘಾತ



ಸರಣಿ ಅಪಘಾತವೆಸಗಿದ ಬೈಕ್

ಸುಂಟಿಕೊಪ್ಪ: ಹೆದ್ದಾರಿ ದಾಟುವ ಸಂದರ್ಭ ದ್ವಿಚಕ್ರ ವಾಹನವೊಂದು ಪಾದಚಾರಿಗೆ ಡಿಕ್ಕಿ ಹೊಡೆದು, ರಸ್ತೆಬದಿಯಲ್ಲಿ ನಿಲ್ಲಿಸಿದ್ದ 2 ದ್ವಿಚಕ್ರ ವಾಹನ, ಅಂಗಡಿ ಮಳಿಗೆಯ ಸಾಮಗ್ರಿಗಳನ್ನು ಜಖಂಗೊಳಿಸಿರುವ ಘಟನೆ ಸುಂಟಿಕೊಪ್ಪದಲ್ಲಿ ನಡೆದಿದೆ.

ನಾರಾಯಣ(50) ಎಂಬವರು ರಸ್ತೆ ದಾಟುತ್ತಿದ್ದ ಸಂದರ್ಭದಲ್ಲಿ ಗದ್ದೆಹಳ್ಳ ಬಳಿಯಿಂದ ಪಟ್ಟಣಕ್ಕೆ ದ್ವಿಚಕ್ರ ವಾಹನದಲ್ಲಿ (ಕೆಎ.12, ಎಕ್ಸ್–6764) ಆಗಮಿಸುತ್ತಿದ್ದ ಸಿಯಾಬ್(25) ಎಂಬಾತ ಮೊದಲಿಗೆ ನಾರಾಯಣ ಅವರಿಗೆ ಡಿಕ್ಕಿ ಹೊಡೆಸಿದ್ದಾನೆ ನಂತರ ನಿಯಂತ್ರಣಕ್ಕೆ ಬಾರದೆ ಮಳಿಗೆಯ ಮುಂಭಾಗದಲ್ಲಿ ಇರಿಸಲಾಗಿದ್ದ ಸಿಂಟೆಕ್ಸ್ ಟ್ಯಾಂಕ್, ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ 2 ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದಿದೆ. ಅದೃಷ್ಟವಶಾತ್ ಮಳಿಗೆ ಮುಂಭಾಗ ಜನರಿಲ್ಲದ ಕಾರಣ ಹೆಚ್ಚಿನ ಅನಾಹುತವೂ ತಪ್ಪಿದೆ. ಪಾದಚಾರಿ ನಾರಾಯಣ ಅವರ ತಲೆಯ ಭಾಗಕ್ಕೆ ಗಾಯವಾಗಿದ್ದು, ಜಿಲ್ಲಾ ಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸುಂಟಿಕೊಪ್ಪ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡಿದ್ದು, ಠಾಣಾಧಿಕಾರಿ ಮೋಹನ್‌ರಾಜ್ ಮತ್ತು ಸಿಬ್ಬಂದಿ ಸ್ಥಳ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಭೂಮಿ ಸಮಸ್ಯೆ ಬಗ್ಗೆ ಸಚಿವರೊಂದಿಗೆ ಸಮಾಲೋಚಿಸಿದ ಕೊಡಗು ನಿಯೋಗ

ಮಡಿಕೇರಿ, ನ.5–ಜಿಲ್ಲೆಯಲ್ಲಿನ 'ಸಿ ಮತ್ತು ಡಿ' ಭೂಮಿ ಸಮಸ್ಯೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು, ಶಾಸಕರೊಂದಿಗೆ ಬೆಂಗಳೂರಿನಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಸಿ ಮತ್ತು ಡಿ ಜಾಗದ ಸಮಸ್ಯೆ ಬಗ್ಗೆ ರೈತರು ನಡೆಸುತ್ತಿರುವ ಹೋರಾಟ, ರೈತರು ಮತ್ತು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ



ಸಚಿವ ಭೋಸರಾಜು, ಶಾಸಕರೊಂದಿಗೆ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರನ್ನು ಭೇಟಿಯಾಗಿ 'ಸಿ ಮತ್ತು ಡಿ' ಭೂಮಿ ಸಮಸ್ಯೆ ಬಗ್ಗೆ ಸಮಾಲೋಚನೆ ನಡೆಸಿದರು.

ಎನ್.ಎಸ್.ಭೋಸರಾಜು, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್ ಗೌಡ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಜ ಉತ್ತಪ್ಪ ಅವರುಗಳು ಸಮಸ್ಯೆ ಬಗ್ಗೆ ವಿವರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಕೃಷ್ಣ ಬೈರೇಗೌಡ, ಈ ಬಗ್ಗೆ ಎಲ್ಲರಿಗೂ ಅನುಕೂಲವಾಗುವ ರೀತಿಯಲ್ಲಿ ಸಮಿತಿಯೊಂದನ್ನು ರಚಿಸಿ, ಸಮಸ್ಯೆ ಪರಿಹಾರಕ್ಕೆ ಪ್ರಯತ್ನ ನಡೆಸಲಾಗುವುದೆಂದು ಭರವಸೆ ನೀಡಿದರು.

ಶ್ರೀಲಂಕಾ ಪ್ರೀಮಿಯರ್ ಲೀಗ್ ಹಾಕಿ: ತೀರ್ಪುಗಾರರಾಗಿ ಕೊಡಗಿನ ಅಯ್ಯಪ್ಪ ಆಯ್ಕೆ

ನಾಪೋಕ್ಲು: ಶ್ರೀಲಂಕಾ ಪ್ರೀಮಿಯರ್ ಲೀಗ್ ಹಾಕಿ ಪಂದ್ಯಾವಳಿಯಲ್ಲಿ ತೀರ್ಪುಗಾರರಾಗಿ ಕೊಡಗಿನ ಕುವರ ಅಪ್ಪಚೆಟ್ಟೋಳಂಡ ಅಯ್ಯಪ್ಪ ಆಯ್ಕೆಯಾಗಿದ್ದಾರೆ.



ಶ್ರೀಲಂಕಾದ ಕೊಲೊಂಬಿಯಾ ಸ್ಟೇಡಿಯಂನಲ್ಲಿ ಇದೇ ಶನಿವಾರದಿಂದ ನ.29ರವರೆಗೆ ನಡೆಯಲಿರುವ ಶ್ರೀಲಂಕಾ ಪ್ರೀಮಿಯರ್ ಲೀಗ್ ಹಾಕಿ ಪಂದ್ಯಾವಳಿಯಲ್ಲಿ ತೀರ್ಪುಗಾರರಾಗಿ ಅಪ್ಪಚೆಟ್ಟೋಳಂಡ ಅಯ್ಯಪ್ಪ ಆಯ್ಕೆಯಾಗಿದ್ದಾರೆ. ಇವರು ಪ್ರಸ್ತುತ ಹಾಕಿ ಇಂಡಿಯಾದ ತೀರ್ಪುಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರು ಬಲ್ಲಮಾವಟ್ಟಿ ಗ್ರಾಮದ ಅಪ್ಪಚೆಟ್ಟೋಳಂಡ ಬೋಪಯ್ಯ ಭೋಜಮ್ಮ ದಂಪತಿಗಳ ಪುತ್ರರಾಗಿದ್ದಾರೆ.

ಟಿಎಪಿಸಿಎಂಎಸ್ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ವಿರಾಜಪೇಟೆ,ನ5–ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಅಧ್ಯಕ್ಷರಾಗಿ ಪುಟ್ಟಿಚಂಡ ಟಿ.ನರೇಂದ್ರ ಹಾಗೂ ಉಪಾಧ್ಯಕ್ಷರಾಗಿ ಮಳೇಟಿರ ಬಿ.ದೇವಯ್ಯ ಚುಕ್ಕು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಕಛೇರಿಯಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ನಿರ್ದೇಶಕರಾದ ವಾಟೇರಿರ ಟಿ.ಪ್ರೇಮ್ ನಾಣಯ್ಯ, ಪಳಂಗಂಡ ಸಿ. ರಾಕೇಶ್, ಬಿ.ಎಲ್.ರಾಮಚಂದ್ರ, ಕಾಣತಂಡ ಎಂ.ಬೋಪಣ್ಣ ಪೂಳಂಡ ಪಿ.ಪೆಮ್ಮಯ್ಯ, ಕೋದಂಡ ಮಂಜುಳ ಅಯ್ಯಪ್ಪ, ಇಟ್ಟಿರ ಸಿ.ಮಾಲತಿ, ಪರಿವಾರ ಪಿ.ಸುರೇಶ್, ಹೆಚ್.ಆರ್. ಕುಂಜ ಹಾಗೂ ವ್ಯವಸ್ಥಾಪಕ ಎಂ.ಎಸ್. ವಿಶ್ವನಾಥ್ ಉಪಸ್ಥಿತರಿದ್ದರು. ಚುನಾವಣಾಧಿಕಾರಿ ಕೆ.ಯು.ಕರಣ್ ಕಾರ್ಯಪ್ಪ ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು.

ಹೊರನಾಡಿಗೆ ತೆರಳಿರುವ ಕೊಡಗಿನವರು ಮತ್ತೆ ಹಿಂದಿರುಗಲು ಪ್ರವಾಸೋದ್ಯಮ ನೆರವಾಗಲಿ

ಮಡಿಕೇರಿ, ನ.5–ಕೊಡಗು ಮೂಲದ ಯುವ ಪೀಳಿಗೆ ಮತ್ತೆ ಜಿಲ್ಲೆಗೆ ಮರಳುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಸಂಬಂಧಿತ ಯೋಜನೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ಅಭಿಪ್ರಾಯಪಟ್ಟಿದ್ದಾರೆ.

ನಗರದ ಕೊಡಗು ಪ್ರವಾಸೋದ್ಯಮ ಇಲಾಖೆ ಕಚೇರಿಯಲ್ಲಿ ಕೂರ್ಗ್ ರೆಸಾರ್ಟ್, ಹೋಟೆಲ್ ಅಸೋಸಿಯೇಷನ್ನಿನ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಉದ್ಯೋಗವಕಾಶ ಅರಸಿ ಹೊರನಾಡಿಗೆ ತೆರಳಿರುವ ಕೊಡಗಿನ ಅನೇಕ ಯುವಕ, ಯುವತಿಯರು ಮತ್ತೆ ಮರಳಲು ಸ್ಥಳೀಯವಾಗಿ ಪ್ರವಾಸೋದ್ಯಮ ಚಟುವಟಿಕೆಗಳು ಸಹಕಾರಿಯಾಗಬೇಕು. ಪ್ರವಾಸೋದ್ಯಮಿಗಳಲ್ಲಿ ಪರಸ್ಪರ ಸ್ಪರ್ಧೆಗಿಂತ ಎಲ್ಲಾ ಉದ್ಯಮಿಗಳನ್ನು ಪ್ರೋತ್ಸಾಹಿಸಿ ಸುಸ್ಥಿರ ಪ್ರವಾಸೋದ್ಯಮ ಸುಗಮವಾಗಿರುವಂತೆ ಕಾಯ್ದುಕೊಳ್ಳುವುದು ಮುಖ್ಯವಾಗಬೇಕೆಂದು ಹೇಳಿದರು.

ಕಳೆದ ತಿಂಗಳು ಕೂರ್ಗ್ ಹೋಟೇಲ್, ರೆಸಾರ್ಟ್ ಅಸೋಸಿಯೇಷನ್ ಆಯೋಜಿಸಿದ್ದ ಸ್ವಚ್ಛ ಕೊಡಗು ಸುಂದರ ಕೊಡಗು ಸ್ವಚ್ಛತಾ ಅಭಿಯಾನ ರಾಜ್ಯದ ಗಮನವನ್ನೇ ಸೆಳೆದಿದೆ. ಸ್ವಯಂಪ್ರೇರಿತರಾಗಿ ಜಿಲ್ಲೆಯ ಜನತೆ ಈ ಅಭಿಯಾನಕ್ಕೆ ಸಹಕಾರ ನೀಡಿದ್ದು, ಜನತೆಯಲ್ಲಿ ಸ್ವಚ್ಛ ಕೊಡಗಿನ ಬಗೆಗಿನ ಚಿಂತನೆಗೆ ನಿದರ್ಶನವಾಗಿದೆ ಪ್ಲಾಸ್ಟಿಕ್‌ಮುಕ್ತ ಜಿಲ್ಲೆಯನ್ನಾಗಿಸುವಲ್ಲಿಯೂ ಜನತೆಯ ಸರ್ವ ಸಹಕಾರ ಅಗತ್ಯ. ಕೊಡಗಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಸಾಕಷ್ಟು ಮಾಹಿತಿ ನೀಡುವ ನಿಟ್ಟಿನಲ್ಲಿ ಕೂರ್ಗ್ ಹೋಟೇಲ್, ರೆಸಾರ್ಟ್ ಅಸೋಸಿಯೇಷನ್‌ನ ಈ ನೂತನ ಕಛೇರಿ ಸಹಕಾರಿಯಾಗಲಿ ಎಂದು ಹಾರೈಸಿದರು.

ಕೂರ್ಗ್ ಹೋಟೇಲ್, ರೆಸಾರ್ಟ್



ಕೊಡಗು ಪ್ರವಾಸೋದ್ಯಮ ಇಲಾಖೆ ಕಚೇರಿಯಲ್ಲಿ ಜಿಲ್ಲಾಧಿಕಾರಿ ಕೂರ್ಗ್ ರೆಸಾರ್ಟ್, ಹೋಟೇಲ್ ಅಸೋಸಿಯೇಷನ್ನಿನ ನೂತನ ಕಚೇರಿಯನ್ನು ಉದ್ಘಾಟಿಸಿದರು.

ಅಸೋಸಿಯೇಷನ್ ಅಧ್ಯಕ್ಷ ಕುಂಡ್ಯೋಳಂಡ ದಿನೇಶ್ ಕಾರ್ಯಪ್ಪ ಮಾತನಾಡಿ, ಜಿಲ್ಲಾಧಿಕಾರಿಗಳ ಸಹಕಾರದೊಂದಿಗೆ ಪ್ರಥಮ ಬಾರಿಗೆ ಕೂರ್ಗ್ ಹೊಟೇಲ್, ರೆಸಾರ್ಟ್ ಅಸೋಸಿಯೇಷನ್‌ಗೆ ಪ್ರತ್ಯೇಕ ಕಚೇರಿ ಲಭಿಸುವಂತಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿ ನಿಟ್ಟಿನಲ್ಲಿ ಅಸೋಸಿಯೇಷನ್ ಅನೇಕ ಕಾರ್ಯ ಯೋಜನೆ ರೂಪಿಸುತ್ತಿದ್ದು, ಕೊಡಗು ಉತ್ಸವದ ಚಿಂತನೆಯೂ ಇದೆ ಎಂದರು.

ಕೂರ್ಗ್ ಹೊಟೇಲ್, ರೆಸಾರ್ಟ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ನಾಸಿರ್ ಅಹಮ್ಮದ್, ಉಪಾಧ್ಯಕ್ಷ ಜಾಹೀರ್ ಅಹಮ್ಮದ್, ಬಿ.ಎಸ್. ಸುಂದರ್, ರತೀಶ್, ಬಿ.ಸಿ. ಮಂಜುನಾಥ್, ಜಂಟಿ ಕಾರ್ಯದರ್ಶಿ ಡಿ.ಕೆ. ಮಂಜುನಾಥ್, ಖಜಾಂಜಿ ಸಾಗರ್ ಗಣಪತಿ, ಅಸೋಸಿಯೇಷನ್ ನಿಕಟಪೂರ್ವ ಅಧ್ಯಕ್ಷ ಬಿ.ಆರ್. ನಾಗೇಂದ್ರ ಪ್ರಸಾದ್, ಗೌರವ ಸಲಹೆಗಾರ ಜಿ.ಚಿದ್ವಿಲಾಸ್, ಸೇರಿದಂತೆ ಪದಾಧಿಕಾರಿಗಳು, ಸದಸ್ಯರು ಹಾಜರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಡಿಕೇರಿ : ಸೋಮವಾರಪೇಟೆ ಫೀಡರ್‌ನಲ್ಲಿ ನ.6ರ ಬೆಳಗ್ಗೆ 9 ರಿಂದ ಸಂಜೆ 6ರವರೆಗೆ ಕಾಮಗಾರಿ ನಿಮಿತ್ತ ಹಾನಗಲ್ಲು, ಶೆಟ್ಟಳ್ಳಿ, ಹಾನಗಲ್ಲು ಬಾಣೆ, ತೋಳೂರು ಶೆಟ್ಟಳ್ಳಿ, ಕೂತಿ ಯಡೂರು, ತಾಕೇರಿ, ಕಿರಂಗಂದೂರು, ಹರಗ, ಶಾಂತಳ್ಳಿ, ಬೆಟ್ಟದಳ್ಳಿ, ನಾಗರಳ್ಳಿ, ಕುಂದಳ್ಳಿ, ಕಿಕ್ಕರಳ್ಳಿ, ಕುಡಿಗಾಣ, ಕೊತ್ನಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ವಿರಾಜಪೇಟೆ ಶಾಖಾ ವ್ಯಾಪ್ತಿಯ ತೆಲುಗರ ಬೀದಿ, ನೆಹರು ನಗರ, ಗೋಣಿಕೊಪ್ಪ ರಸ್ತೆ, ಶಾಂತಿನಗರ, ವಿದ್ಯಾನಗರ, ನಿಸರ್ಗ ಬಡಾವಣೆ, ಮೀನುಪೇಟೆ, ಖಾಸಗಿ ಬಸ್ ನಿಲ್ದಾಣ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಆರ್ಜಿ, ಬೇಟೋಳಿ, ಕಲ್ಲುಬಾಣೆ, ಹೆಗ್ಗಳ, ರಾಮನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಆಕಸ್ಮಿಕ ಬೆಂಕಿಗೆ ಕಾರು ಆಹುತಿ




ಕಾರಿಗೆ ಹೊತ್ತಿಕೊಂಡ ಬೆಂಕಿಯನ್ನು ಅಗ್ನಿಶಾಮಕ ಸಿಬ್ಬಂದಿ ನಂದಿಸುತ್ತಿರುವುದು

ಮಡಿಕೇರಿ, ನ.5–ಕಾರೊಂದು ಆಕಸ್ಮಿಕ ಬೆಂಕಿಗೆ ಆಹುತಿಯಾದ ಘಟನೆ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಕಾಟಕೇರಿ ಬಳಿ ನಡೆದಿದೆ.

ಮೂಲತಃ ಮೈಸೂರು ನಿವಾಸಿಯಾದ ಶೋಯೆಬ್ ಎಂಬವರಿಗೆ ಸೇರಿದ ಬೆಂಗಳೂರು ನೋಂದಣಿ ಹೊಂದಿರುವ ಡೆಸ್ಟರ್ ಕಾರು ಬೆಂಕಿಗೆ ಆಹುತಿಯಾಗಿದ್ದು, ಕಾರಿನಲ್ಲಿದ್ದವರು ಅಪಾಯದಿಂದ ಪಾರಾಗಿದ್ದಾರೆ. ಶೋಯೆಬ್ ತಮ್ಮ ಕುಟುಂಬದವರೊಂದಿಗೆ ಮಂಗಳೂರಿನಿಂದ ಮಡಿಕೇರಿ ಮಾರ್ಗವಾಗಿ ಮೈಸೂರು ಕಡೆಗೆ ತೆರಳುತ್ತಿದ್ದರು. ಕಾರು ಕಾಟಕೇರಿ ಬಳಿ ಆಗಮಿಸಿದಾಗ ಬಾನೆಟ್ ಬಳಿ ಹೊಗೆ ಕಾಣಿಸಿಕೊಂಡಿದೆ. ಕಾರಿನಲ್ಲಿದ್ದವರು ತಕ್ಷಣವೇ ಕೆಳಗೆ ಇಳಿದ ಕೆಲವೇ ಕ್ಷಣಗಳಲ್ಲಿ ಸಂಪೂರ್ಣ ಬೆಂಕಿ ಆವರಿಸಿ ಕಾರು ಸಂಪೂರ್ಣವಾಗಿ ಸುಟ್ಟುಹೋಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸಿದ್ದಾರೆ.

ಅಕ್ರಮ ಮರಳು ಸಾಗಿಸುತ್ತಿದ್ದ ವಾಹನ ವಶ: 41 ಸಾವಿರ ರೂ. ದಂಡ

ನಾಪೋಕ್ಲು, ನ.5–ಅಕ್ರಮವಾಗಿ ಮರಳು ಸಾಗಾಟ ಮಾಡುತ್ತಿದ್ದ ಪಿಕ್ ಅಪ್ ವಾಹನವನ್ನು ಪೊಲೀಸರು ಮಾಲು ಸಹಿತ ವಶಕ್ಕೆ ಪಡೆದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಹಸ್ತಾಂತರಿಸಿ ದಂಡ ವಿಧಿಸಿದ್ದಾರೆ.



ಅಕ್ರಮವಾಗಿ ಮರಳು ಸಾಗಿಸುತ್ತಿದ್ದ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿರುವುದು

ಸಮೀಪದ ಕೊಳಕೇರಿ ಗ್ರಾಮಕ್ಕೆ ತೆರಳುವ ರಸ್ತೆಯ ಜಂಕ್ಷನ್ ಬಳಿ ಮಹೇಂದ್ರ ಪಿಕಪ್ ವಾಹನ ಪರವಾನಗಿ ಇಲ್ಲದೆ ಅಕ್ರಮವಾಗಿ ಮರಳು ಸಾಗಿಸುತ್ತಿದ್ದು, ಪೊಲೀಸರು ವಾಹನವನ್ನು ಮಾಲು ಸಹಿತ ಮುಟ್ಟುಗೋಲು ಹಾಕಿದರು. ಬಳಿಕ ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಪ್ರಕರಣವನ್ನು ಹಸ್ತಾಂತರಿಸಿ ವಾಹನದ ಮಾಲೀಕರಿಗೆ ರೂ.41,160 ದಂಡ ವಿಧಿಸಿ ಕ್ರಮ ಕೈಗೊಂಡಿದ್ದಾರೆ.

ಶೀಲಾವತಿ ನಿಧನ



ನಾಪೋಕ್ಲು, ನ.5– ಸಮೀಪದ ಅರ್ವತೋಕ್ಲು ಗ್ರಾಮದ ನಿವಾಸಿ ತುಮ್ಮಜ್ಜಿರ ಮುತ್ತಣ್ಣನವರ ಧರ್ಮಪತ್ನಿ 74 ವರ್ಷದ ಶೀಲಾವತಿ(ಶೇಷಮ್ಮ) ಮಂಗಳವಾರ ದೈವಾಧೀನರಾದರು.

ಮೃತರ ಅಂತ್ಯಕ್ರಿಯೆ ಬುಧವಾರ ತುಮ್ಮಜ್ಜಿರ ಕುಟುಂಬಸ್ಥರ ರುದ್ರಭೂಮಿಯಲ್ಲಿ ನಡೆಯಿತು. ಮೃತರು ಪತಿ ಹಾಗೂ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಬಾಂಧವರನ್ನು ಅಗಲಿದ್ದಾರೆ.


ಗಣೇಶ್ ಪೆಮ್ಮಯ್ಯ



ನಾಪೋಕು, ನ.5– ಸಮೀಪದ ನಾಲಡಿ ಗ್ರಾಮದ ನಿವಾಸಿ ಕೋಡಿಮಣಿಯಂಡ ಗಣೇಶ್ ಪೆಮ್ಮಯ್ಯ(63) ಬುಧವಾರ ನಿಧನರಾದರು. ಮೃತರ ಅಂತ್ಯಕ್ರಿಯೆ ಗುರುವಾರ ಗ್ರಾಮದಲ್ಲಿರುವ ಕೋಡಿಮಣಿಯಂಡ ಕುಟುಂಬದ ರುದ್ರಭೂಮಿಯಲ್ಲಿ ನಡೆಯಲಿದೆ. ಮೃತರು ಪತ್ನಿ ಪೂವಮ್ಮ ಎರಡು ಪುತ್ರಿಯರು ಸೇರಿದಂತೆ ಬಂದು ಬಾಂಧವರನ್ನು ಅಗಲಿದ್ದಾರೆ.

ಹುಲಿ ಮರಿಗಳ ಜೊತೆ ವಿಡಿಯೋ ಜಾಲತಾಣಗಳಲ್ಲಿ ವೈರಲ್

ಚಾಮರಾಜನಗರ, ನ.5–ತಾಯಿಯಿಂದ ಬೇರ್ಪಟ್ಟಿದ್ದ ಮೂರು ಹುಲಿ ಮರಿಗಳ ಜೊತೆ ಖಾಸಗಿ ವ್ಯಕ್ತಿಗಳು ರಾತ್ರಿ ಹೊತ್ತು ವಿಡಿಯೋ ಮಾಡಿರುವ ಘಟನೆ ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕವಾಗಿ ವೈರಲ್ ಆಗಿದ್ದು, ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ.



ಹುಲಿ ಮರಿಗಳ ಜೊತೆ ವಿಡಿಯೋ

ಪುಣಜನೂರು–ಬೇಡಗುಳಿ ರಸ್ತೆಯಲ್ಲಿ ಕಳೆದ ಅ.14 ರಂದು ತಾಯಿಯಿಂದ ಬೇರ್ಪಟ್ಟ ಮೂರು ಹುಲಿ ಮರಿಗಳು ಪತ್ತೆಯಾಗಿದ್ದವು. ಖಾಸಗಿ ವ್ಯಕ್ತಿಗಳು ಆ ಮರಿಗಳನ್ನು ಹಿಡಿದು ವಿಡಿಯೋ ಮಾಡಿರುವ ವಿಷಯ ಬೆಳಕಿಗೆ ಬಂದಿದೆ. ಬೇಡಗುಳಿಯಲ್ಲಿರುವ ಅತ್ತಿಖಾನೆ ಎಸ್ಟೇಟ್‌ನ ಜಾವಿದ್, ರಫೀಕ್ ಎಂಬವರು ರಾತ್ರಿ ಜೀಪ್‌ನ ಹೆಡ್‌ಲೈಟ್ ಬೆಳಕಿನಲ್ಲಿ ಹುಲಿ ಮರಿಗಳ ಜೊತೆ ವಿಡಿಯೋ ಮಾಡಿಕೊಂಡಿದ್ದಾರೆ. ಈ ಸಂಬಂಧ ಸಾಮಾಜಿಕ ಹೋರಾಟಗಾರ ದಿನೇಶ್ ಕಲ್ಲಹಳ್ಳಿ ಅವರು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೆ ದೂರು ನೀಡಿದ್ದಾರೆ.

ತನಿಖೆಗೆ ಆಗ್ರಹ : ಕೋರ್ ಏರಿಯಾದಲ್ಲಿರುವ ಹುಲಿ ಮರಿಗಳನ್ನು ಕಂಡ ವೇಳೆ ವಿಡಿಯೋ ಮಾಡಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಅರಣ್ಯಾಧಿಕಾರಿಗಳ ಬೆಂಬಲ ಇಲ್ಲದೆ ಇವರು ರಾತ್ರಿ ಸಮಯದಲ್ಲಿ ಕೋರ್ ಏರಿಯಾದಲ್ಲಿ ಹುಲಿ ಮರಿಗಳ ವಿಡಿಯೋ ಮಾಡಲು ಸಾಧ್ಯವಿಲ್ಲ. 10 ದಿನಗಳ ಮರಿಯನ್ನು ಇವರು ಸ್ಪರ್ಶ ಮಾಡಿದ್ದಾದರೂ ಏಕೆ? ಈ ಬಗ್ಗೆ ಅರಣ್ಯ ಸಚಿವರು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಕಮಿಷನ್ ದಂಧೆ ನಡೆಸುವವರ ವಿರುದ್ಧ ಕ್ರಮಕ್ಕೆ ಆಗ್ರಹ



ಕೆಲ್ಲಂಬಳ್ಳಿ–ಬದನಗುಪ್ಪೆ ಕೈಗಾರಿಕಾ ಪ್ರದೇಶದಲ್ಲಿ ಕಮಿಷನ್ ದಂಧೆ ನಡೆಸುತ್ತಿರುವ ಅಧಿಕಾರಿ, ಗ್ರಾ.ಪಂ ಸದಸ್ಯರ ವಿರುದ್ಧ ಕ್ರಮಕೈಗೊಳ್ಳುವಂತೆ ಒತ್ತಾಯಿಸಿ ರೈತರು ಎಡಿಸಿ ಜವರೇಗೌಡರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ನ.5–ತಾಲೂಕಿನ ಕೆಲ್ಲಂಬಳ್ಳಿ– ಬದನಗುಪ್ಪೆ ಕೈಗಾರಿಕಾ ಪ್ರದೇಶದಲ್ಲಿ ಸರ್ಕಾರ ಭೂಸ್ವಾಧೀನಪಡಿಸಿಕೊಂಡು ಹಣ ಬಿಡುಗಡೆಗೆ ಕಮಿಷನ್ ದಂಧೆ ನಡೆಸುತ್ತಿರುವ ಅಧಿಕಾರಿಗಳು, ಗ್ರಾಪಂ ಸದಸ್ಯರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ ಕೈಗಾರಿಕಾ ಪ್ರದೇಶಕ್ಕೆ ಭೂಮಿ ಕೊಟ್ಟಿರುವ ರೈತರು ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡರಿಗೆ ಮನವಿ ಸಲ್ಲಿಸಿದರು.

ನಾವು ಉಳುಮೆ ಮಾಡುತ್ತಿದ್ದ ಭೂಮಿಗೆ ಸರ್ಕಾರ ಎಕರೆಗೆ 43 ಲಕ್ಷಕ್ಕೆ ನಿಗದಿಪಡಿಸಿದೆ. ಭೂಸ್ವಾಧೀನ ಇಲಾಖೆಗೆ ನಾವು ಪೂರ್ವ ದಾಖಲಾತಿಗಳನ್ನು ನೀಡಿದ್ದರೂ ನಿಮ್ಮ ದಾಖಲಾತಿಗಳಲ್ಲಿ ಹಲವು ಸಮಸ್ಯೆಗಳಿವೆ ಅದಕ್ಕಾಗಿ ಎಸ್.ಎಲ್.ಓ. ಅಧಿಕಾರಿ, ಗ್ರಾ.ಪಂ.ಸದಸ್ಯರಾದ ಕೆಲ್ಲಂಬಳ್ಳಿ ಸೋಮಶೇಖರ್ ಮತ್ತು ಕಲ್ಲಹಳ್ಳಿ ನಂಜುಂಡಸ್ವಾಮಿ ಅವರುಗಳನ್ನು ಕರೆದುಕೊಂಡು ಬನ್ನಿ, ಎಂದು ಅಧಿಕಾರಿಗಳು ಹೇಳುತ್ತಾರೆ. ಅದರಂತೆ ಗ್ರಾ.ಪಂ ಸದಸ್ಯರನ್ನು ನಾವೇನಾದರೂ ಕರೆದುಕೊಂಡು ಹೋದರೆ, 2 ದಿನ ಕಾಲಾವಕಾಶ ಕೇಳಿ ನಂತರ ನಿಮ್ಮ ದಾಖಲಾತಿಗಳ ಮೇಲೆ ಬೇರೆಯವರು ಕೇಸ್ ಹಾಕಿದ್ದಾರೆ. ನಿಮ್ಮ ಹಣವನ್ನು ಬಿಡುಗಡೆ ಮಾಡಿಸಬೇಕಾದರೆ ಪ್ರತಿ ಎಕರೆಗೆ 3–4 ಲಕ್ಷ ಹಣ ಕೊಡುವಂತೆ ಕೇಳುತ್ತಾರೆ.

ಜಮೀನುಗಳನ್ನು ಕಳೆದುಕೊಂಡ ಮೇಲೆ ನಾವು ಏಕೆ ಹಣ ಕೊಡಬೇಕೆಂದು ಕೇಳಿದಾಗ, ಜಿಲ್ಲಾಧಿಕಾರಿಗೆ, ಸ್ಥಳೀಯ ಶಾಸಕರಿಗೆ, ಸಚಿವರ ಪಿ.ಎ.ಗೆ ಕೊಡಬೇಕು ಹೀಗೆ ಕೊಟ್ಟರೆ ಸರ್ಕಾರದಿಂದ ಹಣವನ್ನು ಬಿಡುಗಡೆ ಮಾಡಿಸುತ್ತಾರೆ. ಇಲ್ಲದಿದ್ದರೆ ನಿಮಗೆ ಹಣ ಬರುವುದು ತಡವಾಗುತ್ತದೆ ಎಂದು ಹೆದರಿಸುತ್ತಾರೆ. ಈಗಾಗಲೇ ಸದಾನಂದರಾಜು ಎಂಬವರು ಗ್ರಾಪಂ ಸದಸ್ಯ ಕೆಲ್ಲಂಬಳ್ಳಿ ಸೋಮಶೇಖರ ಎಂಬುವರ ಫೋನ್‌ಪೇ ಅಕೌಂಟ್‌ಗೆ 90 ಸಾವಿರ ರೂ. ಹಾಗೂ ಅವರ ತಮ್ಮ ಪುಟ್ಟಸ್ವಾಮಿ ಅಕೌಂಟ್‌ಗೆ 10 ಲಕ್ಷ ರೂ.ಗಳನ್ನು ಕಳಿಸಿದ್ದಾರೆ. ಈ ಬಗ್ಗೆ ತಾವು ಪರಿಶೀಲಿಸಿ ಎಸ್ ಎಲ್ ಓ ಅಧಿಕಾರಿ, ಗ್ರಾ. ಪಂ.ಸದಸ್ಯರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಮನವಿ ಪತ್ರ ಸಲ್ಲಿಸುವ ಸಂದರ್ಭದಲ್ಲಿ ಸದಾನಂದರಾಜು, ಕೆಲ್ಲಂಬಳ್ಳಿ ಗ್ರಾ.ಪಂ.ಸದಸ್ಯ ರಾಜೇಶ್, ಮಾಜಿ ಸದಸ್ಯ ನಾಗರಾಜಪ್ಪ, ರಾಮಲಿಂಗನಾಯಕ, ಪುಟ್ಟಸ್ವಾಮಿ, ಕೆಲ್ಲಂಬಳ್ಳಿ ಶಿವು ಹಾಜರಿದ್ದರು.

ರೈತರ ಪಾಲಿಗೆ ಕಾಂಗ್ರೆಸ್ ಸರ್ಕಾರ ವಿಷ

'ಕೆರೆ ನೀರಿಗಾಗಿ ಕಾಲ್ನಡಿಗೆ'ಗೆ ಚಾಲನೆ ನೀಡಿ ವಿಪಕ್ಷ ನಾಯಕ ಅಶೋಕ್ ವ್ಯಂಗ್ಯ

ಗುಂಡ್ಲುಪೇಟೆ, ನ.5(ಸೋಮ್.ಜಿ)– ಕಾಂಗ್ರೆಸ್ ಸರಕಾರ ರೈತರ ಪಾಲಿಗೆ ವಿಷವಾಗಿರುವುದರಿಂದಲೇ ಈವರೆಗೆ ರಾಜ್ಯದಲ್ಲಿ 2 ಸಾವಿರಕ್ಕೂ ಹೆಚ್ಚಿನ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಮೂದಲಿಸಿದ್ದಾರೆ.

ಕೆರೆ ನೀರಿಗಾಗಿ ಕಾಲ್ನಡಿಗೆ ಬೃಹತ್ ಪಾದಯಾತ್ರೆ ಕಾರ್ಯಕ್ರಮಕ್ಕೆ ತಾಲೂಕಿನ ಶಿವಪುರ ಕಲ್ಲುಕಟ್ಟೆ ಜಲಾಶಯದ ಬಳಿ ಉದ್ಘಾಟಿಸಿ, ಕಾಂಗ್ರೆಸ್ ಸರಕಾರ ರೈತರ ಪಾಲಿಗೆ ಸಂಜೀವಿನಿಯಾಗಿರದೆ ವಿಷವಾಗಿ ಪರಿಣಮಿಸಿದೆ. ಅದರಿಂದಲೇ ರಾಜ್ಯದಲ್ಲಿ ಈವರೆಗೆ ಒಟ್ಟು 2 ಸಾವಿರಕ್ಕೂ ಹೆಚ್ಚಿನ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದರು.

ಕರ್ನಾಟಕ ಎಟಿಎಂ: ಬಿಹಾರ ಚುನಾವಣೆಗೆ ಕರ್ನಾಟಕದಿಂದ ಹಣವನ್ನು ರಾಜ್ಯ ಸರ್ಕಾರ ನೀಡಿದೆ. ಈ ಮೂಲಕ ಹೈಕಮಾಂಡ್ ಕರ್ನಾಟಕವನ್ನು ತನ್ನ ಎಟಿಎಂ ಆಗಿ ಬಳಸಿಕೊಳ್ಳುತ್ತಿದೆ. ಸಿಎಂ ಕುರ್ಚಿಗಾಗಿ ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ನಡುವಿನ ಗುದ್ದಾಟದ ಸುದ್ದಿಯೇ ಹೊರತು ಎರಡು ವರ್ಷದಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ. ಐಸಿಯುನಲ್ಲಿರುವ ಸರಕಾರವನ್ನು ತೆಗೆದು ಚಟ್ಟ ಕಟ್ಟಿದ್ದಾರೆ. ಮುಂದೆ ಹೊರಲು ಪೈಪೋಟಿ ಶುರುವಾಗಿದ್ದು, ತಲೆಗೊಳ್ಳಿ ಇಕ್ಕಲು ನಾನಾ–ನೀನಾ ಎಂಬ ಕಿತ್ತಾಟ ನಡೆಯುತ್ತಿದೆ ಎಂದು ವ್ಯಂಗ್ಯವಾಡಿದರು.

ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ನಮ್ಮ ತಂದೆ



ಬಿಜೆಪಿ ಹಮ್ಮಿಕೊಂಡಿದ್ದ ಕೆರೆ ನೀರಿಗಾಗಿ ಕಾಲ್ನಡಿಗೆ ಪಾದಯಾತ್ರೆಯಲ್ಲಿ ವಿಪಕ್ಷ ನಾಯಕ ಆರ್.ಅಶೋಕ್, ಸಂಸದ ಯದುವೀರ್, ನಿರಂಜನ್ ಕುಮಾರ್ ಇತರರು ಪಾಲ್ಗೊಂಡಿದ್ದರು.

ಮೈಸೂರು ರಾಜರಗಿಂತ ಹೆಚ್ಚು ಕೆಲಸ ಮಾಡಿದ್ದಾರೆ ಎನ್ನುವ ಬುರುಡೆ ದಾಸನಿಗೆ ಇದರ ಅರಿವಿಲ್ಲವೇ ಎಂದು ಹೆಸರೇಳದೇ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯರನ್ನು ಟೀಕಿಸಿದರು. ನವೆಂಬರ್ ಕ್ರಾಂತಿಯಿಂದ ಜನರಿಗೆ ವಾಂತಿ ಶುರುವಾಗಿದೆ. ಸರಕಾರ ನಿದ್ರೆ ಮಾಡುತ್ತಿದ್ದು, ಜನರ ಸಮಸ್ಯೆಗೆ ಪರಿಹಾರ ನೀಡುತ್ತಿಲ್ಲ ಎಂದು ಆರೋಪಿಸಿದರು.

ಸಂಸದ ಯದುವೀರ್ ಮಾತನಾಡಿ ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ ಜಿಲ್ಲೆಯ 24 ಕ್ಷೇತ್ರದಲ್ಲಿ ಕೇವಲ ಒಬ್ಬರೇ ಶಾಸಕರು ಗೆದ್ದಿದ್ದರೂ ಮುಖ್ಯಮಂತ್ರಿಯಾಗಿದ್ದ ಯಡಿಯೂರಪ್ಪನವರು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಅನುದಾನ ನೀಡಿದರು. ಅಲ್ಲದೇ ನೀರಾವರಿ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ಅಭಿವೃದ್ಧಿ ಮಾಡಿದರು. ಆದರೂ ಸಹ ಜನರು ಕಾರಣಾಂತರದಿಂದ ಸ್ಪಂದಿಸಿಲ್ಲ ಎಂದು ಬೇಸರಿಸಿದರು. ನಾವು ಶಾಶ್ವತ ಪರಿಹಾರಕ್ಕೋಸ್ಕರ ಯೋಚನೆ ಮಾಡಬೇಕು. ಇದಕ್ಕಾಗಿ ಬಿಜೆಪಿ ಕಡೆ ಜನರು ನೋಡಬೇಕು. 2028ರಲ್ಲಿ ಎಲ್ಲಾ ಕಡೆ ಕಮಲ ಅರಳಿಸಬೇಕು ಎಂದು ತಿಳಿಸಿದರು.

ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ ಸಿಎಂ ಆಗಿದ್ದ ವೇಳೆ ಯಡಿಯೂರಪ್ಪನವರು 212 ಕೋಟಿ ಅನುದಾನ ನೀಡಿದ ಕಾರಣ ಜಿಲ್ಲೆಯ 22 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಜಾರಿ ಆಯಿತು. 2019 ರಿಂದ ಸತತವಾಗಿ ತುಂಬಿ ಕೊಂಡು ಬಂತು. ಆದರೆ 2023ರಲ್ಲಿ ಕಾಂಗ್ರೆಸ್ ಸರ್ಕಾರ ಬಂದು ಚಾಮರಾಜನಗರಕ್ಕೆ ದರಿದ್ರ ಅಂಟಿಕೊಂಡಿತು. ಈ ಒಳ್ಳೆ ಕೆಲಸ ಮುಂದುವರೆಸಿಕೊಂಡು ಹೋಗಲು ಕಾಂಗ್ರೆಸ್‌ಗೆ ಆಗುತ್ತಿಲ್ಲ ಎಂದು ಕಿಡಿಕಾರಿದರು.

ಮಾಜಿ ಶಾಸಕ, ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್ ಮಾತನಾಡಿ ಬಂಡೀಪುರ ಕಾಡಂಚಿನಲ್ಲಿ ಹುಲಿ, ಚಿರತೆ ದಾಳಿ ಹೆಚ್ಚಿದ್ದು, ರೈತರು ಪ್ರಾಣ ಕಳೆದುಕೊಳ್ಳುತ್ತಿದ್ದರೂ ಅರಣ್ಯ ಇಲಾಖೆ ನಿರ್ಲಕ್ಷ್ಯ ವಹಿಸಿದೆ. ಅಲ್ಲದೇ ರೈತರ ಕಷ್ಟ ಕೇಳುವ ಬದಲು ಬೊಮ್ಮಲಾಪುರ ರೈತರ ಮೇಲೆ ಕೇಸ್ ಹಾಕಿಸಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಎನ್. ಮಹೇಶ್, ಬಾಲರಾಜು, ನಾಗೇಂದ್ರ, ಹರ್ಷವರ್ಧನ್, ಮಂಡಲ ಅಧ್ಯಕ್ಷ ಮಹದೇವ ಪ್ರಸಾದ್, ಮುಖಂಡರಾದ ಎಲ್.ಸುರೇಶ್, ನೂರೊಂದು ಶೆಟ್ಟಿ ರಾಮಚಂದ್ರು, ಎನ್.ಮಲ್ಲೇಶ್, ನಗರಸಭಾ ಅಧ್ಯಕ್ಷ ಸುರೇಶ್ ನಾಯಕ, ಮಲ್ಲಿಕಾರ್ಜುನ ಸ್ವಾಮಿ, ಮಂಜುನಾಥ್, ಪ್ರಣಯ್, ಸುನೀಲ್ ಮೂಡ್ಲು, ಹುಂಡೀಪುರ ಮಂಜು, ಸುರೇಶ್ ಸೇರಿದಂತೆ ಸಾವಿರಕ್ಕೂ ಅಧಿಕ ಮಂದಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಪಾದಯಾತ್ರೆ : ಸಭೆಯ ನಂತರ ಶಿವಪುರದಿಂದ 2 ಕಿಮೀ ವರೆಗೆ ಬಿಜೆಪಿ ನಾಯಕರು ಪಾದಯಾತ್ರೆಯಲ್ಲಿ ಬಂದು ನಂತರ ತಮ್ಮ ತಮ್ಮ ಕಾರುಗಳನ್ನೇರಿದರು. ಕಾರ್ಯಕರ್ತರು ಮಧ್ಯಾಹ್ನ 1.30ಕ್ಕೆ ಪಾದಯಾತ್ರೆ ಆರಂಭಿಸಿ ಸಂಜೆ 4.30ರ ಸಮಯದಲ್ಲಿ 12 ಕಿಮೀ ದೂರದ ಗುಂಡ್ಲುಪೇಟೆಗೆ ಆಗಮಿಸಿ ಪಾದಯಾತ್ರೆ ಅಂತ್ಯಗೊಳಿಸಿದರು.

ಸಾಕ್ಷಿದಾರರಿಗೆ ಜಿಲ್ಲಾ ಹೆಚ್ಚುವರಿ ಸೆಷನ್ಸ್ ನ್ಯಾಯಾಲಯ ಉದ್ಘೋಷಣಾ ವಾರಂಟ್

ಚಾಮರಾಜನಗರ, ನ. 5–ನ್ಯಾಯಾಲಯಕ್ಕೆ ಹಾಜರಾಗದೆ ಆದೇಶ ಉಲ್ಲಂಘನೆಗೆ ಒಳಗಾಗಿರುವ ನಂಜನಗೂಡು ತಾಲೂಕಿನ ಗೆಜ್ಜಗನಹಳ್ಳಿ ಗ್ರಾಮದ ಮಾಧುರಿ ಅಲಿಯಾಸ್ ಮಾಧುರಿ ದೀಕ್ಷಿತ್‌ರಿಗೆ ಚಾಮರಾಜನಗರ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಉದ್ಘೋಷಣಾ ವಾರಂಟ್‌ನ್ನು ಹೊರಡಿಸಲು ಆದೇಶಿಸಿದೆ.

ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಹಲವಾರು ಬಾರಿ ಸಮನ್ಸ್ ನೀಡಿದ್ದರೂ ಸಾಕ್ಷೀದಾರರಾಗಿರುವ ಮಾಧುರಿ ನ್ಯಾಯಾಲಯಕ್ಕೆ ಹಾಜರಾಗದ ಕಾರಣ ಇವರ ವಿರುದ್ಧ ಉದ್ಘೋಷಣಾ ವಾರಂಟ್ ಹೊರಡಿಸಲು ನ್ಯಾಯಾಧೀಶರು ಆದೇಶಿಸಿದ್ದಾರೆ.

ಮಾಧುರಿ ದೀಕ್ಷಿತ್‌ರವರ ಇರುವಿಕೆಯ ಬಗ್ಗೆ ಮಾಹಿತಿ ದೊರೆತಲ್ಲಿ ಕೊಳ್ಳೇಗಾಲ ಪಟ್ಟಣ ಠಾಣೆಗೆ ಇಲ್ಲವೆ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಮಾಹಿತಿ ನೀಡುವಂತೆ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಪದಗ್ರಹಣ



ಜಿಲ್ಲಾ ವಕೀಲರ ಸಂಘದ ಪದಾಧಿಕಾರಿಗಳು ಬುಧವಾರ ಪದಗ್ರಹಣ ಮಾಡಿದರು.

ಚಾಮರಾಜನಗರ, ನ.5–ಜಿಲ್ಲಾ ವಕೀಲರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಹಿರಿಯ ವಕೀಲ ಪುಟ್ಟಸ್ವಾಮಿ ರಾಮಸಮುದ್ರ, ಪ್ರಧಾನ ಕಾರ್ಯದರ್ಶಿಯಾಗಿ ಮರಿಯಾಲದ ಹುಂಡಿ ಎಂ.ಶಿವರಾಮು ಅಧಿಕಾರ ವಹಿಸಿಕೊಂಡರು.

ನಗರದ ಜಿಲ್ಲಾ ವಕೀಲರ ಸಂಘದ ಭವನದಲ್ಲಿ ನಡೆದ ಪದಗ್ರಹಣ ಸಮಾರಂಭದಲ್ಲಿ ನೂತನ ಅಧ್ಯಕ್ಷ ಪುಟ್ಟಸ್ವಾಮಿ ರಾಮಸಮುದ್ರ ಮಾತನಾಡಿ, ಮುಂದಿನ ದಿನಗಳಲ್ಲಿ ಹಿರಿಯ ವಕೀಲರ ಸಲಹೆ ಮತ್ತು ಸಹಕಾರದೊಂದಿಗೆ ಕಿರಿಯ ವಕೀಲರಿಗೆ ಅನುಕೂಲವಾಗುವಂತೆ ಸಂಘದಲ್ಲಿ ಕೆಲಸ ನಿರ್ವಹಿಸಲು ಪ್ರಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ತಿಳಿಸಿದರು.

ನಂತರ ಪ್ರಧಾನ ಕಾರ್ಯದರ್ಶಿ ಎಂ.ಶಿವರಾಮು ಮಾತನಾಡಿ, ಕಿರಿಯ ವಕೀಲರು ತಮ್ಮ ವೃತ್ತಿಯಲ್ಲಿ ಪರಿಣತಿ ಪಡೆಯಬೇಕೆಂಬ ಉದ್ದೇಶದಿಂದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಉಪಾಧ್ಯಕ್ಷರಾದ ರಂಗಸ್ವಾಮಿ, ಜಂಟಿ ಕಾರ್ಯದರ್ಶಿ ಸಿ.ಸಿ. ರಮೇಶ್, ಖಜಾಂಚಿ ನಾಗಮ್ಮ, ಸಾಮಾನ್ಯ ಸದಸ್ಯರಾಗಿ ಎಂ.ವಿಜಯ್, ಎನ್.ಮಲ್ಲೇಶ್ ಪ್ರಭು ಇನ್ನಿತರರು ಹಾಜರಿದ್ದರು.

ಬೆಳಕು ರಾಜ್ಯೋತ್ಸವ ಪ್ರಶಸ್ತಿಗೆ ಸಾಹಿತಿ ಡಾ.ನಂಜುಂಡಸ್ವಾಮಿ ಹರದನಹಳ್ಳಿ ಆಯ್ಕೆ

ಚಾಮರಾಜನಗರ, ನ.5–ಬೆಳಕು ಸಾಹಿತ್ಯ, ಶೈಕ್ಷಣಿಕ, ಸಾಂಸ್ಕೃತಿಕ ಟ್ರಸ್ಟ್ ನೀಡುವ ರಾಷ್ಟ್ರಮಟ್ಟದ ಬೆಳಕು ರಾಜ್ಯೋತ್ಸವ ಪ್ರಶಸ್ತಿಗೆ ಪಿರಿಯಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಸಾಹಿತಿ ಡಾ.ನಂಜುಂಡಸ್ವಾಮಿ ಹರದನಹಳ್ಳಿ ಭಾಜನರಾಗಿದ್ದಾರೆ.



ಬೆಂಗಳೂರು ಚಾಮರಾಜಪೇಟೆ ಅಕ್ಕಮಹಾದೇವಿ ಸಭಾಂಗಣದಲ್ಲಿ ಬೆಳಕು ಸಾಹಿತ್ಯ, ಶೈಕ್ಷಣಿಕ, ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ನ.30 ರಂದು ನಡೆಯುವ ರಾಷ್ಟ್ರಮಟ್ಟದ ಬೆಳಕು ಸಂಭ್ರಮದಲ್ಲಿ ಸಾಹಿತಿ ಡಾ.ನಂಜುಂಡಸ್ವಾಮಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಸಾಹಿತ್ಯ ಕ್ಷೇತ್ರದಲ್ಲಿ ಮಾಡುತ್ತಿರುವ ಸೇವೆಗಾಗಿ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರಮಟ್ಟದ ಬೆಳಕು ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾದ ಡಾ.ನಂಜುಂಡಸ್ವಾಮಿ ಹರದನಹಳ್ಳಿ ಅವರನ್ನು ಬೆಳಕು ಸಂಸ್ಥೆಯ ಜಿಲ್ಲಾಧ್ಯಕ್ಷ ಜ. ಸುರೇಶ್ ನಾಗ್ ಅಭಿನಂದಿಸಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821– 2496522/23

ಬೇಕಾಗಿದ್ದಾರೆ
ಮೈಸೂರಿನ ಗೋಕುಲಂ ಒಂದನೇ ಹಂತದಲ್ಲಿ ಮನೆಗೆ ಅಡಿಗೆ (VEG-NON VEG) ಮಾಡಲು ಮಹಿಳೆ ಬೇಕಾಗಿದ್ದಾರೆ
9448051099

ನಿರ್ಮಲಧಾರೆ ಸಲ್ಯೂಷನ್ಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
Mob: 9740893554

MUDA Site for Sale
ಮೈಸೂರಿನ ಪ್ರತಿಷ್ಠಿತ BVL PREMIO ಬಡಾವಣೆಯಲ್ಲಿ 40x60 ಸೈಟ್.
Mob: 9886048471

SITE FOR SALE
40x60
North Face 60 feet road, Dhattagalli 3rd stage near PKV acharya Bhavana, contact
9986348778

HOUSE FOR RENT
2 BHK with dining hall, Vitrified -flooring, Solar & Geyser @ Vijayanagar III Stage, Rent -13000 Advance : 1 Lakh Negotiable
9916314393

MUDA Site for SALE
ಕ್ರೈಸ್ತ್ ಪಬ್ಲಿಕ್ ಸ್ಕೂಲ್ ಪಕ್ಕ ನ್ಯಾಯಾಂಗ ಬಡಾವಣೆಯಲ್ಲಿ ಸೈಟ್‌ಗಳು ಲಭ್ಯ
Mob: 9886048471

TV ಕೆಟ್ಟಿದೆಯೇ ?
LED, LCD TV ಗಳನ್ನು ರಿಪೇರಿ ಮಾಡಿಕೊಡಲಾಗುತ್ತದೆ. ನಮ್ಮಲ್ಲಿ Seconds LED TV ಗಳು ದೊರೆಯುತ್ತದೆ.
Teju Electronics, ಅಗ್ರಹಾರ
Mob: 9342114069

ಬೂಂದಿ ದೊರೆಯುತ್ತದೆ
ಖಾರ ಬೂಂದಿ ಕೆಜಿಗೆ ರೂ. 250
ಸಿಹಿ ಬೂಂದಿ ಕೆಜಿಗೆ ರೂ. 250
*ಷರತ್ತುಗಳು ಅನ್ವಯಿಸುತ್ತದೆ
Mob: 96326 57007

ಬೇಕಾಗಿದ್ದಾರೆ
ಅಕೌಂಟೆಂಟ್
ಟ್ಯಾಲಿ ಕಲಿತಿರಬೇಕು
ಆಕರ್ಷಕ ಸಂಬಳ
ಜೈ ಭಾರತ್ ಮಾರ್ಕೆಟಿಂಗ್
ಅಶೋಕ ರಸ್ತೆ, ಮೈಸೂರು
